
23 ಆಗಸ್ಟ್ 2025 ಶನಿವಾರ ಬೆಲೆ ₹ 2.00 ಸಂಪುಟ : 19 ಸಂಚಿಕೆ : 164 | ಪುಟ-4 | ಹಾಸನ | E-mail : prajodayahsn@gmail.com | RNI NO: KARKAN/2007/22629

ಜನಮನದ ದನಿ

# ಪ್ರಜೋದಯ

ದಿನಪತ್ರಿಕೆ

ಸಂಪಾದಕ : ಜೆ.ಆರ್. ಕೆಂಚೇಗೌಡ



ವಿರೋಧ ಪಕ್ಷಗಳ ಉಪರಾಷ್ಟ್ರಪತಿ ಅಭ್ಯರ್ಥಿ ನ್ಯಾ. ಬಿ.ಸುದರ್ಶನ ರೆಡ್ಡಿ ಅವರು ನಕ್ಸಲರನ್ನು ಬೆಂಬಲಿಸುತ್ತಾರೆಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಶುಕ್ರವಾರ ಆರೋಪಿಸಿದರು.



ಬೈಸಿಕಲ್‌ಗಳಿಂದ ಬಿಲಿಯನ್‌ಗಳ ತನಕ » 2



ಉತ್ತಮ ವಿದ್ಯಾಭ್ಯಾಸದಿಂದ ಆರ್ಥಿಕ ಸ್ವಾವಲಂಬನ » 3



ರಾಜ್ಯದ ಅಭಿವೃದ್ಧಿಗೆ ಬಿಜೆಪಿ ಬಾಕಿಯೇ ಅಡ್ಡಿ » 4

# ಅನುದಾನಕ್ಕಾಗಿ ಸದನದಲ್ಲಿ ಶಾಸಕರ ಧರಣಿ

## ವಿಪಕ್ಷಗಳ ಕಡೆಗಣೆ: ಸದನದ ಬಾವಿಗಿಳಿದ ಬಿಜೆಪಿ-ಜೆಡಿಎಸ್ ಸದಸ್ಯರು | ಪ್ರತಿಭಟನೆಯೊಂದಿಗೆ ಮುಂಗಾರು ಅಧಿವೇಶನ ಮುಕ್ತಾಯ

• ಪ್ರಜೋದಯ ವರದಿ

**ಬೆಂಗಳೂರು:** ಸರ್ಕಾರ ಅನುದಾನ ಹಂಚಿಕೆಯಲ್ಲಿ ತಾರತಮ್ಯ ಧೋರಣೆ ಅನುಸರಿಸಿ, ಆಡಳಿತ ಪಕ್ಷದ ಶಾಸಕರಿಗೆ ಅನುದಾನ ನೀಡಿದೆ. ಆದರೆ, ವಿಪಕ್ಷಗಳನ್ನು ಕಡೆಗಣಿಸಲಾಗಿದೆ ಎಂದು ಆರೋಪಿಸಿ ವಿಧಾನಸಭೆಯಲ್ಲಿ ಬಿಜೆಪಿ ಮತ್ತು ಜೆಡಿಎಸ್ ಸದಸ್ಯರು ಸದನದ ಬಾವಿಗಿಳಿದು ಶುಕ್ರವಾರ ಪ್ರತಿಭಟನೆ ನಡೆಸಿದರು.

ಧರಣಿ ನಿರತ ಶಾಸಕರನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಮಾಧಾನಪಡಿಸಿ, ಕಾಫಿ-ಟಿ ನೀಡಿ, ನಿಮ್ಮಿಂದಲೇ ಆಕ್ಷನ್ ಪ್ಲಾನ್ ತಗೆದುಕೊಂಡು, ಹಣ ಬಿಡುಗಡೆ ಮಾಡುತ್ತೇನೆಂದು ಭರವಸೆ ನೀಡಿದರು. ಮುಖ್ಯಮಂತ್ರಿ ಮಾತಿನ ಬಳಿಕ ಸದನದ ಬಾವಿಯಿಂದ ಜೆಡಿಎಸ್ ಹಾಗು ಬಿಜೆಪಿ ಶಾಸಕರಿಗೆ ಅನುದಾನ ಕೊಡುತ್ತೇನೆ. ಕಾಂಗ್ರೆಸ್ ಶಾಸಕರ ಕ್ಷೇತ್ರಕ್ಕೂ ಅನುದಾನ ಬಿಡುಗಡೆ ಮಾಡಲಾಗುವುದು. ಇಷ್ಟೆಲ್ಲಾ ತೊಂದರೆ ಇದ್ದರೂ ಕೂಡ 8,000 ಕೋಟಿ ರೂ. ಇಟ್ಟುಕೊಂಡಿದ್ದೇನೆ. ಎಲ್ಲರಿಗೂ ಹಂಚುತ್ತೇನೆ. ಯಾವುದೇ ಅಭಿವೃದ್ಧಿ ಕಾರ್ಯಗಳಿಗೂ ಕುಂಠಿತ ಆಗುವುದಿಲ್ಲ. ಶಾಸಕರ ಕ್ಷೇತ್ರಗಳಿಗೆ ಅನುದಾನ ಕೇಳಿದ್ದಾರೆ. 224 ಕ್ಷೇತ್ರಗಳಿಗೂ ಕೊಡುತ್ತೇವೆ. ನಮ್ಮ ಕರ್ನಾಟಕ ಅಭಿವೃದ್ಧಿಯಲ್ಲಿ ನಡೆಯುತ್ತಿದೆ. ಅಭಿವೃದ್ಧಿಯಾಗುತ್ತಿದೆ, ಗ್ಯಾರಂಟಿ ಯೋಜನೆಗಳನ್ನು ಕೂಡಾ ಸಮರ್ಪಕವಾಗಿ ಜಾರಿಗೊಳಿಸಿದ್ದೇವೆ ಎಂದರು.

ರಾಜ್ಯದಲ್ಲಿ ಯಾವುದಾದರೂ ನುಡಿದಂತೆ ನಡೆದಿರುವ ಸರ್ಕಾರ ಇದ್ದರೆ ಅದು ನಮ್ಮ ಕಾಂಗ್ರೆಸ್ ಸರ್ಕಾರ. ಇದನ್ನು ಎದೆ ಮುಟ್ಟಿಕೊಂಡು ಹೇಳುತ್ತೇವೆ. ಬಿಜೆಪಿಯವರು 600 ಭರವಸೆ ಕೊಟ್ಟು ಈಡೇರಿಸಿದ್ದು 70 ಭರವಸೆ ಮಾತ್ರ. ಆದರೆ, ನಾವು ಕೊಟ್ಟ ಎಲ್ಲಾ ಭರವಸೆಗಳನ್ನು ಈಡೇರಿಸಿಯೇ ತೀರುತ್ತೇವೆ. ಹಾಗಾಗಿ ಯಾವುದೇ ಪ್ರಜೆ ಕೂಡ ಈ ಬಗ್ಗೆ ಅನುಮಾನ ಪಡುವ ಅವಶ್ಯಕತೆ ಇಲ್ಲವೆಂದು ಹೇಳಿದರು.

**ಪರಿಷತ್‌ನಲ್ಲೂ ಧರಣಿ: ಕಲಾಪ ಅಂತ್ಯ**

9 ದಿನಗಳಲ್ಲಿ ಒಟ್ಟು 54 ಗಂಟೆಯಷ್ಟು ನಡೆದ ವಿಧಾನ ಪರಿಷತ್ತಿನ ಕಲಾಪವು, ಕಡೆಯ ದಿನ ವಿರೋಧ ಪಕ್ಷಗಳ ಸದಸ್ಯರ ಧರಣಿ ಯೊಂದಿಗೆ ಕೊನೆಗೊಂಡಿತು. ಶುಕ್ರವಾರದ ಕಲಾಪದಲ್ಲಿ ಪ್ರಶ್ನೋತ್ತರಕ್ಕೂ ಮುನ್ನ ಬಿಜೆಪಿ ಸದಸ್ಯ ಶಶಿಲ್ ಜಿ.ನಮೋಶಿ ಅವರು, ಆ.27ರಂದು ಗಣೇಶನ ಹಬ್ಬವಿದೆ. ಈ ಸಂದರ್ಭದಲ್ಲಿ ರಾತ್ರಿ 10ರ ನಂತರ ಡಿ.ಜೆ ಬಳಸಬಾರದು ಎಂದು ರಾಜ್ಯ ಸರ್ಕಾರ ಆದೇಶಿಸಿದೆ. ತಿಲಕರು ಸಾರ್ವಜನಿಕ ಗಣೇಶೋತ್ಸವ ಆರಂಭಿಸಿದಾಗ ಬ್ರಿಟಿಷರೇ ಅಡ್ಡಿಪಡಿಸಿರಲಿಲ್ಲ. ಆದರೆ, ಕಾಂಗ್ರೆಸ್ ಸರ್ಕಾರ ನಮ್ಮ ಹಬ್ಬಕ್ಕೆ ಅಡಚಣೆ ಮಾಡುತ್ತಿದೆ ಎಂದು ತಕರಾರು ಎತ್ತಿದರು. ಸಭಾನಾಯಕ ಎನ್.ಎಸ್.ಭೋಸರಾಜು, ಆಯಾ ಜಿಲ್ಲೆಯಲ್ಲಿನ ಸ್ಥಿತಿಗತಿಯನ್ನು ನೋಡಿಕೊಂಡು ಅನುಮತಿ ನೀಡುವ ಅಧಿಕಾರ ಜಿಲ್ಲಾಧಿಕಾರಿಗಳಿಗೆ ಇದೆ. ಇದರಲ್ಲಿ ಸರ್ಕಾರದ ಹಸ್ತಕ್ಷೇಪವಿಲ್ಲ ಎಂದರು.

ಅವರ ಉತ್ತರದಿಂದ ತೃಪ್ತರಾಗದ ಬಿಜೆಪಿ ಸದಸ್ಯರು, ಈ ಆದೇಶವನ್ನು ಸರ್ಕಾರ ಹಿಂಪಡೆಯಬೇಕೆಂದು ಒತ್ತಾಯಿಸಿದರು. ಸಭಾನಾಯಕರು ಅದಕ್ಕೆ ಪ್ರತಿಕ್ರಿಯೆ ನೀಡದೇ ಇದ್ದಾಗ, ಹಿಂದೂ ವಿರೋಧಿ ಸರ್ಕಾರಕ್ಕೆ ಧಿಕ್ಕಾರ ಎಂದು ಕೂಗಿದರು. ಆಗ ವಿರೋಧ ಪಕ್ಷಗಳ ಸದಸ್ಯರು ಸಭಾಪತಿ ಪೀಠದ ಎದುರಿಗೆ ಧಾವಿಸಿ, ಸರ್ಕಾರದ ವಿರುದ್ಧ ಘೋಷಣೆ ಕೂಗಿದರು. ಸಭಾಪತಿ ಹೊರಟ್ಟಿ ಅವರು ಪರಿಷತ್ತಿನ ಕಲಾಪವನ್ನು ಅನಿರ್ದಿಷ್ಟಾವಧಿಯವರೆಗೆ ಮುಂದೂಡಿದರು.



### ಅಧಿವೇಶನಕ್ಕೆ ತೆರೆ : 39 ಮಸೂದೆ ಅಂಗೀಕಾರ

2 ವಾರಗಳ ಕಾಲ ನಡೆದ ಮುಂಗಾರು ಅಧಿವೇಶನಕ್ಕೆ ಶುಕ್ರವಾರ ಅಧಿಕೃತವಾಗಿ ತೆರೆ ಬಿದಿದ್ದು, ಪ್ರತಿಪಕ್ಷಗಳ ವಿರೋಧದ ನಡವೆಯೇ ಒಟ್ಟು 39 ಮಸೂದೆಗಳನ್ನು ಅಂಗೀಕರಿಸಲಾಗಿದೆ.
ಈ ಬಗ್ಗೆ ಸ್ಪೀಕರ್ ಯು.ಟಿ.ಖಾದರ್ ಅವರು, ಕಳೆದ 9 ದಿನಗಳಲ್ಲಿ ಒಟ್ಟು 70 ಗಂಟೆಗಳ ಕಾಲ ಅಧಿವೇಶನ ನಡೆಸಲಾಗಿದೆ. ಈ ಬಾರಿಯ ಅಧಿವೇಶನದಲ್ಲಿ ಅತೀ ಹೆಚ್ಚು ಅಂದರೆ 39 ವಿಧೇಯಕಗಳನ್ನು ಆಡಳಿತ ಪಕ್ಷ ಮಂಡನೆ ಮಾಡಿ ಅದಕ್ಕೆ ಅನುಮೋದನೆ ಪಡೆದಿದ್ದು, ಒಂದು ಇತಿಹಾಸ ಸೃಷ್ಟಿಯಾಗಿದೆ. ಇತಿಹಾಸದಲ್ಲೇ ಮೊದಲ ಬಾರಿಗೆ ಅತೀ ಹೆಚ್ಚು ಮಸೂದೆಗಳ ಮಂಡನೆ ಮಾಡಿ, ಅನುಮೋದನೆ ನೀಡಲಾಗಿದೆ. ಒಟ್ಟು 2,306 ಪ್ರಶ್ನೆಗಳು ಸ್ವೀಕೃತವಾಗಿದ್ದು, ಈ ಪೈಕಿ 2,199 ಪ್ರಶ್ನೆಗಳನ್ನು ಅಂಗೀಕರಿಸಲಾಗಿತ್ತು ಎಂದು ತಿಳಿಸಿದರು.

## ದಸರಾ ಉದ್ಘಾಟನೆ : ಬಾನು ಮುಷ್ತಾಕ್‌ಗೆ ಒಲಿದ ಅದೃಷ್ಟ

• ಪ್ರಜೋದಯ ವರದಿ

**ಬೆಂಗಳೂರು:** ಲೇಖಕಿ ಶ್ರೀಮತಿ ಬಾನುಮುಷ್ತಾಕ್ ಅವರಿಗೆ ವಿಶ್ವ ವಿಖ್ಯಾತ ದಸರಾ ಮಹೋತ್ಸವಕ್ಕೆ ಚಾಲನೆ ನೀಡುವ ಅವಕಾಶ ಒಲಿದು ಬಂದಿದೆ.

ಈ ವಿಚಾರವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೇ ಖುದ್ದು ಮಾಧ್ಯಮಗಳ ಮುಂದೆ ಶುಕ್ರವಾರ ಪ್ರಕಟಿಸಿದರು. ಅಂತರಾಷ್ಟ್ರೀಯ ಬೂಕರ್ ಪ್ರಶಸ್ತಿ ಪಡೆದ ಗೌರವಕ್ಕಾಗಿ ಬಾನುಮುಷ್ತಾಕ್ ಅವರಿಗೆ ಈ ಅವಕಾಶ ನೀಡಲಾಗುತ್ತಿದೆ ಎಂದು ಅವರು ತಿಳಿಸಿದರು.

ರಾಜ್ಯದ ಸಾಂಸ್ಕೃತಿಕ ನಗರವೆಂದೇ ಬಿಂಬಿಸಲ್ಪಟ್ಟಿರುವ ಮೈಸೂರಿನಲ್ಲಿ ಸೆ.22 ರಿಂದ ಅ.2ರ ತನಕ 11 ದಿನಗಳ ಕಾಲ ದಸರಾ ಮಹೋತ್ಸವ ಜರುಗಲಿದೆ. ಮೈಸೂರು ಜಿಲ್ಲಾಡಳಿತದ ವತಿಯಿಂದ ಶೀಘ್ರದಲ್ಲಿಯೇ ಬಾನು ಮುಷ್ತಾಕ್ ಅವರನ್ನು ಅಧಿಕೃತವಾಗಿ ಆಹ್ವಾನಿಸಲಾಗುವುದು.

ಪ್ರಗತಿಪರ ಚಳುವಳಿಗಳಲ್ಲಿ ತೊಡಗಿಕೊಂಡ ಹಲವರ ಬಳಗದಲ್ಲಿ ಗುರುತಿಸಿಕೊಂಡಿದ್ದ ಬಾನುಮುಷ್ತಾಕ್ ಅವರು, ರೈತ ಚಳುವಳಿ, ದಲಿತ ಚಳುವಳಿ ಕರ್ನಾಟಕದಲ್ಲಿ ಬಲಿಷ್ಟವಾಗಿದ್ದ ಸಂದರ್ಭದಲ್ಲಿ ಅವರು ಲಂಕೇಶ್ ಪತ್ರಿಕೆಯಲ್ಲಿ ರಾಜಕೀಯ, ಸಾಮಾಜಿಕ ಹಾಗು ಸಾಂಸ್ಕೃತಿಕ ಬರಹಗಳನ್ನು ಬರೆಯುವ ಮೂಲಕ ಪತ್ರಕರ್ತರಾಗಿ ಗುರುತಿಸಿಕೊಂಡಿದ್ದರು. ಅದೇ ಕಾಲಘಟ್ಟದಲ್ಲಿ ಅವರು ಲೇಖನ, ಪ್ರಬಂಧ ಮತ್ತಿತರ ವಸ್ತು ನಿಷ್ಠ ಹಾಗು ವಿಶೇಷವಾಗಿ ಮಹಿಳೆಯರು ಎದುರಿಸುತ್ತಿರುವ ಸಮಸ್ಯೆಗಳ ಕುರಿತ ಬರಹಗಳ ಮೂಲಕ ಮುಂಚೂಣಿಯ ಲೇಖಕರಾಗಿ ಗುರುತಿಸಿಕೊಂಡವರು.





ಇತ್ತೀಚೆಗೆ ಕರ್ನಾಟಕ ಮೂಲದವರೇ ಆದ ಬ್ರಿಟನ್‌ನಲ್ಲಿ ನೆಲೆಸಿರುವ ಲೇಖಕಿ ದೀಪಾಬಾಸ್ತಿ ಅವರು ಬಾನುಮುಷ್ತಾಕ್ ಅವರು ಕನ್ನಡದಲ್ಲಿ ಬರೆದ ಎದೆಯ ಹಣತೆ ಕೃತಿಯನ್ನು ಆಂಗ್ಲಭಾಷೆಗೆ ಅನುವಾದಿಸಿದ್ದರು. ಆ ಕೃತಿಯು ಬೂಕರ್ ಪ್ರಶಸ್ತಿಯನ್ನು ತಂದುಕೊಡುವ ಮೂಲಕ ಬಾನು ಮುಷ್ತಾಕ್ ಅವರ ಹಿರಿಮೆಗೆ ನಾಂದಿಯಾಯಿತು.

ಬೂಕರ್ ಪ್ರಶಸ್ತಿ ದಕ್ಕಿದ ಬೆಳವಣಿಗೆಯ ಹಿನ್ನಲೆಯಲ್ಲಿ ಕೇಂದ್ರ ಕನ್ನಡ ಸಾಹಿತ್ಯ ಪರಿಷತ್ ಬಾನು ಮುಷ್ತಾಕ್ ಅವರನ್ನು ಸದ್ಯದಲ್ಲಿಯೇ ಬಳ್ಳಾರಿಯಲ್ಲಿ ನಡೆಯಲಿರುವ ಅಖಿಲ ಭಾರತ ಸಾಹಿತ್ಯ ಸಮ್ಮೇಳನದ ಅಧ್ಯಕ್ಷಸ್ಥಾನದ ಅವಕಾಶವನ್ನು ನೀಡಿದೆ. ಸಾಹಿತ್ಯ ವಲಯದಲ್ಲಿ ಗುರುತಿಸಿಕೊಂಡ ಎಡ ಪಂಥಿಯ ಲೇಖಕರು ಮಹೇಶ್ ಜೋಷಿ ವಿರುದ್ಧ ಸರ್ಕಾರದ ಮಟ್ಟದಲ್ಲಿ ಭ್ರಷ್ಟಾಚಾರ ಆರೋಪ ಹೊರಿಸಿ ಅವರ ಪದಚ್ಯುತಿಗೆ ಒತ್ತಡ ಹೇರುತ್ತಿರುವ ಬೆಳವಣಿಗೆಯಿಂದಾಗಿ ಬಾನುಮುಷ್ತಾಕ್ ಸದ್ಯಕ್ಕೆ ಸಂಪೂರ್ಣ ಸಹಮತವನ್ನು ನೀಡಿದಂತಿಲ್ಲ.

## ಪ್ರಚಾರಕ್ಕಾಗಿ ಪ್ರಚೋದನೆ : ಶ್ರೇಯಸ್ ಅಸಮಾಧಾನ



• ಪ್ರಜೋದಯ ವರದಿ

**ಹಾಸನ:** ಆಸ್ತಿ ಮುಚ್ಚಿಟ್ಟಿದ್ದೇನೆಂಬ ಆರೋಪ ಪ್ರಕರಣವನ್ನು ಹೈಕೋರ್ಟ್ ವಜಾಗೊಳಿಸಿದೆ. ಈಗ ಸುಪ್ರೀಂ ಕೋರ್ಟ್‌ಗೆ ಮೇಲ್ಮನವಿ ಹೋಗಿದ್ದು, ಕಾನೂನಾತ್ಮಕವಾಗಿ ಏನಿದೆ ಎಂಬುದನ್ನು ವಕೀಲರ ಮೂಲಕ ನೋಡಿಕೊಳ್ಳುತ್ತೇವೆ. ಪ್ರಚಾರಕ್ಕೋಸ್ಕರ ನನ್ನನ್ನು ಪ್ರಚೋದನೆ ಮಾಡುವುದು ಸರಿಯಲ್ಲವೆಂದು ಸಂಸದ ಶ್ರೇಯಸ್ ಪಟೇಲ್ ಅವರು ಹೇಳಿದರು.

ಶುಕ್ರವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರಕರಣವನ್ನು ಹೈಕೋರ್ಟ್ ವಜಾಗೊಳಿಸಿದ್ದಕ್ಕೆ ಸುಪ್ರೀಂಕೋರ್ಟ್‌ಗೆ ಅಪೀಲು ಹೋಗಿದ್ದಾರೆ. ವಿಚಾರಣೆ ನೋಟೀಸ್‌ನ್ನು ಸಂಸದರ ಕಚೇರಿಗೆ ಅಂಟಿಸೋದು, ಮಾಧ್ಯಮದವರು ಇದ್ದಾರೆಂದು ನನ್ನನ್ನು ಮಾತಾಡಿಸೋ, ಪ್ರಚೋದನೆ ಮಾಡೋದು ಸರಿಯಲ್ಲ. ಕೋರ್ಟ್‌ನಲ್ಲಿ ಗೆದ್ದು ಬಂದು ನನ್ನನ್ನು ಕೇಳಲಿ. ಅವರ ವೃತ್ತಿಯನ್ನು ಸರಿಯಾಗಿ ಮಾಡಬೇಕು. ಆ ಬಗ್ಗೆ ಅವರಿಗೆ ಸರಿಯಾಗಿ ಮಾಹಿತಿ ಇಲ್ಲ ಎನಿಸುತ್ತದೆ ಎಂದು ತಿರುಗೇಟು ನೀಡಿದರು.

## ಹೃದಯಾಘಾತ : ಪೌರ ಕಾರ್ಮಿಕ ಸಾವು

• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ತಾಲೂಕಿನ ಶ್ರವಣಬೆಳಗೊಳ ಗ್ರಾಮ ಪಂಚಾಯಿತಿಯ ಪೌರ ಕಾರ್ಮಿಕ ನಾಗಭೂಷಣ್ (52) ಕರ್ತವ್ಯದಲ್ಲಿದ್ದಾಗ ಶುಕ್ರವಾರ ಬೆಳಿಗ್ಗೆ ಹೃದಯಾಘಾತದಿಂದ ಮೃತಪಟ್ಟಿದ್ದಾರೆ.

ಪೌರ ಕಾರ್ಮಿಕರಾಗಿ 25 ವರ್ಷಗಳಿಂದ ಕರ್ತವ್ಯ ನಿರ್ವಹಿಸುತ್ತಿದ್ದ ನಾಗಭೂಷಣ್ ಶುಕ್ರವಾರ ಬೆಳಿಗ್ಗೆ 6 ಗಂಟೆಯಲ್ಲಿ ಪಟ್ಟಣದ ವಿಂಧ್ಯಗಿರಿ ಬೆಟ್ಟದ ಮಹಾದ್ವಾರದ ಬಳಿ ಸ್ವಚ್ಛತೆಯಲ್ಲಿ ತೊಡಗಿದ್ದಾಗ ಕುಸಿದು ಬಿದ್ದು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯೆ ಕುಸುಮ ಬಾಲಕೃಷ್ಣ, ಗ್ರಾಮ ಪಂಚಾಯಿತಿ ಅಧ್ಯಕ್ಷ ಅಫ್ತಾಬ್ ಪಾಷಾ ಸೇರಿ ಹಲವರು ಸಂತಾಪ ಸೂಚಿಸಿದರು.



# ಆಸ್ತಿ ವಿವರ ವಿಚಾರಣೆ ಕೈಗೆತ್ತಿಕೊಂಡ ಸುಪ್ರೀಂ

## ಸಂಸದ ಶ್ರೇಯಸ್ ಪಟೇಲ್‌ಗೆ ಕೋರ್ಟ್ ನೋಟೀಸ್

• ಪ್ರಜೋದಯ ವರದಿ

**ಹಾಸನ:** ಲೋಕಸಭೆ ಚುನಾವಣೆಗೆ ನಾಮಪತ್ರ ಸಲ್ಲಿಸುವ ವೇಳೆ ಸಂಸದ ಶ್ರೇಯಸ್ ಪಟೇಲ್ ಅವರು ಆಸ್ತಿ ವಿವರ ಮರೆ ಮಾಚಿದ್ದಾರೆಂಬ ಆರೋಪ ಪ್ರಕರಣದ ವಿಚಾರಣೆಯನ್ನು ಸುಪ್ರೀಂಕೋರ್ಟ್ ಕೈಗೆತ್ತಿಕೊಂಡಿದೆ.

ಅಕ್ಟೋಬರ್ 6 ರಂದು ವಿಚಾರಣೆಗೆ ಹಾಜರಾಗುವಂತೆ ಸುಪ್ರೀಂಕೋರ್ಟ್ ಶ್ರೇಯಸ್ ಪಟೇಲ್ ಅವರಿಗೆ ನೋಟೀಸ್ ಜಾರಿ ಮಾಡಿದೆ. ನೋಟೀಸ್ ಪ್ರತಿಯನ್ನು ಜಿಲ್ಲಾಧಿಕಾರಿ ಕಚೇರಿ ಸಂಕೀರ್ಣದಲ್ಲಿರುವ ಸಂಸದರ ಕಚೇರಿ ಬಾಗಿಲಿಗೆ ಲೋಕಸಭಾ ಚುನಾವಣೆಯಲ್ಲಿ ಜೆಡಿಎಸ್ ಚುನಾವಣಾ ಏಜೆಂಟ್ ಆಗಿದ್ದ ವಕೀಲ ಪೂರ್ಣಚಂದ್ರ, ತೇಜಸ್ವಿ ಅವರು ಶುಕ್ರವಾರ ಅಂಟಿಸಿದರು.

**ಏನಿದು ಪ್ರಕರಣ**

ಶ್ರೇಯಸ್ ಪಟೇಲ್ ಅವರು ಕಳೆದ ಲೋಕಸಭಾ ಚುನಾವಣೆಗೆ ನಾಮಪತ್ರ ಸಲ್ಲಿಸುವ ವೇಳೆ, ತಾತ, ಮಾಜಿ ಸಂಸದ ಜಿ.ಪುಟ್ಟಸ್ವಾಮಿಗೌಡ ಅವರ ಹೆಸರಿನಲ್ಲಿ ಬೆಂಗಳೂರಿನಲ್ಲಿರುವ ಕೋಟ್ಯಾಂತರ ರೂ. ಮೌಲ್ಯದ ಬೆಲೆ ಬಾಳುವ ಆಸ್ತಿಯ ವಿವರವನ್ನು ಮುಚ್ಚಿಟ್ಟಿದ್ದಾರೆ. ಚುನಾವಣೆಗೂ ಮುನ್ನ ತಾತನ ಆಸ್ತಿಗೆ ತೆರಿಗೆ ಸಹ ಕಟ್ಟಿದ್ದರು. ಈ ಅಂಶವನ್ನೇ ಮುಂದಿಟ್ಟುಕೊಂಡು ಜೆಡಿಎಸ್ ಕಾನೂನು ಹೋರಾಟಕ್ಕಿಳಿದಿದೆ.



ಮೊದಲು ಹೈಕೋರ್ಟ್‌ನಲ್ಲಿ ಪ್ರಕರಣ ದಾಖಲು ಮಾಡಲಾಗಿತ್ತು. ವಿಚಾರಣೆ ನಡೆಸಿದ ನ್ಯಾಯಾಲಯ ಆರೋಪದಲ್ಲಿ ಹುರುಳಿಲ್ಲವೆಂದು ವಜಾ ಗೊಳಿಸಿತ್ತು. ಹೋರಾಟ ಕೈಬಿಡದ ಜೆಡಿಎಸ್ ಮುಂದುವರೆದು ಸುಪ್ರೀಂ ಕೋರ್ಟ್‌ಗೆ ಮೇಲ್ಮನವಿ ಸಲ್ಲಿಕೆ ಮಾಡಿದ್ದರಿಂದ ದೂರು ಸ್ವೀಕಾರ ಮಾಡಿ ಕೋರ್ಟ್ ವಿಚಾರಣೆ ಕೈಗೆತ್ತಿಕೊಂಡಿದೆ. ಈ ಸಂಬಂಧ ನೋಟೀಸ್ ಜಾರಿ ಮಾಡಿ ವಿಚಾರಣೆಗೆ ಹಾಜರಾಗುವಂತೆ ಸೂಚನೆ ನೀಡಿದೆ. ಈ ಹಿಂದೆ ಆಸ್ತಿ ವಿವರ ಮುಚ್ಚಿಟ್ಟ ಆರೋಪ ಪ್ರಕರಣದಲ್ಲೇ ಹಿಂದಿನ ಸಂಸದ ಪ್ರಜ್ವಲ್ ರೇವಣ್ಣ ಸಹ ಸದಸ್ಯತ್ವದಿಂದ ಅನರ್ಹ ಗೊಂಡಿದ್ದರು. ಈಗ ಅದೇ ಆರೋಪ ಶ್ರೇಯಸ್ ಪಟೇಲ್ ವಿರುದ್ಧವೂ ಕೇಳಿಬಂದಿದೆ.

**ಸಂಸದರ ನಡೆಗೆ ವಕೀಲ ಆಕ್ರೋಶ**

ಕೋರ್ಟ್ ಸೂಚನೆಯಂತೆ ಖುದ್ದು ನೋಟೀಸ್ ನೀಡಲು ನಾನು ಬಂದಿದ್ದೇನೆ. ಯುವ ಸಂಸದರಾಗಿ ಕಾನೂನಿಗೆ ಗೌರವ ಕೊಡಬೇಕಿತ್ತು. ನನ್ನನ್ನು ನೀವು ಅಮೀನರಾ ಎಂದು ಕೇಳುತ್ತಾರೆ. ಸಂಸದರು ವಕೀಲ ಸಮುದಾಯಕ್ಕೆ ಅವಮಾನ ಮಾಡಿದ್ದಾರೆಂದು ವಕೀಲ ಪೂರ್ಣಚಂದ್ರ, ತೇಜಸ್ವಿ ಅವರು ಆಕ್ರೋಶ ವ್ಯಕ್ತಪಡಿಸಿದರು.



### ನೋಟೀಸ್ ಸ್ವೀಕರಿಸದ ಶ್ರೇಯಸ್

ವಕೀಲ ಪೂರ್ಣಚಂದ್ರ, ತೇಜಸ್ವಿ ಅವರು ನೋಟೀಸ್‌ನ್ನು ಸಂಸದರ ಕಚೇರಿಗೆ ಅಂಟಿಸಿದ್ದು ಮಾತ್ರವಲ್ಲದೇ, ಶ್ರೇಯಸ್ ಪಟೇಲ್ ಅವರು ಮಹಾನಗರ ಪಾಲಿಕೆಯಲ್ಲಿರುವ ಮಾಹಿತಿ ತಿಳಿದು, ಅಲ್ಲಿಗೆ ಬಂದು ಖುದ್ದು ಸಂಸದರಿಗೆ ನೋಟೀಸ್ ನೀಡಲು ಮುಂದಾದರು.
ಆದರೆ, ಶ್ರೇಯಸ್ ಪಟೇಲ್ ವಕೀಲರತ್ತ ತಿರುಗಿ ನೋಡದೆ ಪೌರಕಾರ್ಮಿಕರಿಗೆ ಬಾಗಿನ ನೀಡುವ ಕಾರ್ಯಕ್ರಮಕ್ಕೆ ತೆರಳಲು ಮುಂದಾದರು.
ಈ ವೇಳೆ ಪೂರ್ಣಚಂದ್ರ, ತೇಜಸ್ವಿ ಬಲವಂತವಾಗಿ ನೋಟೀಸ್ ನೀಡಲು ಮುಂದಾದರು.
ನೋಟೀಸ್ ನೀಡಲು ನೀವೇನೂ ಅಮೀನರಾ ಎಂದು ಪ್ರಶ್ನಿಸಿ, ನೋಟೀಸ್ ಸ್ವೀಕರಿಸದೆ ತೆರಳಿದರು.

## ವಿಫಲಗೊಂಡ ಕೊಳವೆ ಬಾವಿಗಳ ಮುಚ್ಚಲು ಸೂಚನೆ

• ಪ್ರಜೋದಯ ವರದಿ

**ಹಾಸನ :** ವಿಫಲಗೊಂಡ ಕೊಳವೆ ಬಾವಿಗಳನ್ನು ಮುಚ್ಚಲು ಕ್ರಮ ಕೈಗೊಳ್ಳಬೇಕು. ಹೊಸ ಕೊಳವೆ ಬಾವಿಗಳನ್ನು ಕೊರೆಯಲು ಅನುಮತಿ ಪಡೆಯಬೇಕೆಂದು ಜಿಲ್ಲಾಧಿಕಾರಿ ಲತಾಕುಮಾರಿ ಅವರು ತಿಳಿಸಿದ್ದಾರೆ.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ನಡೆದ ಕರ್ನಾಟಕ ಅಂತರ್ಜಲ ಅಭಿವೃದ್ಧಿ ಮತ್ತು ಅತಿ ಬಳಕೆ ನಿಯಂತ್ರಣ ಅಧಿನಿಯಮದಡಿ ಜಿಲ್ಲಾ ಮಟ್ಟದ ಅನುಷ್ಠಾನ ಸಮಿತಿ ಸಭೆಯಲ್ಲಿ ಮಾತನಾಡಿದ ಅವರು, ವಿಫಲ ಕೊಳವೆ ಬಾವಿಗಳಲ್ಲಿ ಚಿಕ್ಕ ಮಕ್ಕಳು ಬಿದ್ದು ಸಾವಿಗೀಡಾಗುವ ಅವಘಡ ಗಳನ್ನು ತಪ್ಪಿಸಲು ಮುಂಜಾಗ್ರತೆ ವಹಿಸಿ ಮಣ್ಣು ಮತ್ತು ಕಲ್ಲುಗಳಿಂದ ಸಂಪೂರ್ಣವಾಗಿ ಮುಚ್ಚಿ ಗಿಡನೆಟ್ಟು ಸುರಕ್ಷಿತವಾಗಿಡಬೇಕು ಎಂದರು.

ಸ್ಥಳೀಯ ಪ್ರಾಧಿಕಾರ (ಗ್ರಾಮ ಪಂಚಾಯಿತಿ/ಪಟ್ಟಣ ಪಂಚಾಯಿತಿ, ಪುರಸಭೆ, ನಗರ ಸಭೆ, ಮಹಾನಗರ ಪಾಲಿಕೆಗಳು) ನಿರಾಪೇಕ್ಷಣಾ ಪತ್ರವನ್ನು ನೀಡುವಾಗ 15 ದಿನ ಮುಂಚಿತವಾಗಿ ಅರ್ಜಿ ಪಡೆದು ಸ್ವೀಕೃತಿ ನೀಡಬೇಕು. ಸಾರ್ವಜನಿಕ ಕುಡಿಯುವ ನೀರಿನ ಮೂಲಗಳಿಂದ 500 ಮೀಟರ್ ದೂರ ಇರುವ ಬಗ್ಗೆ ಪಿ.ಡಿ.ಓ ರವರಿಂದ ದೃಡೀಕರಿಸಿಕೊಳ್ಳಬೇಕು ಹಾಗು ಮುಚ್ಚಳಿಕೆ ಪತ್ರ ಪಡೆಯಬೇಕು ಎಂದು ತಿಳಿಸಿದರು.



ಸಫಲ, ವಿಫಲ ಕೊಳವೆ ಬಾವಿಗಳ ಬಗ್ಗೆ ಮಾಹಿತಿಯನ್ನು ನಿಗದಿತ ನಮೂನೆಯಲ್ಲಿ ನೊಂದಾಯಿಸತಕ್ಕದ್ದು, ಪ್ರತಿ ತಿಂಗಳ ಮೊದಲನೆ ತಾರೀಖು ತಿಂಗಳ ಕ್ರೋಢಿಕೃತ ಮಾಹಿತಿಯನ್ನು ತಾಲ್ಲೂಕು ಪಂಚಾಯಿತಿಗೆ ಸಲ್ಲಿಸಬೇಕೆಂದರು.

ತಾಲ್ಲೂಕು ಪಂಚಾಯಿತಿಯು ತಾಲ್ಲೂಕಿನ ಮಾಹಿತಿಯನ್ನು ಕಾರ್ಯನಿರ್ವಾಹಕ ಅಭಿಯಂತರರು ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ (ನೋಡಲ್ ಅಧಿಕಾರಿ) ಜಿಲ್ಲಾ ಪಂಚಾಯಿತಿ ಅವರಿಗೆ ಕಳುಹಿಸುವುದು. ನಗರ ಸ್ಥಳೀಯ ಪ್ರಾಧಿಕಾರಗಳು ತಿಂಗಳ ಕ್ರೋಢಿಕೃತ ಮಾಹಿತಿಯನ್ನು ಯೋಜನಾ ನಿರ್ದೇಶಕರು, ಜಿಲ್ಲಾ ನಗರಾಭಿವೃದ್ಧಿ ಕೋಶ ಅವರಿಗೆ ಸಲ್ಲಿಸುವಂತೆ ತಿಳಿಸಿದರು.

ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ಕೃಷ್ಣಮೂರ್ತಿ, ಸಣ್ಣ ನೀರಾವರಿ ಇಲಾಖೆಯ ಕಾರ್ಯಪಾಲಕ ಇಂಜಿನೀಯರ್ ರಾಮಚಂದ್ರ, ಜಿಲ್ಲಾ ಅಂತರ್ಜಲ ಅಭಿವೃದ್ಧಿ ಇಲಾಖೆಯ ಹಿರಿಯ ಭೂವಿಜ್ಞಾನಿ ಸುಧಾ, ಹಲವು ಇಲಾಖೆಗಳ ಅಧಿಕಾರಿಗಳು ಸಭೆಯಲ್ಲಿ ಹಾಜರಿದ್ದರು.

## ಹಾನುಬಾಳು ಭಾಗದಲ್ಲಿ ಪವರ್‌ಮನ್ ಕೊರತೆ

• ಪ್ರಜೋದಯ ವರದಿ

**ಸಕಲೇಶಪುರ :** ತಾಲ್ಲೂಕಿನ ಹಾನುಬಾಳು ಹೋಬಳಿಯ ಸೆಸ್ಕಾಂ ಕಚೇರಿಯಲ್ಲಿ ಸಿಬ್ಬಂದಿ ಕೊರತೆಯಿಂದ ಸಮರ್ಪಕ ವಿದ್ಯುತ್ ಕೊರತೆಗೆ ಅಡ್ಡಿಯುಂಟಾಗಿದೆ.

ಹೋಬಳಿಯ ಸೆಸ್ಕಾಂ ಕಚೇರಿಯಲ್ಲಿ 22 ಮಂದಿ ಪವರ್‌ಮನ್ ಹಾಗು ಸಹಾಯಕ ಪವರ್‌ಮನ್ ಹುದ್ದೆಗಳಿರಬೇಕಾಗಿದ್ದರೂ, ಪ್ರಸ್ತುತ ಕೇವಲ 12 ಮಂದಿ ಮಾತ್ರ ಸೇವೆ ಸಲ್ಲಿಸುತ್ತಿದ್ದಾರೆ. ಇವರಲ್ಲಿ ಇಬ್ಬರು ಅಂಗವಿಕಲರಾಗಿದ್ದು, ಇನ್ನೊಬ್ಬ ಗಾಯದಿಂದ ಕೆಲಸ ನಿರ್ವಹಿಸಲು ಸಾಧ್ಯವಾಗದ ಕಾರಣ, 9 ಮಂದಿ ಸಿಬ್ಬಂದಿಯೇ ಇಡೀ ಹೋಬಳಿಯ ವಿದ್ಯುತ್ ನಿರ್ವಹಣೆಯ ಹೊಣೆ ಹೊತ್ತಿದ್ದಾರೆ.

22 ಮಂದಿ ಮಾಡುವಷ್ಟು ಕೆಲಸವನ್ನು 9 ಮಂದಿ ಮಾತ್ರ ನಿರ್ವಹಿಸುತ್ತಿರುವುದು ಸಿಬ್ಬಂದಿಗೆ ತೀವ್ರ ಸವಾಲಾಗಿ ಪರಿಣಮಿಸಿದೆ. ವಿಶೇಷವಾಗಿ ಮಲೆನಾಡು ಪ್ರದೇಶವಾದ ಹಾನುಬಾಳು ಹೋಬಳಿ ಭಾಗದಲ್ಲಿ ಜೂನ್, ಜುಲೈ ಮತ್ತು ಆಗಸ್ಟ್ ತಿಂಗಳುಗಳಲ್ಲಿ ನಿರಂತರ ಗಾಳಿ-ಮಳೆಯಿಂದಾಗಿ ಮರಗಳು ವಿದ್ಯುತ್ ಲೈನ್‌ಗಳ ಮೇಲೆ ಬಿದ್ದು ತಂತಿ ಕತ್ತರಿಸುವುದು, ಕಂಬಗಳು ಮುರಿಯುವುದು, ಶಾರ್ಟ್ ಸರ್ಕ್ಯೂಟ್ ಆಗಿ ಟ್ರಾನ್ಸ್‌ಫಾರ್ಮರ್‌ಗಳು ಸುಟ್ಟುಹೋಗುವ ಘಟನೆ ಸಾಮಾನ್ಯ. ಇಂತಹ ಸಮಸ್ಯೆಗಳನ್ನು ತಕ್ಷಣ ಬಗೆಹರಿಸಲು ಬೇಕಾದ ಒತ್ತಡ ಸಿಬ್ಬಂದಿ ಕೊರತೆಯಿಂದ ಹೆಚ್ಚಾಗಿದ್ದು, ಜನರಲ್ಲಿ ಅಸಮಾಧಾನ ಮೂಡಿಸಿದೆ.



ಇನ್ನೊಂದು ಕಡೆ, ಕೃಷಿ, ಮನೆ ಬಳಕೆ ಹಾಗು ವಾಣಿಜ್ಯ ಬಳಕೆಯ ವಿದ್ಯುತ್ ಬಿಲ್‌ಗಳು ದಿನದಿಂದ ದಿನಕ್ಕೆ ಏರಿಕೆಯಾಗುತ್ತಿವೆ. ಆದರೆ, ಅದರ ವಿರುದ್ಧವಾಗಿ ಸೇವಾ ಗುಣಮಟ್ಟ ಕುಸಿಯುತ್ತಿರುವುದರಿಂದ ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ. ಅಗತ್ಯ ಸಿಬ್ಬಂದಿಯನ್ನು ಸರ್ಕಾರ ತಕ್ಷಣ ನೇಮಕ ಮಾಡಬೇಕು. ಈ ನಿಟ್ಟಿನಲ್ಲಿ ಸ್ಥಳೀಯ ಶಾಸಕರು ಕೂಡ ತ್ವರಿತ ಕ್ರಮ ಕೈಗೊಳ್ಳು ವುದು ಅಗತ್ಯವಿದೆ ಎಂದು ಸ್ಥಳೀಯ ಅವರೆಕಾಡು ಪೃಥ್ವಿ ಒತ್ತಾಯಿಸಿದ್ದಾರೆ.

## ಬಿಡುವು ನೀಡಿದ ಮಳೆ : ಕೃಷಿ ಚಟುವಟಿಕೆ ಚುರುಕು

• ಪ್ರಜೋದಯ ವರದಿ

**ಹಾಸನ:** ಜಿಲ್ಲೆಯಲ್ಲಿ ಕಳೆದ ವಾರ ಅಬ್ಬರಿಸಿದ್ದ ಮಳೆ ಬಿಡುವು ನೀಡಿರುವುದರಿಂದ ರೈತರು ಕೃಷಿ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಲು ಅನುಕೂಲವಾಗಿದೆ.

ಜುಲೈ-ಆಗಸ್ಟ್ ತಿಂಗಳಲ್ಲಿ ಮಳೆ ಆರ್ಭಟದಿಂದ ಸಂಕಷ್ಟ ಅನುಭವಿಸಿದ್ದ ರೈತರಿಗೆ ಮಳೆ ತಾತ್ಕಾಲಿಕ ಬಿಡುವು ನೀಡಿರುವುದರಿಂದ ಸ್ವಲ್ಪ ನೆಮ್ಮದಿ ತರಿಸಿದೆ. ಮಳೆಯ ತೀವ್ರತೆ ಕಡಿಮೆಯಾಗಿರುವುದರಿಂದ ಹೊಲಗದ್ದೆಗಳಲ್ಲಿ ಕೃಷಿ ಚಟುವಟಿಕೆ ಚುರುಕುಗೊಂಡಿದೆ.

ಜಿಲ್ಲೆಯ ಮಲೆನಾಡು ಭಾಗಗಳಲ್ಲಿ ಆಗಸ್ಟ್ 2ನೇ ವಾರದವರೆಗೂ ನಿರಂತರ ಮಳೆಯಿಂದಾಗಿ ಹೊಲಗಳಿಗೆ ಹೋಗಲು ಸಾಧ್ಯವಾಗದ ಸ್ಥಿತಿ ನಿರ್ಮಾಣವಾಗಿತ್ತು. ಸಕಲೇಶಪುರ, ಆಲೂರು, ಬೇಲೂರು ಮತ್ತು ಅರಕಲಗೂಡು ತಾಲ್ಲೂಕು ಭಾಗಗಳಲ್ಲಿ ಅತೀ ಹೆಚ್ಚು ಮಳೆಯ ಕಾರಣದಿಂದಾಗಿ ಭತ್ತದ ನಾಟಿ ಕಾರ್ಯ ವಿಳಂಬಗೊಂಡಿತ್ತು. ಎರಡು ದಿನದಿಂದ ಮಳೆಯ ಪ್ರಮಾಣದಲ್ಲಿ ಕುಸಿತ ಕಂಡು, ರೈತರು ಭತ್ತದ ನಾಟಿ, ಕಾಫಿ ತೋಟಗಳ ನಿರ್ವಹಣೆಗೆ ಅನುಕೂಲವಾಗಿದೆ.



ಮಲೆನಾಡು ಭಾಗದಲ್ಲಿ ಭತ್ತ ನಾಟಿ ಕಾರ್ಯ ಕೊನೆಯ ಹಂತದಲ್ಲಿ ಇರುವ ಹೊತ್ತಿನಲ್ಲಿ ಧಾರಕಾರ ಮಳೆ ಸುರಿದ್ದರಿಂದ ಅಡ್ಡಿಯುಂಟಾಗಿತ್ತು. ಗದ್ದೆಗಳು ಜಲಾವೃತಗೊಂಡಿದ್ದರಿಂದ ನಾಟಿ ಮಾಡಲು ಸಾಧ್ಯವಾಗಿರಲಿಲ್ಲ. ಇದೀಗ ಮಳೆಯ ಪ್ರಮಾಣ ಕಡಿಮೆಯಾಗಿ ನೀರಿನ ಮಟ್ಟವೂ ತಗ್ಗಿರುವುದರಿಂದ ರೈತರು ಕೃಷಿ ಚಟುವಟಿಕೆಯಲ್ಲಿ ತೊಡಗಿಕೊಳ್ಳಲು ನೆರವಾಗಿದೆ.

ಭಾರೀ ಮಳೆಯಿಂದ ಕಾಫಿಗಿಡಗಳಲ್ಲಿ ಕೊಳೆ ರೋಗ ಕಾಣಿಸಿಕೊಂಡು ಕಾಯಿ ಉದುರಿ ಅಪಾರ ಪ್ರಮಾಣದ ನಷ್ಟವುಂಟಾಗಿತ್ತು. ಇದಲ್ಲದೇ ಮರಗಳು ಕಾಫಿಗಿಡಗಳ ಮೇಲೆ ಬಿದ್ದು ಮತ್ತಷ್ಟು ಹಾನಿಯುಂಟಾಗಿತ್ತು. ಕಳೆದ ಎರಡು ದಿನಗಳಿಂದ ಬಿಸಿಲು ಕಾಣಿಸಿಕೊಳ್ಳುತ್ತಿರುವುದರಿಂದ ತೋಟಗಳಲ್ಲಿ ಕೊಳೆರೋಗ ಹತೋಟಿಗೆ ಔಷಧ ಸಿಂಪಡಣೆಯಲ್ಲಿ ತೊಡಗಿಸಿಕೊಂಡಿದ್ದಾರೆ.

ಮಳೆಯ ಪ್ರಮಾಣ ಕಡಿಮೆಯಾಗಿರುವುದರಿಂದ ರಾಷ್ಟ್ರೀಯ ಹೆದ್ದಾರಿ-75ರಲ್ಲ ಭೂಕುಸಿ ಕಡಿಮೆಯಾಗಿ ವಾಹನಗಳ ಸಂಚಾರಕ್ಕೆ ಅನುಕೂಲವಾಗಿದೆ. ಮಳೆ ತಗ್ಗಿರುವುದರಿಂದ ಕುಸಿದಿದ್ದ ಮಣ್ಣನ್ನು ತೆರವುಗೊಳಿಸುವ ಕೆಲಸ ನಡೆಯುತ್ತಿದೆ.

## ತಂಬಲಗೇರಿ ಬಳಿ ಕುಸಿದ ರಸ್ತೆ ದುರಸ್ತಿ ನಿರ್ಲಕ್ಷ್ಯ

• ಪ್ರಜೋದಯ ವರದಿ

ಸಕಲೇಶಪುರ: ಸಕಲೇಶಪುರದಿಂದ ಸೋಮವಾರಪೇಟೆ ತಾಲ್ಲೂಕಿಗೆ ಸಂಪರ್ಕ ಕಲ್ಪಿಸುವ ಪ್ರಮುಖ ಮಾರ್ಗವಾದ ವಣಗೂರು ಕೂಡಿಗೆಯಿಂದ ಕೂತಿ ಮೂಲಕ ಸಾಗುವ ತಂಬಲಗೇರಿ ಗ್ರಾಮದ ಸಮೀಪ, ನಾಲ್ಕು ವರ್ಷಗಳ ಹಿಂದೆ ಮಳೆಗಾಲದಲ್ಲಿ ಕುಸಿದಿದ್ದ ರಸ್ತೆಯನ್ನು ಇದುವರೆಗೂ ಸರಿಪಡಿಸದೇ ಇರುವುದರಿಂದ ಸಂಚಾರಕ್ಕೆ ತೀವ್ರ ಸಮಸ್ಯೆಯಾಗಿದೆ ಎಂದು ಸ್ಥಳೀಯರು ಆರೋಪಿಸಿದ್ದಾರೆ.

ರಸ್ತೆ ಕುಸಿದು ಸಂಚಾರಕ್ಕೆ ಅಡಚಣೆ ಉಂಟಾಗಿರುವ ಬಗ್ಗೆ ಅನೇಕ ಬಾರಿ ಅಧಿಕಾರಿಗಳ ಗಮನಕ್ಕೆ ತಂದರೂ, ಲೋಕೋಪಯೋಗಿ ಇಲಾಖೆ ಸೇರಿ ಯಾರೊಬ್ಬರೂ ಕ್ರಮ ಕೈಗೊಳ್ಳದೆ ನಿರ್ಲಕ್ಷ್ಯ ತೋರಿದ್ದಾರೆಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಈ ರಸ್ತೆ ಮೂಲಕ ಪ್ರತಿದಿನ ಸಾವಿರಾರು ವಾಹನಗಳು ಸಂಚರಿಸುತ್ತಿವೆ. ನಾಲ್ಕು ವರ್ಷಗಳ ಹಿಂದೆ ಭಾರೀ ಮಳೆಯಿಂದಾಗಿ ಮಣ್ಣು ಕುಸಿದು ರಸ್ತೆಯ ಅಂಚಿನವರೆಗೆ ಬಂದಿತ್ತು. ಆಗ ಗ್ರಾಮಸ್ಥರು ಸ್ವಯಂಪ್ರೇರಿತರಾಗಿ ಮರಳು ಹಾಕಿ ತಾತ್ಕಾಲಿಕವಾಗಿ ಸಂಚಾರಕ್ಕೆ ವ್ಯವಸ್ಥೆ ಮಾಡಿದ್ದರು. ಇತ್ತೀಚಿನ ಮಳೆಯಿಂದ ಮತ್ತೊಮ್ಮೆ ರಸ್ತೆ ಕುಸಿಯುವ ಹಂತ ತಲುಪಿದೆ. ಈಗಲಾದರೂ ತಕ್ಷಣ ಕ್ರಮ ಕೈಗೊಳ್ಳಬೇಕು. ಇಲ್ಲದಿದ್ದರೆ ರಸ್ತೆ ತಡೆ ಪ್ರತಿಭಟನೆ ನಡೆಸಬೇಕಾಗುತ್ತದೆ ಎಂದು ಕರವೇ ತಾಲ್ಲೂಕು ಅಧ್ಯಕ್ಷ ಗಗನ್‌ಗೌಡ ಎಚ್ಚರಿಕೆ ನೀಡಿದ್ದಾರೆ.



## ಶಿಕ್ಷಣ ಇಲಾಖೆಯಲ್ಲಿ ಲೂಟಿ : ಸದನದಲ್ಲಿ ರೇವಣ್ಣ ಆರೋಪ

• ಪ್ರಜೋದಯ ವರದಿ

ಹಾಸನ: ಶಿಕ್ಷಣ ಇಲಾಖೆಯ ಕಾಮಗಾರಿಗಳ ನಿರ್ವಹಣೆಯನ್ನು ಲೋಕೋಪಯೋಗಿ ಇಲಾಖೆಯಿಂದ ಕಸಿದುಕೊಂಡು ಹೌಸಿಂಗ್ ಬೋರ್ಡ್, ಶಿಕ್ಷಣ ಇಲಾಖೆಗೆ ವಹಿಸುವ ಮೂಲಕ ಸರ್ಕಾರದ ಬೊಕ್ಕಸಕ್ಕೆ ಶೇ.30 ರಷ್ಟು ನಷ್ಟ ಆಗುತ್ತಿದೆ. ಅಧಿಕಾರಿಗಳು ಲೂಟಿ ಹೊಡೆಯಲು ಅವಕಾಶ ಕಲ್ಪಿಸಿದಂತಾಗಿದೆ ಎಂದು ಮಾಜಿ ಸಚಿವ ಹೆಚ್.ಡಿ.ರೇವಣ್ಣ ಅವರು ವಿಧಾನಸಭೆಯಲ್ಲಿ ಗಂಭೀರ ಆರೋಪ ಮಾಡಿದರು.

ಪ್ರಶ್ನೋತ್ತರ ವೇಳೆಯಲ್ಲಿ ಈ ವಿಚಾರ ಪ್ರಸ್ತಾಪಿಸಿದ ಅವರು, ಸರ್ಕಾರಗಳು ಬರುತ್ತವೆ, ಹೋಗುತ್ತವೆ. ಅದು ಬೇರೆ ವಿಷಯ. ಆದರೆ, ಶಿಕ್ಷಣ ಇಲಾಖೆಯಲ್ಲಿ ಲೂಟಿ ಹೊಡೆಯುತ್ತಿರುವುದು ಒಳ್ಳೆಯ ಬೆಳವಣಿಗೆಯಲ್ಲ. ಹೀಗೆ ಮುಂದುವರೆದರೆ ಶಿಕ್ಷಣ ಕ್ಷೇತ್ರ ಖಾಸಗಿಯವರ ಹಿಡಿತಕ್ಕೆ ಹೋಗುತ್ತದೆ. ಇದಕ್ಕೆ ಸರ್ಕಾರ ಅವಕಾಶ ಮಾಡಿಕೊಡಬಾರದೆಂದು ಹೇಳಿದರು.



ಹೊಳೆನರಸೀಪುರ ಕ್ಷೇತ್ರದಲ್ಲಿ 7 ಪ್ರಥಮ ದರ್ಜೆ ಕಾಲೇಜುಗಳಿವೆ. ಇಂಜಿನೀಯರಿಂಗ್ ಕಾಲೇಜು ಕೂಡ ಇದೆ. ಇಡೀ ದೇಶದಲ್ಲಿ 7 ಪ್ರಥಮ ದರ್ಜೆ ಕಾಲೇಜುಗಳಿರುವುದು ನನ್ನ ಕ್ಷೇತ್ರದಲ್ಲಿ ಮಾತ್ರ. ನಾವೇನೂ ಖಾಸಗಿ ಶಿಕ್ಷಣ ಸಂಸ್ಥೆಗಳನ್ನು ನಡೆಸುತ್ತಿಲ್ಲ. ಹೊಳೆನರಸೀಪುರ ಕ್ಷೇತ್ರದಲ್ಲಿ 2 ಕೋ.ರೂ. ಖರ್ಚು ಮಾಡಿ ಪಬ್ಲಿಕ್ ಶಾಲೆ ನಿರ್ಮಾಣ ಮಾಡಿದ್ದರೂ ಸರ್ಕಾರ ಇದುವರೆಗೂ ಒಂದು ರೂಪಾಯಿ ಅನುದಾನ ನೀಡಿಲ್ಲವೆಂದು ಆರೋಪಿಸಿದರು.

ರಾಜ್ಯದಲ್ಲಿ ನಾಲ್ಕು ಸಾವಿರ ಪ್ರಾಥಮಿಕ ಶಾಲೆಗಳು ಮುಚ್ಚುವ ಸ್ಥಿತಿಯಲ್ಲಿವೆ. ಅವುಗಳಿಗೆ ಕಾಯಕಲ್ಪ ನೀಡುವ ಕೆಲಸವಾಗಬೇಕು. ಲೋಕೋಪಯೋಗಿ ಇಲಾಖೆ ಅಥವಾ ಆರ್‌ಡಿಪಿಆರ್ ಮೂಲಕ ಕಾಮಗಾರಿಗಳನ್ನು ನಿರ್ವಹಿಸಿದರೆ ಶೇ.30 ರಷ್ಟು ಹಣ ಉಳಿಯಲಿರುವುದಾಗಿ ಶಿಕ್ಷಣ ಇಲಾಖೆಯಲ್ಲಿ ಕಾರ್ಯದರ್ಶಿಯಾಗಿದ್ದ ಅಜಯ್ ನಾಗಭೂಷಣ್ ಅವರೇ ಸರ್ಕಾರಕ್ಕೆ ಪತ್ರ ಬರೆದಿದ್ದಾರೆ. ಆದರೆ, ಅದು ಕಾರ್ಯಗತವಾಗಿಲ್ಲ. ಬೇರೆ-ಬೇರೆ ಇಲಾಖೆಗಳಲ್ಲಿ ತಾಂತ್ರಿಕ ಪರಿಣಿತರು ಹಾಗು ಸಿಬ್ಬಂದಿ ಇಲ್ಲ. ಆದ್ದರಿಂದ ಲೋಕೋಪಯೋಗಿ ಇಲಾಖೆ ಅಥವಾ ಗ್ರಾಮೀಣಾಭಿವೃದ್ಧಿ ಇಲಾಖೆ ಮೂಲಕವೇ ಕೆಲಸವನ್ನು ನಿರ್ವಹಿಸುವಂತಾಗಬೇಕೆಂದು ಆಗ್ರಹಿಸಿದರು. ರೇವಣ್ಣ ಅವರ ಒತ್ತಾಯಕ್ಕೆ ಕೆಲವು ಸದಸ್ಯರು ಧ್ವನಿಗೂಡಿಸಿದರು.

## ಆತ್ಮಹತ್ಯೆಗೆ ಯತ್ನಿಸಿದ್ದ ವ್ಯಕ್ತಿ ಚಿಕಿತ್ಸೆ ಫಲಿಸದೆ ಸಾವು

• ಪ್ರಜೋದಯ ವರದಿ

**ಸಕಲೇಶಪುರ:** ಕೌಟುಂಬಿಕ ಕಲಹದಿಂದ ಶುರುವಾದ ಜಗಳದಲ್ಲಿ ಹೆಂಡತಿಯನ್ನು ಮಚ್ಚಿನಿಂದ ಕೊಚ್ಚಿ ಕೊಂದು ತಾನೂ ಆತ್ಮಹತ್ಯೆಗೆ ಯತ್ನಿಸಿದ ವ್ಯಕ್ತಿ ಚಿಕಿತ್ಸೆಗೆ ಸ್ಪಂದಿಸದೆ ಶುಕ್ರವಾರ ಮೃತಪಟ್ಟಿದ್ದಾರೆ.

ತಾಲ್ಲೂಕಿನ ಬೇಡರಜಗ್ಲಿ ಗ್ರಾಮದ ಸಿದ್ದಯ್ಯ (65) ಮೃತರು. ಆ. 14ರಂದು ಪತ್ನಿ ಶಿವಮ್ಮ ಅವರೊಂದಿಗೆ ಜಗಳಾಡಿ ಅವರನ್ನು ಕೊಲೆಗೈದು ತಾವೂ ಕುತ್ತಿಗೆಗೆ ಇರಿದು ಕೊಂಡಿದ್ದರು. ಗಂಭೀರ ಗಾಯಗೊಂಡಿದ್ದ ಅವರನ್ನು ಪುತ್ರಿ ಲೀಲಾ ಹಾಗು ಅಳಿಯ ಪ್ರಸಾದ್ ಪಟ್ಟಣದ ಕ್ರಾಫರ್ಡ್ ಆಸ್ಪತ್ರೆಗೆ ದಾಖಲಿಸಿದ್ದರು. ಚಿಕಿತ್ಸೆ ಫಲಿಸದೆ ಮೃತಪಟ್ಟಿದ್ದಾರೆ.

ಚೀಟಿ ಹಣಕ್ಕಾಗಿ ದಂಪತಿ ಗಲಾಟೆ ಮಾಡಿಕೊಂಡಿದ್ದರೆಂದು ತಿಳಿದುಬಂದಿದೆ. ಕೂಲಿ ಕೆಲಸ ಮಾಡಿಕೊಂಡು ಇಬ್ಬರೇ ಮನೆಯಲ್ಲಿದ್ದರು. ಕುಡಿದ ಅಮಲಿನಲ್ಲಿ ಸಿದ್ದಯ್ಯ ಗಲಾಟೆ ಶುರು ಮಾಡಿದ್ದ. ಶಿವಮ್ಮ ಅವರು ಚೀಟಿ ಹಣ ಕೊಡುವುದಿಲ್ಲವೆಂದು ಹಠ ಹಿಡಿದಾಗ ಮಚ್ಚಿನಿಂದ ಕೊಚ್ಚಿ ಹತ್ಯೆಗೈದಿದ್ದ. ನಗರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಬೈಸಿಕಲ್‌ಗಳಿಂದ ಬಿಲಿಯನ್‌ಗಳ ತನಕ



## ಭಾರತೀಯ ಬಾಹ್ಯಾಕಾಶ ಕ್ಷೇತ್ರ ಸಾಗಿಬಂದ ಹಾದಿ

- ಭಾರತದ ಬಾಹ್ಯಾಕಾಶ ಕಾರ್ಯಕ್ರಮಗಳ ಬೇರು 1962ರಲ್ಲಿ ಆರಂಭಗೊಂಡಿತು. ಆಗ ಭಾರತದ ಸರ್ವಶ್ರೇಷ್ಠ ವಿಜ್ಞಾನಿಗಳಲ್ಲಿ ಒಬ್ಬರಾದ ವಿಕ್ರಮ್ ಸಾರಾಭಾಯಿ ಅವರ ನೇತೃತ್ವದಲ್ಲಿ ಇಂಡಿಯನ್ ನ್ಯಾಷನಲ್ ಕಮಿಟಿ ಫಾರ್ ಸ್ಪೇಸ್ ರಿಸರ್ಚ್ ಸ್ಥಾಪನೆಗೊಂಡಿತು.

2023ರ ಆಗಸ್ಟ್ 23ರಂದು ಭಾರತದ ಮಹತ್ವಾಕಾಂಕ್ಷಿ ಚಂದ್ರಯಾನ - 3 ಯೋಜನೆ ಚಂದ್ರನ ದಕ್ಷಿಣ ಧ್ರುವ ಪ್ರದೇಶದಲ್ಲಿ ಇಳಿದುದನ್ನು ಸ್ಮರಿಸುವ ಸಲುವಾಗಿ ಪ್ರತಿ ವರ್ಷವೂ ಆ ದಿನದಂದು ರಾಷ್ಟ್ರೀಯ ಬಾಹ್ಯಾಕಾಶ ದಿನಾಚರಣೆಯನ್ನು (ನ್ಯಾಷನಲ್ ಸ್ಪೇಸ್ ಡೇ) ಆಚರಿಸಲಾಗುತ್ತದೆ. ಈ ಐತಿಹಾಸಿಕ ಸಾಧನೆ ಚಂದ್ರನ ದಕ್ಷಿಣ ಧ್ರುವ ಪ್ರದೇಶದಲ್ಲಿ ಇಳಿದ ಮೊದಲ ರಾಷ್ಟ್ರ ಎಂಬ ಕೀರ್ತಿಗೆ ಭಾರತ ಪಾತ್ರವಾಗುವಂತೆ ಮಾಡಿತು. ಈ ದಿನ ನಮ್ಮ ಬಾಹ್ಯಾಕಾಶ ಅನ್ವೇಷಣಾ ಸಾಧನೆಗಳು ಸಾಗಿ ಬಂದ ಹಾದಿಯನ್ನು ಸ್ಮರಿಸಲು ಸೂಕ್ತವಾದ ದಿನವಾಗಿದೆ. ಹಾಗೆಂದು ರಾಷ್ಟ್ರೀಯ ಬಾಹ್ಯಾಕಾಶ ದಿನಾಚರಣೆ ಕೇವಲ ಚಂದ್ರಯಾನ - 3 ಯೋಜನೆಯ ಯಶಸ್ಸಿನ ಸಂಭ್ರಮಾಚರಣೆಗೆ ಮಾತ್ರವೇ ಸೀಮಿತವಾಗಿಲ್ಲ. ಬದಲಿಗೆ, ಆಗಷ್ಟೇ ಸ್ವಾತಂತ್ರ್ಯ ಪಡೆದ, ಅತ್ಯಂತ ಕನಿಷ್ಠ ಪ್ರಮಾಣದ ಸಂಪನ್ಮೂಲಗಳನ್ನು ಹೊಂದಿದ್ದ ಭಾರತ ಹೇಗೆ ಬಾಹ್ಯಾಕಾಶ ಕ್ಷೇತ್ರದಲ್ಲಿ ಜಾಗತಿಕ ಗೌರವ ಸಂಪಾದಿಸುವಂತೆ ಬೆಳೆದು ನಿಂತಿತು ಎನ್ನುವುದನ್ನೂ ಸಂಭ್ರಮಿಸುವ ದಿನವಾಗಿದೆ.

ಭಾರತದ ಬಾಹ್ಯಾಕಾಶ ಕಾರ್ಯಕ್ರಮಗಳ ಬೇರು 1962ರಲ್ಲಿ ಆರಂಭಗೊಂಡಿತು. ಆಗ ಭಾರತದ ಸರ್ವಶ್ರೇಷ್ಠ ವಿಜ್ಞಾನಿಗಳಲ್ಲಿ ಒಬ್ಬರಾದ ವಿಕ್ರಮ್ ಸಾರಾಭಾಯಿ ಅವರ ನೇತೃತ್ವದಲ್ಲಿ ಇಂಡಿಯನ್ ನ್ಯಾಷನಲ್ ಕಮಿಟಿ ಫಾರ್ ಸ್ಪೇಸ್ ರಿಸರ್ಚ್ (INCOSPAR) ಸ್ಥಾಪನೆಗೊಂಡಿತು. ಭಾರತದ ಬಾಹ್ಯಾಕಾಶ ಮಹತ್ವಾಕಾಂಕ್ಷೆಗೆ ಪೂರಕವಾದ ಉಡಾವಣಾ ಸ್ಥಳವಾಗಿ ವಿಕ್ರಮ್ ಸಾರಾಭಾಯಿ ಕೇರಳದ ತುಂಬಾ ಎಂಬ ಸಣ್ಣ ಮೀನುಗಾರಿಕಾ ಗ್ರಾಮವನ್ನು ಆರಿಸಿಕೊಂಡರು. ಆ ಬಳಿಕ ನಡೆದ ಅಭಿವೃದ್ಧಿ, ಬೆಳವಣಿಗೆ, ಇಂದು ದಂತಕಥೆಯ ರೂಪದಲ್ಲಿ ನಮ್ಮೆದುರು ನಿಂತಿದೆ. 1963ರ ನವೆಂಬರ್ 21ರಂದು, ಭಾರತೀಯ ವಿಜ್ಞಾನಿಗಳು ರಾಕೆಟ್ ಬಿಡಿಭಾಗಗಳನ್ನು ಸೈಕಲ್ ಮೇಲೆ ಉಡಾವಣಾ ಸ್ಥಳಕ್ಕೆ ಒಯ್ಯುತ್ತಿದ್ದರು. ಆ ಸಮಯದಲ್ಲಿ ಒಂದು ಸ್ಥಳೀಯ ಚರ್ಚ್ ಅನ್ನು ಪ್ರಯೋಗಾಲಯವಾಗಿಯೂ, ಪಾದ್ರಿಯ ಮನೆಯನ್ನು ತಮ್ಮ ಯೋಜನಾ ಕೇಂದ್ರವಾಗಿಯೂ ವಿಜ್ಞಾನಿಗಳು ಬಳಸುತ್ತಿದ್ದರು. ಆ ಸಂಜೆ, ಭಾರತದ ಮೊತ್ತಮೊದಲ ರಾಕೆಟ್ ಆದ ನೈಕ್ - ಅಪಾಚೆ ಆಗಸಕ್ಕೆ ಹಾರಿ, ತನ್ನ ಆವಿಯ ಕಣಗಳಿಂದ ಆಗಸಕ್ಕೆ ಕಿತ್ತಳೆ ಬಣ್ಣ ಎರಚಿತ್ತು. ಈ ರಾಕೆಟ್ ಅಮೆರಿಕಾ ನಿರ್ಮಾಣದ್ದಾಗಿ, ಫ್ರೆಂಚ್ ಪೇಲೋಡನ್ನು ಒಳಗೊಂಡಿದ್ದರೂ, ಭಾರತದ ಬಾಹ್ಯಾಕಾಶ ಯಾತ್ರೆಯ ಆರಂಭಕ್ಕೆ ನಾಂದಿ ಹಾಡಿತ್ತು.



1969ರಲ್ಲಿ, ಸ್ವಾತಂತ್ರ್ಯ ದಿನಾಚರಣೆಯಂದು, ಇಂಡಿಯನ್ ನ್ಯಾಷನಲ್ ಕಮಿಟಿ ಫಾರ್ ಸ್ಪೇಸ್ ರಿಸರ್ಚ್ (ಇನ್ಕೋಸ್ಪಾರ್) ಅನ್ನು ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ (ಇಸ್ರೋ) ಆಗಿ ಮರು ರೂಪಿಸಲಾಯಿತು. ಇಸ್ರೋ ವಿಸ್ತೃತ ವಿನ್ಯಾಸ ಮತ್ತು ಸ್ಪಷ್ಟತೆಯೊಡನೆ ಭಾರತದ ಬಾಹ್ಯಾಕಾಶ ಸಾಮರ್ಥ್ಯದ ಗಡಿಗಳನ್ನು ವಿಸ್ತರಿಸತೊಡಗಿತು. 1975ರಲ್ಲಿ ಇಸ್ರೋ ಭಾರತದ ಪ್ರಾಚೀನ, ಪ್ರಸಿದ್ಧ ಗಣಿತಶಾಸ್ತ್ರಜ್ಞ ಮತ್ತು ಖಗೋಳಶಾಸ್ತ್ರಜ್ಞ ಆರ್ಯಭಟನ ಹೆಸರಿನಲ್ಲಿ ಭಾರತದ ಮೊದಲ ಉಪಗ್ರಹವನ್ನು ಉಡಾವಣೆಗೊಳಿಸಿತು. ಇದು ಭಾರತದ ಬಾಹ್ಯಾಕಾಶ ಹಾದಿಯಲ್ಲಿ ಪ್ರಮುಖ ಮೈಲಿಗಲ್ಲಾಗಿತ್ತು. ಉಪಗ್ರಹವನ್ನು ಸೋವಿಯತ್ ರಾಕೆಟ್ ಮೂಲಕ ಉಡಾವಣೆಗೊಳಿಸಿದ್ದರೂ, ಆರ್ಯಭಟ ಉಪಗ್ರಹದ ಸಂಪೂರ್ಣ ವಿನ್ಯಾಸ ಮತ್ತು ನಿರ್ಮಾಣವನ್ನು ಇಸ್ರೋ ತಾನೇ ನಡೆಸಿತ್ತು. ಈ ಮೂಲಕ ಭಾರತ ತಾನು ಕನಿಷ್ಠ ಸಂಪನ್ಮೂಲಗಳನ್ನು ಹೊಂದಿದ್ದರೂ, ಅತ್ಯಾಧುನಿಕ ಬಾಹ್ಯಾಕಾಶ ತಂತ್ರಜ್ಞಾನಗಳನ್ನು ನಿರ್ಮಿಸಬಲ್ಲೆ ಎಂದು ಸಾಬೀತುಪಡಿಸಿತ್ತು.

1980ರ ದಶಕ ಭಾರತದ ಬಾಹ್ಯಾಕಾಶ ಕ್ಷೇತ್ರದಲ್ಲಿ ಹೊಸ ಇತಿಹಾಸ ನಿರ್ಮಾಣಕ್ಕೆ ಸಾಕ್ಷಿಯಾಯಿತು. 1984ರಲ್ಲಿ ರಾಕೇಶ್ ಶರ್ಮಾ ಬಾಹ್ಯಾಕಾಶಕ್ಕೆ ತೆರಳಿದ ಪ್ರಥಮ ಭಾರತೀಯ ಎಂಬ ಕೀರ್ತಿಗೆ ಪಾತ್ರರಾದರು. ಇದಕ್ಕೂ ಮುನ್ನ ರಾಕೇಶ್ ಶರ್ಮಾ ಕಠಿಣ ತರಬೇತಿಗೆ ಒಳಗಾಗಿದ್ದರು. ಈ ತರಬೇತಿಯಲ್ಲಿ ಕೇವಲ ಮೂರು ತಿಂಗಳ ಒಳಗಾಗಿ ರಷ್ಯನ್ ಭಾಷೆ ಕಲಿಯುವುದು, ಕೃತಕ ಹಾರಾಟದಲ್ಲಿ 74 ಗಂಟೆ ಉಳಿಯುವುದು, ಮತ್ತು ಒಲಿಂಪಿಕ್ ತರಬೇತಿದಾರರ ಪರೀಕ್ಷೆಗಳಲ್ಲಿ ಉತ್ತೀರ್ಣರಾಗುವುದೂ ಸೇರಿತ್ತು. ಇದಾದ ಬಳಿಕ, ಸೋವಿಯತ್ ಒಕ್ಕೂಟದ ಜೊತೆಗಿನ ಜಂಟಿ ಯೋಜನೆಯ ಭಾಗವಾಗಿ, ರಾಕೇಶ್ ಶರ್ಮಾ ಬಾಹ್ಯಾಕಾಶದಲ್ಲಿ ಏಳು ದಿನಗಳ ಕಾಲ ವಾಸಿಸಿದರು. ಬಾಹ್ಯಾಕಾಶದಿಂದ ನೋಡುವಾಗ ಭಾರತ ಹೇಗೆ ಕಾಣಿಸಿತು ಎಂಬ ಪ್ರಶ್ನೆಗೆ ರಾಕೇಶ್ ಶರ್ಮಾ ಸಾರೇ ಜಹಾಂಸೆ ಅಚ್ಛಾ ಎಂದು ಉತ್ತರಿಸಿದ್ದು ಸಮಸ್ತ ಭಾರತೀಯರಿಗೂ ಹೆಮ್ಮೆಯ ಕ್ಷಣವಾಗಿತ್ತು. ಸ್ವಾತಂತ್ರ್ಯ ಹೋರಾಟದ ಸಂದರ್ಭದಲ್ಲಿ ಪ್ರಸಿದ್ಧವಾಗಿದ್ದ ಗೀತೆಯ ಈ ಸಾಲುಗಳು, ಭಾರತದ ಉತ್ಕರ್ಷವನ್ನು ಇನ್ನು ಯಾರಿಂದಲೂ ತಡೆಯಲು ಸಾಧ್ಯವಿಲ್ಲ ಎಂಬ ಸಂದೇಶವನ್ನು ಜಗತ್ತಿಗೆ ರವಾನಿಸಿತ್ತು.

ನಂತರದ ದಶಕಗಳಲ್ಲಿ, ಇಸ್ರೋ ಸಮರ್ಥ ರಾಕೆಟ್‌ಗಳ ನಿರ್ಮಾಣ ನಡೆಸಲಾರಂಭಿಸಿತು. ಇಸ್ರೋ ಮೊದಲಿಗೆ ಪಿಎಸ್‌ಎಲ್‌ವಿ (ಪೋಲಾರ್ ಸ್ಯಾಟಲೈಟ್ ಲಾಂಚ್ ವೆಹಿಕಲ್) ಮತ್ತು ಬಳಿಕ ಜಿಎಸ್‌ಎಲ್‌ವಿ (ಜಿಯೋಸಿಂಕ್ರೊನಸ್ ಸ್ಯಾಟಲೈಟ್ ಲಾಂಚ್ ವೆಹಿಕಲ್) ಅಭಿವೃದ್ಧಿ ಪಡಿಸಿತು. ಆದರೆ, ಆಧುನಿಕ ರಾಕೆಟ್‌ಗಳನ್ನು ನಿರ್ಮಿಸಲು ಕ್ರಯೋಜನಿಕ್ ಇಂಜಿನ್ ತಂತ್ರಜ್ಞಾನದ ಅವಶ್ಯಕತೆ ಇತ್ತು. ಕ್ರಯೋಜನಿಕ್ ಇಂಜಿನ್ ಹೆಚ್ಚಿನ ಥ್ರಸ್ಟ್ ಮತ್ತು ದಕ್ಷತೆ ಒದಗಿಸುವ ಸಲುವಾಗಿ ದ್ರವ ಜಲಜನಕ ಮತ್ತು ದ್ರವ ಆಮ್ಲಜನಕಗಳನ್ನು ಬಳಸುತ್ತದೆ. ಭಾರತ ಈ ತಂತ್ರಜ್ಞಾನವನ್ನು ಜಪಾನ್, ಯುರೋಪ್ ಮತ್ತು ರಷ್ಯಾಗಳಿಂದ ಪಡೆಯಲು ಪ್ರಯತ್ನಿಸಿದಾಗ ಹಲವು ಅಡೆತಡೆಗಳು ತಲೆದೋರಿ, ಅದನ್ನು ಭಾರತ ಮಿಲಿಟರಿ ಬಳಕೆ ಮಾಡಬಹುದು ಎಂದು ಶಂಕಿಸಿ ಅಮೆರಿಕಾ ನಿರ್ಬಂಧ ಗಳನ್ನು ಹೇರಿತು. ಆದರೆ, ಭಾರತ ದಿಟ್ಟ ಹೆಜ್ಜೆಗಳನ್ನಿಟ್ಟು, 2000ನೇ ದಶಕದ ಆರಂಭದಲ್ಲಿ ತನ್ನದೇ ಆದ ಸ್ವಂತ ಕ್ರಯೋ ಜನಿಕ್ ಇಂಜಿನ್ ಅಭಿವೃದ್ಧಿ ಪಡಿಸಿತು. ಆ ಮೂಲಕ ಬಾಹ್ಯಾಕಾಶ ತಂತ್ರಜ್ಞಾನದಲ್ಲಿ ಸ್ವಾವಲಂಬನೆ ಸಾಧಿಸುವುದು ತನ್ನ ಗುರಿ ಎಂದು ಭಾರತ ಸ್ಪಷ್ಟಪಡಿಸಿತು.


ಟೀಕಾಕಾರರು, ಅದರಲ್ಲೂ ವಿಶೇಷವಾಗಿ ಪಾಶ್ಚಾತ್ಯ ದೇಶಗಳು ಭಾರತದ ಬಾಹ್ಯಾಕಾಶ ಮಹತ್ವಾಕಾಂಕ್ಷೆಗಳನ್ನು ಟೀಕಿಸುತ್ತಲೇ ಬಂದಿದ್ದರು. ಅಪಾರ ಪ್ರಮಾಣದಲ್ಲಿ ಬಡತನ ಹೊಂದಿರುವ ಭಾರತದಂತಹ ದೇಶ ನಕ್ಷತ್ರಗಳನ್ನು ತಲುಪುವ ಕನಸು ಕಾಣಬಾರದು ಎನ್ನುವುದು ಆ ದೇಶಗಳ ಅಭಿಪ್ರಾಯವಾಗಿತ್ತು. ಭಾರತೀಯ ವಿಜ್ಞಾನಿಗಳು ವಾದದ ಮೂಲಕ ಉತ್ತರಿಸುವ ಬದಲು, ಒಂದಾದ ನಂತರ ಒಂದರಂತೆ ಸಾಲು ಸಾಲು ಸಾಧನೆಗಳ ಮೂಲಕವೇ ಉತ್ತರಿಸಿದರು. 2008ರಲ್ಲಿ ಭಾರತದ ಮೊದಲ ಚಂದ್ರ ಅನ್ವೇಷಣಾ ಯೋಜನೆಯಾದ ಚಂದ್ರಯಾನ - 1 ಕೇವಲ ಚಂದ್ರನ ಮೇಲ್ಮೈ ಪರಿಭ್ರಮಣೆ ನಡೆಸಲು ಯಶಸ್ವಿಯಾಗಿದ್ದು ಮಾತ್ರವಲ್ಲ, ಬದಲಿಗೆ, ಚಂದ್ರನ ಅಂಗಳದಲ್ಲಿ ನೀರಿನ ಇರುವಿಕೆಯನ್ನೂ ಪತ್ತೆಹಚ್ಚಿತು. ಆ ಮೂಲಕ, ಜಗತ್ತಿನಾದ್ಯಂತ ವಿಜ್ಞಾನಿಗಳ ಕುತೂಹಲ ಕೆರಳಿಸಿತು. ಇದಾದ ಬಳಿಕ, ಇನ್ನಷ್ಟು ಮಹತ್ವಾಕಾಂಕ್ಷೆಯ ಮಾರ್ಸ್ ಆರ್‌ಬಿಟರ್ ಮಿಷನ್ ಅಥವಾ ಮಂಗಳಯಾನ 2013ರಲ್ಲಿ ಉಡಾವಣೆಗೊಂಡಿತು.

ಮಂಗಳಯಾನ ಯೋಜನೆಯ ಯಶಸ್ಸಿನ ಮೂಲಕ ಭಾರತ ಮಂಗಳ ಗ್ರಹವನ್ನು ತಲುಪಿದ ಏಷ್ಯಾದ ಮೊದಲ ರಾಷ್ಟ್ರ ಮತ್ತು ಜಗತ್ತಿನ ನಾಲ್ಕನೇ ರಾಷ್ಟ್ರ ಎಂಬ ಕೀರ್ತಿ ಸಂಪಾದಿಸಿತು. ಭಾರತ ಮೊದಲ ಪ್ರಯತ್ನದಲ್ಲೇ ಈ ಸಾಧನೆ ಮಾಡಿದ್ದು, ಅಲ್ಲಿಯ ತನಕ ಯಾವ ದೇಶವೂ ಮೊದಲ ಪ್ರಯತ್ನದಲ್ಲೇ ಮಂಗಳ ಗ್ರಹವನ್ನು ತಲುಪಿರಲಿಲ್ಲ. ಈ ಯಶಸ್ಸನ್ನು ಇನ್ನಷ್ಟು ಮಹತ್ವದ್ದಾಗಿಸಿದ ವಿಚಾರವೆಂದರೆ, ಭಾರತ ಮಂಗಳಯಾನ ಯೋಜನೆಯನ್ನು ಕೇವಲ 74 ಮಿಲಿಯನ್ ಡಾಲರ್ ಮೊತ್ತದಲ್ಲಿ ಪೂರೈಸಿತ್ತು. ಇದು ಜಗತ್ತಿನಲ್ಲೇ ಅತ್ಯಂತ ಕಡಿಮೆ ವೆಚ್ಚದಲ್ಲಿ ನಡೆಸಿದ ಅಂತರ ಗ್ರಹ ಅನ್ವೇಷಣಾ ಯೋಜನೆ ಎನಿಸಿಕೊಂಡಿತು. ಇನ್ನೂ ಸರಳವಾಗಿ ಹೇಳುವುದಾದರೆ, ಈ ಯೋಜನೆಯಲ್ಲಿ ಪ್ರತಿ ಕಿಲೋಮೀಟರ್ ಪ್ರಯಾಣಕ್ಕೆ ತಗಲಿದ ವೆಚ್ಚ, ಪ್ರತಿ ಕಿಲೋಮೀಟರ್ ಪ್ರಯಾಣಕ್ಕೆ ಬೆಂಗಳೂರಿನಂತಹ ನಗರದ ಆಟೋ ದರಕ್ಕಿಂತಲೂ ಕಡಿಮೆಯಾಗಿತ್ತು. ಎಷ್ಟೋ ವೈಜ್ಞಾನಿಕ ಚಲನಚಿತ್ರ ನಿರ್ಮಾಣಕ್ಕೂ ಇದಕ್ಕಿಂತ ಹೆಚ್ಚಿನ ಹಣ ವೆಚ್ಚ ಮಾಡಲಾಗಿದೆ! ಈ ಸಾಧನೆಗೆ ಜಗತ್ತು ಮೆಚ್ಚಿ, ಭಾರತವನ್ನು ಶ್ಲಾಘಿಸಬೇಕಿತ್ತು.

ಆದರೆ, ಒಂದಷ್ಟು ಪಾಶ್ಚಾತ್ಯ ದೇಶಗಳು ಭಾರತವನ್ನು ಟೀಕಿಸುವುದನ್ನೇ ಕಾಯಕವಾಗಿಸಿದವು. ನ್ಯೂಯಾರ್ಕ್ ಟೈಮ್ಸ್ ಪತ್ರಿಕೆ ಹಸುವಿನ ಜೊತೆ ಇರುವ ರೈತನೊಬ್ಬ ಪ್ರತಿಷ್ಠಿತ ಬಾಹ್ಯಾಕಾಶ ಕ್ಲಬ್‌ಗೆ ಪ್ರವೇಶ ಕೋರುವ ವ್ಯಂಗ್ಯಚಿತ್ರವನ್ನು ಪ್ರಕಟಿಸಿತ್ತು. ಇದರ ಬೆನ್ನಲ್ಲೇ ಕಂಡುಬಂದ ಜಾಗತಿಕ ಆಕ್ರೋಶದ ಪರಿಣಾಮವಾಗಿ, ನ್ಯೂಯಾರ್ಕ್ ಟೈಮ್ಸ್ ಪತ್ರಿಕೆ ಕ್ಷಮೆ ಕೋರಬೇಕಾಯಿತು. ಇಷ್ಟೆಲ್ಲ ಆಗುತ್ತಿದ್ದರೂ, ಭಾರತ ಯಾವುದೇ ಋಣಾತ್ಮಕ ಅಂಶಗಳಿಗೆ ತಲೆ ಕೆಡಿಸಿಕೊಳ್ಳದೆ, ತನ್ನ ಗುರಿಗಳನ್ನು ಸಾಧಿಸುವತ್ತ ಗಮನ ಮುಂದುವರಿಸಿತ್ತು. ಇದರ ಬಳಿಕ 2019ರಲ್ಲಿ ನಡೆಸಿದ ಚಂದ್ರಯಾನ 2 ಯೋಜನೆ ಭಾರತಕ್ಕೆ ಅರ್ಧ ಯಶಸ್ಸು ನೀಡಿತು. ಆದರೆ 2023ರಲ್ಲಿ ಕೈಗೊಂಡ ಐತಿಹಾಸಿಕ ಚಂದ್ರಯಾನ 3 ಯೋಜನೆಯಲ್ಲಿ ಭಾರತ ಚಂದ್ರನ ದಕ್ಷಿಣ ಧ್ರುವ ಪ್ರದೇಶದಲ್ಲಿ ಸಾಫ್ಟ್ ಲ್ಯಾಂಡಿಂಗ್ ನಡೆಸಲು ಯಶಸ್ವಿಯಾಯಿತು.

ಈ ಐತಿಹಾಸಿಕ ಸಾಧನೆಯನ್ನು ಭಾರತ ಕೇವಲ 75 ಮಿಲಿಯನ್ ಡಾಲರ್ ವೆಚ್ಚದಲ್ಲಿ ಪೂರ್ಣಗೊಳಿಸಿತ್ತು. ಚಂದ್ರನ ದಕ್ಷಿಣ ಧ್ರುವದಲ್ಲಿ ಇಳಿದ ಮೊದಲ ರಾಷ್ಟ್ರ ಎಂಬ ಸಾಧನೆಯನ್ನು ಭಾರತ ನಿರ್ಮಿಸಿದ್ದು, ಇದರೊಂದಿಗೆ ಬಾಹ್ಯಾಕಾಶ ಅನ್ವೇಷಣೆಯ ಚರಿತ್ರೆಯಲ್ಲಿ ಶಾಶ್ವತ ಸ್ಥಾನ ಸಂಪಾದಿಸಿತು. ಅದೇ ವರ್ಷ, ಇಸ್ರೋ ಭಾರತದ ಮೊದಲ ಸೂರ್ಯ ಅನ್ವೇಷಣಾ ಯೋಜನೆಯಾದ ಆದಿತ್ಯ ಎಲ್ 1 ಅನ್ನು ಕೈಗೆತ್ತಿಕೊಂಡಿತು. ಇದಕ್ಕಾಗಿ ಬಾಹ್ಯಾಕಾಶ ನೌಕೆಯೊಂದನ್ನು ಸೂರ್ಯ ಮತ್ತು ಭೂಮಿಯ ಲ್ಯಾಗ್ರಾಂಜ್ ಬಿಂದುವಿನಲ್ಲಿ ಇರಿಸಿ, ಸೌರ ಮಾರುತಗಳು, ಸೌರ ಜ್ವಾಲೆಗಳು ಮತ್ತು ಕೊರೋನಲ್ ಮಾಸ್ ಇಜೆಕ್ಷನ್‌ಗಳನ್ನು ಗಮನಿಸಲು ಆರಂಭಿಸಿತು. ಇದು ಭೂಮಿಯ ಉಪಗ್ರಹಗಳು ಮತ್ತು ಸಂವಹನಾ ವ್ಯವಸ್ಥೆಗಳನ್ನು ಕಾಪಾಡಿಕೊಳ್ಳಲು ಅತ್ಯಂತ ಮುಖ್ಯವಾಗಿದೆ.

ರಾಕೇಶ್ ಶರ್ಮಾ ಬಾಹ್ಯಾಕಾಶಕ್ಕೆ ತೆರಳಿದ 41 ವರ್ಷಗಳ ಬಳಿಕ, 2025ರಲ್ಲಿ, ಶುಭಾಂಶು ಶುಕ್ಲಾ ಬಾಹ್ಯಾಕಾಶಕ್ಕೆ ತೆರಳಿದಾಗ ಭಾರತ ಇನ್ನೊಂದು ಬಾಹ್ಯಾಕಾಶ ಮೈಲಿಗಲ್ಲು ಸ್ಥಾಪಿಸಿತು. ಈ ಮೂಲಕ ಶುಭಾಂಶು ಶುಕ್ಲಾ ಬಾಹ್ಯಾಕಾಶಕ್ಕೆ ತೆರಳಿದ ಎರಡನೇ ಭಾರತೀಯ ಎನಿಸಿದರು. ನಾಸಾದ ಕೆನೆಡಿ ಬಾಹ್ಯಾಕಾಶ ಕೇಂದ್ರದಿಂದ ಉಡಾವಣೆಗೊಂಡ ಖಾಸಗಿ ಬಾಹ್ಯಾಕಾಶ ಯೋಜನೆಯಾದ ಆಕ್ಸಿಯಮ್ ಸ್ಪೇಸ್ ಮಿಷನ್ 4 ಮೂಲಕ ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣಕ್ಕೆ ತೆರಳಿದ ಶುಭಾಂಶು ಶುಕ್ಲಾ, ತನ್ನೊಡನೆ 140 ಕೋಟಿ ಭಾರತೀಯರ ನಿರೀಕ್ಷೆಗಳನ್ನೂ ಹೊತ್ತೊಯ್ದರು. ಸಮಸ್ತ ದೇಶ ಶುಕ್ಲಾ ಸಾಧನೆಯನ್ನು ವೀಕ್ಷಿಸಿ, ಸಂಭ್ರಮಿಸಿತು.







ಇಂದು ಭಾರತದ ಬಾಹ್ಯಾಕಾಶ ಉದ್ಯಮ 8.4 ಬಿಲಿಯನ್ ಡಾಲರ್ ಮೌಲ್ಯ ಹೊಂದಿದ್ದು, ಜಾಗತಿಕ ಬಾಹ್ಯಾಕಾಶ ಮಾರುಕಟ್ಟೆಯಲ್ಲಿ ಅಂದಾಜು 2% ಪಾಲು ಹೊಂದಿದೆ. ಭಾರತ 2033ರ ವೇಳೆಗೆ ತನ್ನ ಬಾಹ್ಯಾಕಾಶ ಆರ್ಥಿಕತೆಯನ್ನು 44 ಬಿಲಿಯನ್ ಡಾಲರ್‌ಗೆ ವೃದ್ಧಿಸಿ, ಜಾಗತಿಕ ಮಾರುಕಟ್ಟೆಯಲ್ಲಿ 8% ಪಾಲು ಹೊಂದುವ ನಿಟ್ಟಿನಲ್ಲಿ ಸರಿಯಾದ ದಿಕ್ಕಿನಲ್ಲಿ ಹೆಜ್ಜೆ ಇಡುತ್ತಿದೆ. ಈ ಸಮಗ್ರ ಬದಲಾವಣೆಗೆ ಸರ್ಕಾರದ ಉತ್ತಮ ಬೆಂಬಲ, ಕ್ಷಿಪ್ರ ತಾಂತ್ರಿಕ ನಾವೀನ್ಯತೆ, ಇಸ್ರೋದ ಸಂಶೋಧನಾ ಆಧಾರಿತ ವಿಧಾನ, ಮತ್ತು ಖಾಸಗಿ ಸಂಸ್ಥೆಗಳ ಹೆಚ್ಚಿನ ಪಾಲ್ಗೊಳ್ಳುವಿಕೆಗಳು ಕಾರಣ ವಾಗಿದ್ದವು. ಐದು ವರ್ಷಗಳ ಹಿಂದೆ ಭಾರತದಲ್ಲಿ 50ಕ್ಕೂ ಕಡಿಮೆ ಬಾಹ್ಯಾಕಾಶ ಸ್ಟಾರ್ಟಪ್ ಸಂಸ್ಥೆಗಳಿದ್ದು, ಈಗ ಅವುಗಳ ಸಂಖ್ಯೆ 200ನ್ನೂ ಮೀರಿದೆ. ಇದು ಭಾರತೀಯ ಬಾಹ್ಯಾಕಾಶ ವಲಯದ ಪ್ರಗತಿಯ ಪ್ರತಿನಿಧಿಯಾಗಿದೆ.

ಮುಂದಿನ ದಿನಗಳಲ್ಲಿ ಬಾಹ್ಯಾಕಾಶ ಗಡಿಗಳನ್ನು ವಿಸ್ತರಿಸುವಂತಹ ಮಹತ್ವಾಕಾಂಕ್ಷಿ ಯೋಜನೆಗಳನ್ನು ಭಾರತ ಹಾಕಿಕೊಂಡಿದೆ. ಮಾನವ ಸಹಿತ ಬಾಹ್ಯಾಕಾಶ ಯಾನವಾದ ಗಗನಯಾನ ಯೋಜನೆ 2027ರಲ್ಲಿ ನಡೆಯುವ ನಿರೀಕ್ಷೆಗಳಿದ್ದು, ಮೂವರು ಗಗನಯಾತ್ರಿಗಳನ್ನು ಬಾಹ್ಯಾಕಾಶಕ್ಕೆ ಒಯ್ಯಲಿದೆ. ಆ ಮೂಲಕ ಮಾನವ ಸಹಿತ ಬಾಹ್ಯಾಕಾಶ ಸಾಮರ್ಥ್ಯವುಳ್ಳ ದೇಶಗಳ ಸಾಲಿಗೆ ಭಾರತ ಹೆಜ್ಜೆ ಇಡಲಿದೆ. ಇನ್ನು 2035ರ ವೇಳೆಗೆ ಭಾರತ ಭಾರತೀಯ ಅಂತರಿಕ್ಷ ಸ್ಟೇಷನ್ ಎಂಬ ತನ್ನ ಸ್ವಂತ ಬಾಹ್ಯಾಕಾಶ ನಿಲ್ದಾಣವನ್ನು ಸ್ಥಾಪಿಸುವ ಗುರಿ ಹಾಕಿಕೊಂಡಿದ್ದು, 2040ರ ಸಮಯದಲ್ಲಿ ಚಂದ್ರನ ಅಂಗಳಕ್ಕೆ ಭಾರತೀಯ ಗಗನಯಾತ್ರಿಯನ್ನು ಕಳುಹಿಸಲು ಯೋಜಿಸಿದೆ. ಈ ಗುರಿಗಳು ಅತ್ಯಂತ ಮಹತ್ವಾಕಾಂಕ್ಷಿಯಾಗಿ ತೋರಿ, ಸಾಧಿಸಲು ಸಾಧ್ಯವೇ ಎಂಬ ಅನುಮಾನಗಳು ಕಾಣಬಹುದು. ಆದರೆ, ಬಹುತೇಕ ಅಸಾಧ್ಯ ಎಂದು ಭಾವಿಸಲಾದ ಯೋಜನೆಗಳನ್ನೂ ಭಾರತ ಕನಿಷ್ಠ ಸಂಪನ್ಮೂಲಗಳ ಲಭ್ಯತೆಯಲ್ಲೂ ಯಶಸ್ವಿಯಾಗಿ ಪೂರ್ಣಗೊಳಿಸಿದ ಇತಿಹಾಸ ನಮ್ಮ ಕಣ್ಣ ಮುಂದಿದೆ. ಆದ್ದರಿಂದ ಈ ಗುರಿಗಳೂ ಭಾರತದ ಕೈಯಳತೆಯಲ್ಲೇ ಇವೆ.

ಬೈಸಿಕಲ್ ಮೇಲೆ ರಾಕೆಟ್ ಬಿಡಿಭಾಗಗಳನ್ನು ಹೊತ್ತು ಸಾಗುತ್ತಿದ್ದ ದೇಶ ಇಂದು ಚಂದ್ರನ ಮೇಲೆ ಲ್ಯಾಂಡಿಂಗ್ ನಡೆಸಿರುವುದನ್ನು, ಮೀನುಗಾರಿಕಾ ಹಳ್ಳಿಯನ್ನು ಉಡಾವಣಾ ತಾಣವಾಗಿಸಿದ ಇಸ್ರೋ ಇಂದು ಮಂಗಳ ಗ್ರಹದಲ್ಲಿ ಇಳಿಯಲು ಯಶಸ್ವಿಯಾಗಿರುವುದನ್ನು ಸ್ಮರಿಸಲು, ಒಂದು ಕಾಲದಲ್ಲಿ ನಿರ್ಬಂಧಗಳನ್ನು ಎದುರಿಸಿದ ದೇಶ ಇಂದು ಎಲ್ಲ ದೇಶಗಳಿಗೂ ಬೇಕಾದ ಬಾಹ್ಯಾಕಾಶ ಸಹಯೋಗಿಯಾಗಿ ಬೆಳೆದಿರುವುದನ್ನು ನೆನೆಯಲು ರಾಷ್ಟ್ರೀಯ ಬಾಹ್ಯಾಕಾಶ ದಿನವನ್ನು ಆಚರಿಸಲಾಗುತ್ತಿದೆ. ಈ ದಿನ ಕೇವಲ ತಾಂತ್ರಿಕ ಸಾಧನೆಗಳನ್ನು ಸಂಭ್ರಮಿಸುವುದು ಮಾತ್ರವಲ್ಲದೆ, ಭಾರತದ ಬಾಹ್ಯಾಕಾಶ ಅನ್ವೇಷಣಾ ವಿಧಾನವನ್ನು ವಿವರಿಸುವ ನಾವೀನ್ಯತೆಗಳ ಪ್ರಯತ್ನ, ಸಮರ್ಥ ಇಂಜಿನಿಯರಿಂಗ್‌ಗಳನ್ನೂ ಗೌರವಿಸುತ್ತದೆ. ಬಾಹ್ಯಾಕಾಶ ಅನ್ವೇಷಣೆಗೆ ಮಿತಿಯಿಲ್ಲದ ಹಣಕಾಸಿನ ಪೂರೈಕೆಯ ಅವಶ್ಯಕತೆ ಇಲ್ಲ, ಯಾವುದೇ ರಾಷ್ಟ್ರ ತನ್ನೊಳಗೆ ಮಹತ್ವಾಕಾಂಕ್ಷೆ ಹೊಂದಿ, ಸಾಧಿಸುವ ಬಯಕೆ ಹೊಂದಿದ್ದರೆ, ಅದಕ್ಕೆ ಆಗಸವೂ ಮಿತಿಯಲ್ಲ ಎನ್ನುವುದನ್ನು ಭಾರತ ಸಾಬೀತುಪಡಿಸಿದೆ. ಭಾರತದ ಬಾಹ್ಯಾಕಾಶ ಗಾಥೆ ಮಿಲಿಯಾಂತರ ಜನರಿಗೆ ಸ್ಫೂರ್ತಿ ನೀಡಿದ್ದು, ಬದ್ಧತೆ, ವೈಜ್ಞಾನಿಕತೆ, ಮತ್ತು ದೃಢ ನಿರ್ಧಾರಗಳು ಎಂತಹ ಕನಸನ್ನೂ ನನಸಾಗಿಸಬಲ್ಲವು ಎಂದು ಜಗತ್ತಿಗೆ ಪ್ರದರ್ಶಿಸಿದೆ.

(ಗಿರೀಶ್ ಲಿಂಗಣ್ಣ ಅವರು ವಿಜ್ಞಾನ ಬರಹಗಾರ, ರಕ್ಷಣೆ, ಏರೋಸ್ಪೇಸ್, ಮತ್ತು ರಾಜಕೀಯ ವಿಶ್ಲೇಷಕರಾಗಿದ್ದು, ಬೆಂಗಳೂರಿನಲ್ಲಿ ನೆಲೆಸಿದ್ದಾರೆ. ಅವರು ಜರ್ಮನಿಯ ಎಡಿಡಿ ಇಂಜಿನಿಯರಿಂಗ್ ಜಿಎಂಬಿಎಚ್ ಸಂಸ್ಥೆಯ ಅಂಗಸಂಸ್ಥೆಯಾದ ಎಡಿಡಿ ಇಂಜಿನಿಯರಿಂಗ್ ಕಾಂಪೊನೆಂಟ್ಸ್ ಇಂಡಿಯಾ ಪ್ರೈವೇಟ್ ಲಿಮಿಟೆಡ್ ಸಂಸ್ಥೆಯ ನಿರ್ದೇಶಕರಾಗಿದ್ದಾರೆ. ಗಿರೀಶ್ ಲಿಂಗಣ್ಣ ಅವರನ್ನು ಸಂಪರ್ಕಿಸಲು ಇಮೇಲ್ ವಿಳಾಸ: girishlinganna@gmail.com)

**- ಗಿರೀಶ್ ಲಿಂಗಣ್ಣ,** (ಲೇಖಕರು ಬಾಹ್ಯಾಕಾಶ ಮತ್ತು ರಕ್ಷಣಾ ವಿಶ್ಲೇಷಕ)

### ಭಾರತವು ಎರಡನೇ ರಾಷ್ಟ್ರೀಯ ಬಾಹ್ಯಾಕಾಶ ದಿನವನ್ನು ಆಚರಿಸಲಿದೆ...

- ಚಂದ್ರಯಾನ-3 ಮಿಷನ್ ಆಗಸ್ಟ್ 23, 2023 ರಂದು ಚಂದ್ರನ ಮೇಲ್ಮೈಯಲ್ಲಿ ವಿಕ್ರಮ್ ಲ್ಯಾಂಡರ್ ಅನ್ನು ಸುರಕ್ಷಿತ ಮತ್ತು ಮೃದುವಾಗಿ ಇಳಿಸಿತು. ಇದರೊಂದಿಗೆ, ಭಾರತವು ಚಂದ್ರನ ಮೇಲೆ ಇಳಿದ ನಾಲ್ಕನೇ ದೇಶವಾಯಿತು ಮತ್ತು ಚಂದ್ರನ ದಕ್ಷಿಣ ಧ್ರುವ ಪ್ರದೇಶದ ಬಳಿ ಇಳಿದ ಮೊದಲ ದೇಶವಾಯಿತು. ಮೃದುವಾಗಿ ಇಳಿದ ನಂತರ ಪ್ರಜ್ಞಾನ್ ರೋವರ್ ಅನ್ನು ಯಶಸ್ವಿಯಾಗಿ ನಿಯೋಜಿಸಲಾಯಿತು. ಲ್ಯಾಂಡಿಂಗ್ ಸೈಟ್ ಅನ್ನು ಶಿವ ಶಕ್ತಿ ಬಿಂದು (ಸ್ಟೇಟಿಯೊ ಶಿವ ಶಕ್ತಿ) ಎಂದು ಹೆಸರಿಸಲಾಯಿತು ಮತ್ತು ಆಗಸ್ಟ್ 23 ಅನ್ನು ರಾಷ್ಟ್ರೀಯ ಬಾಹ್ಯಾಕಾಶ ದಿನ ಎಂದು ಘೋಷಿಸಲಾಯಿತು. ಭಾರತವು ತನ್ನ ಎರಡನೇ ರಾಷ್ಟ್ರೀಯ ಬಾಹ್ಯಾಕಾಶ ದಿನವನ್ನು ಆಗಸ್ಟ್ 23, 2025 ರಂದು ಆಚರಿಸಲಿದೆ.

### ವಿವರಣೆ

- ಘಟನೆ: ಚಂದ್ರಯಾನ-3 ಮಿಷನ್‌ನ ವಿಕ್ರಮ್ ಲ್ಯಾಂಡರ್ ಚಂದ್ರನ ಮೇಲೆ ಸುರಕ್ಷಿತವಾಗಿ ಮತ್ತು ಯಶಸ್ವಿಯಾಗಿ ಇಳಿದ ದಿನ.
- ದಿನಾಂಕ: 2023ರ ಆಗಸ್ಟ್ 23ರಂದು ಚಂದ್ರನ ಮೇಲೆ ಇಳಿಯಿತು.
- ರಾಷ್ಟ್ರೀಯ ಬಾಹ್ಯಾಕಾಶ ದಿನ: ಭಾರತದ ಆಗಸ್ಟ್ 23 ಅನ್ನು ರಾಷ್ಟ್ರೀಯ ಬಾಹ್ಯಾಕಾಶ ದಿನ ಎಂದು ಘೋಷಿಸಲಾಗಿದೆ.
- ಸಂಬಂಧಿತ ಘಟನೆ: ಭಾರತವು ಚಂದ್ರನ ಮೇಲೆ ಲ್ಯಾಂಡಿಂಗ್ ಮಾಡಿದ ನಾಲ್ಕನೇ ದೇಶ, ಹಾಗೂ ಚಂದ್ರನ ದಕ್ಷಿಣ ಧ್ರುವದ ಬಳಿ ಇಳಿದ ಮೊದಲ ದೇಶ ಎಂಬ ಹೆಗ್ಗಳಿಕೆಗೆ ಪಾತ್ರವಾಯಿತು.

# ಶ್ರೀ ಗಣೇಶ ಚತುರ್ಥಿಯ ಬಗ್ಗೆ ನಿಮಗಿವು ತಿಳಿದಿವೆಯೇ?

ಗಣೇಶ ಚತುರ್ಥಿಯನ್ನು ಕುಟುಂಬದಲ್ಲಿ ಯಾರು ಆಚರಿಸಬೇಕು, ಗಣೇಶ ಚತುರ್ಥಿಯನ್ನು ಆಚರಿಸುವುದರ ಮಹತ್ವವೇನು, ಗಣೇಶ ಚತುರ್ಥಿಯಂದು ನೂತನ ಮೂರ್ತಿಯನ್ನು ಏಕೆ ತರಬೇಕು, ಗಣೇಶ ಮೂರ್ತಿಯು ಭಂಗವಾದರೆ ಅದರ ಪರಿಹಾರಗಳೇನು ಈ ವಿಷಯಗಳಿಗೆ ಸಂಬಂಧಪಟ್ಟ ಮಾಹಿತಿಯನ್ನು ಇಲ್ಲಿ ನೀಡುತ್ತಿದ್ದೇವೆ.

**ಕುಟುಂಬದಲ್ಲಿ ಯಾರು ಆಚರಿಸಬೇಕು?:** ಗಣೇಶ ಚತುರ್ಥಿಯಂದು ಆಚರಿಸಲಾಗುವ ವ್ರತವನ್ನು ಸಿದ್ಧಿವಿನಾಯಕ ವ್ರತ ಎನ್ನುತ್ತಾರೆ. ವಾಸ್ತವದಲ್ಲಿ ಇದನ್ನು ಎಲ್ಲ ಕುಟುಂಬಗಳೂ ಆಚರಿಸಬೇಕು. ಅಣ್ಣ ತಮ್ಮಂದಿರೆಲ್ಲರೂ ಒಟ್ಟಿಗೆ ಇದ್ದರೆ, ಅಂದರೆ ಅವರ ದ್ರವ್ಯಕೋಶ ಮತ್ತು ಪಾಕನಿಷ್ಪತ್ತಿ (ಒಲೆ) ಒಟ್ಟಿಗೆ ಇದ್ದರೆ ಎಲ್ಲರೂ ಸೇರಿ ಒಂದೇ ಮೂರ್ತಿಯ ಪೂಜೆಯನ್ನು ಮಾಡಬೇಕು; ಆದರೆ ದ್ರವ್ಯಕೋಶ ಮತ್ತು ಪಾಕನಿಷ್ಪತ್ತಿಯು ಕಾರಣಾಂತರದಿಂದ ವಿಭಕ್ತವಾಗಿದ್ದರೆ (ಬೇರೆ ಬೇರೆ) ಪ್ರತಿಯೊಬ್ಬರೂ ಅವರವರ ಮನೆಗಳಲ್ಲಿ ಸ್ವತಂತ್ರವಾಗಿ ಗಣೇಶವ್ರತವನ್ನು ಆಚರಿಸಬೇಕು.

**ಗಣೇಶಚತುರ್ಥಿಯ ಮಹತ್ವವೇನು?:** ಆಷಾಢ ಹುಣ್ಣಿಮೆಯಿಂದ ಕಾರ್ತಿಕ ಹುಣ್ಣಿಮೆಯವರೆಗಿನ 120 ದಿನಗಳ ಕಾಲದಲ್ಲಿ ವಿನಾಶಕಾರಿ, ತಮಪ್ರಧಾನ ಯಮಲಹರಿಗಳು ಪೃಥ್ವಿಯ ಮೇಲೆ ಹೆಚ್ಚು ಪ್ರಮಾಣದಲ್ಲಿ ಬರುತ್ತವೆ. ಈ ಸಮಯದಲ್ಲಿ ಅವುಗಳ ತೀವ್ರತೆಯೂ ಹೆಚ್ಚಿಗೆ ಇರುತ್ತದೆ. ಈ ಕಾಲಾವಧಿಯಲ್ಲಿ, ಅಂದರೆ ಭಾದ್ರಪದ ಶುಕ್ಲ ಚತುರ್ಥಿಯಿಂದ ಅನಂತ ಚತುರ್ದಶಿಯವರೆಗೆ ಗಣೇಶ ಲಹರಿಗಳು ಪೃಥ್ವಿಯ ಮೇಲೆ ಹೆಚ್ಚಿನ ಪ್ರಮಾಣದಲ್ಲಿ ಬರುವುದರಿಂದ ಯಮಲಹರಿಗಳ ತೀವ್ರತೆ ಕಡಿಮೆಯಾಗಲು ಸಹಾಯವಾಗುತ್ತದೆ.

**ಗಣೇಶ ಚತುರ್ಥಿಯಂದು ನೂತನ ಶ್ರೀ ಗಣೇಶ ಮೂರ್ತಿಯನ್ನು ತರುವ ಹಿಂದಿನ ಉದ್ದೇಶವೇನು?:** ಮನೆಯಲ್ಲಿ ಪೂಜೆಗಾಗಿ ಗಣಪತಿಯನ್ನು ಇಟ್ಟಿರುವಾಗಲೂ ನೂತನ ಮೂರ್ತಿಯನ್ನು ತರುವ ಉದ್ದೇಶವು ಮುಂದಿನಂತಿದೆ. ಗಣೇಶ ಚತುರ್ಥಿಯ ಸಮಯದಲ್ಲಿ ಗಣೇಶ ಲಹರಿಗಳು ಅತಿ ಹೆಚ್ಚಿನ ಪ್ರಮಾಣದಲ್ಲಿ ಪೃಥ್ವಿಯ ಮೇಲೆ ಬರುತ್ತವೆ. ನಿತ್ಯದ ಪೂಜೆಯಲ್ಲಿರುವ ಮೂರ್ತಿಯಲ್ಲಿ ಅವುಗಳ ಆವಾಹನೆ ಮಾಡಿದರೆ ಅದರಲ್ಲಿ ಬಹಳಷ್ಟು ಶಕ್ತಿ ಬರಬಹುದು. ಇಂತಹ ಹೆಚ್ಚು ಶಕ್ತಿ ಇರುವ ಮೂರ್ತಿಯ ಎಲ್ಲ ಬಗೆಯ ಪೂಜೆ-ಅರ್ಚನೆಗಳನ್ನು ವರ್ಷಪೂರ್ತಿ ಸರಿಯಾಗಿ ಮಾಡುವುದು ಕಠಿಣವಾಗಿರುತ್ತದೆ; ಏಕೆಂದರೆ ಅದಕ್ಕೆ ಕರ್ಮಕಾಂಡದ ಬಹಳಷ್ಟು ಬಂಧನಗಳನ್ನು ಪಾಲಿಸಬೇಕಾಗುತ್ತದೆ. ಈ ಕಾರಣಕ್ಕಾಗಿಯೇ ಗಣೇಶ ಲಹರಿಗಳನ್ನು ಆವಾಹನೆ ಮಾಡಲು ನೂತನ ಮೂರ್ತಿಯನ್ನು ಉಪಯೋಗಿಸಿ ನಂತರ ಅದನ್ನು ವಿಸರ್ಜನೆ ಮಾಡುತ್ತಾರೆ. ಗಣೇಶ ಲಹರಿಗಳಲ್ಲಿನ ಸತ್ತ್ವ, ರಜ ಮತ್ತು ತಮದ ಪ್ರಮಾಣವು 5:5:5 ಹೀಗಿದ್ದರೆ ಸರ್ವಸಾಧಾರಣ ವ್ಯಕ್ತಿಯಲ್ಲಿ ಅದರ ಪ್ರಮಾಣವು 1:3:5 ಹೀಗೆ ಇರುತ್ತದೆ; ಆದ್ದರಿಂದ ಸರ್ವಸಾಧಾರಣ ವ್ಯಕ್ತಿಯು ಗಣೇಶ ಲಹರಿಗಳನ್ನು ಹೆಚ್ಚು ಸಮಯದ ವರೆಗೆ ಗ್ರಹಣ ಮಾಡಲಾರನು.

ವಾಸ್ತವದಲ್ಲಿ ಇದನ್ನು ಎಲ್ಲ ಕುಟುಂಬಗಳೂ ಆಚರಿಸಬೇಕು. ಅಣ್ಣ ತಮ್ಮಂದಿರೆಲ್ಲರೂ ಒಟ್ಟಿಗೆ ಇದ್ದರೆ, ಅಂದರೆ ಅವರ ದ್ರವ್ಯಕೋಶ ಮತ್ತು ಪಾಕನಿಷ್ಪತ್ತಿ (ಒಲೆ) ಒಟ್ಟಿಗೆ ಇದ್ದರೆ ಎಲ್ಲರೂ ಸೇರಿ ಒಂದೇ ಮೂರ್ತಿಯ ಪೂಜೆಯನ್ನು ಮಾಡಬೇಕು; ಆದರೆ ದ್ರವ್ಯಕೋಶ ಮತ್ತು ಪಾಕನಿಷ್ಪತ್ತಿಯು ಕಾರಣಾಂತರದಿಂದ ವಿಭಕ್ತವಾಗಿದ್ದರೆ (ಬೇರೆ ಬೇರೆ) ಪ್ರತಿಯೊಬ್ಬರೂ ಅವರವರ ಮನೆಗಳಲ್ಲಿ ಸ್ವತಂತ್ರವಾಗಿ ಗಣೇಶವ್ರತವನ್ನು ಆಚರಿಸಬೇಕು.

**ಶಾಸ್ತ್ರೋಕ್ತ ವಿಧಿ ಮತ್ತು ರೂಢಿ ಇವುಗಳ ಅವಧಿ:** ಭಾದ್ರಪದ ಶುಕ್ಲ ಚತುರ್ಥಿಯ ದಿನ ಮಣ್ಣಿನ ಗಣಪತಿಯನ್ನು ತಯಾರಿಸಿ, ಅದನ್ನು ಎಡಗೈ ಮೇಲಿಟ್ಟು ಅಲ್ಲಿಯೇ ಸಿದ್ಧಿವಿನಾಯಕ ಹೆಸರಿನಿಂದ ಪ್ರಾಣಪ್ರತಿಷ್ಠೆ ಮತ್ತು ಪೂಜೆಯನ್ನು ಮಾಡಿ ಕೂಡಲೇ ವಿಸರ್ಜನೆ ಮಾಡಬೇಕು ಎಂಬ ಶಾಸ್ತ್ರವಿದೆ. ಆದರೆ ಮಾನವರು ಉತ್ಸವಪ್ರಿಯರಾಗಿರುವುದರಿಂದ ಇಷ್ಟರಿಂದಲೇ ಅವರಿಗೆ ಸಮಾಧಾನವಾಗಲಿಲ್ಲ. ಆದುದರಿಂದ ಒಂದೂವರೆ, ಐದು, ಏಳು ಅಥವಾ ಹತ್ತು ದಿನ ಗಣಪತಿಯ ಮೂರ್ತಿಯನ್ನು ಇಟ್ಟು ಉತ್ಸವ ಮಾಡತೊಡಗಿದರು. ಕೆಲವರು ಗಣಪತಿಯ ವಿಸರ್ಜನೆಯನ್ನು ಗೌರಿಯ ಜೊತೆಗೆ ಮಾಡುತ್ತಾರೆ. ಯಾರಾದರೊಬ್ಬರ ಕುಲದಲ್ಲಿ ಗಣಪತಿಯನ್ನು ಐದು ದಿನ ಇಡುವ ಪದ್ಧತಿ ಇದ್ದು ಅವರು ಅದನ್ನು ಒಂದೂವರೆ ಅಥವಾ ಏಳು ದಿನ ಇಡಬೇಕಾಗಿದ್ದರೆ ಅವರು ಹಾಗೆ ಮಾಡಬಹುದು. ಇದಕ್ಕೆ ಯಾವುದೇ ಅಧಿಕಾರಯುತ ವ್ಯಕ್ತಿಯನ್ನು ಕೇಳುವ ಆವಶ್ಯಕತೆಯಿಲ್ಲ. ತಮ್ಮ ರೂಢಿಗನುಸಾರ ಮೊದಲನೆಯ, ಎರಡನೆಯ, ಮೂರನೆಯ, ಆರನೆಯ, ಏಳನೆಯ ಅಥವಾ ಹತ್ತನೆಯ ದಿನ ಗಣೇಶಮೂರ್ತಿಯ ವಿಸರ್ಜನೆಯನ್ನು ಮಾಡಬೇಕು.


**ಗಣೇಶ ಮೂರ್ತಿಯು ಭಗ್ನವಾದರೆ ಏನು ಮಾಡಬೇಕು?:** ಮೂರ್ತಿಯ ಪ್ರಾಣಪ್ರತಿಷ್ಠೆಯನ್ನು ಮಾಡುವುದಕ್ಕಿಂತ ಮೊದಲು ಯಾವುದಾದರೊಂದು ಅವಯವಕ್ಕೆ ಏಟಾದರೆ ಅಥವಾ ಭಿನ್ನವಾದರೆ ಚಿಂತಿಸುವ ಕಾರಣವಿಲ್ಲ, ಅದರ ಬದಲು ಬೇರೆ ಮೂರ್ತಿಯನ್ನು ತಂದು ಪೂಜಿಸಬೇಕು. ವಿಸರ್ಜನೆಗಾಗಿ ಅಕ್ಷತೆ ಹಾಕಿದ ನಂತರ (ದೈವತ್ವವು ಹೋದ ನಂತರ) ಅವಯವಗಳಿಗೆ ಏಟಾದರೆ ಅಥವಾ ಭಿನ್ನವಾದರೆ ಆ ಮೂರ್ತಿಯನ್ನು ನಿತ್ಯದಂತೆ ವಿಸರ್ಜನೆ ಮಾಡಬೇಕು. ಪ್ರಾಣ ಪ್ರತಿಷ್ಠೆಯಾದ ನಂತರ ಅವಯವಕ್ಕೆ ಏಟಾದರೆ ಅಥವಾ ಮುರಿದರೆ ಆ ಮೂರ್ತಿಗೆ ಅಕ್ಷತೆಯನ್ನು ಅರ್ಪಿಸಿ ವಿಸರ್ಜಿಸಬೇಕು. ಈ ಘಟನೆಯು ಗಣೇಶ ಚತುರ್ಥಿಯ ದಿನವೇ ನಡೆದರೆ ಬೇರೆ ಮೂರ್ತಿಯನ್ನು ತಂದು ಪೂಜಿಸಬೇಕು. ಎರಡನೆಯ ಅಥವಾ ಮೂರನೆಯ ದಿನ ನಡೆದರೆ ಹೊಸ ಮೂರ್ತಿಯನ್ನು ತಂದು ಪೂಜಿಸಬೇಕಾಗಿಲ್ಲ. ಮೂರ್ತಿಯು ಸಂಪೂರ್ಣ ಭಗ್ನವಾದರೆ ಕುಲಪು ರೋಹಿತರ ಸಲಹೆಯಂತೆ ಯಥಾವಕಾಶ ಅದ್ಭುತ ದರ್ಶನ ಶಾಂತಿಯನ್ನು ಮಾಡಿಸಬೇಕು. ಗಣೇಶ ಚತುರ್ಥಿಯಂದು ದೀಪಪತನ (ದೀಪ ಆರಿ ಹೋಗುವುದು), ಅರೆಯುವ ಕಲ್ಲು, ಬೀಸುವ ಕಲ್ಲು ಅಥವಾ ಸಾಣೆಕಲ್ಲು ಒಡೆದು ಹೋಗುವುದು, ಕೆಸುವಿನ ಎಲೆಗೆ ಹೂವು ಬರುವುದು, ಮೂರ್ತಿಭಗ್ನ ಇತ್ಯಾದಿ ಘಟನೆಗಳಾದರೆ ಆ ಕುಟುಂಬದಲ್ಲಿ ದ್ರವ್ಯ ಹಾನಿ, ಗಂಭೀರ ರೋಗ ಅಥವಾ ಅಪಮೃತ್ಯು ಆಗುವ ಸಾಧ್ಯತೆಯಿರುತ್ತದೆ; ಅದಕ್ಕಾಗಿ ಮೇಲೆ ಕೊಟ್ಟಿರುವ ಪರಿಹಾರಗಳನ್ನು ಶ್ರದ್ಧೆಯಿಂದ ಮಾಡಬೇಕು.

**ಚಂದ್ರ, ಮನಸ್ಸು ಮತ್ತು ಗಣೇಶ ಚತುರ್ಥಿ ಇವುಗಳ ಸಂಬಂಧ**

1. ಸೌರಮಂಡಲದಲ್ಲಿನ ಎಲ್ಲ ಗ್ರಹಗಳಲ್ಲಿ ಚಂದ್ರಗ್ರಹವು ಅತ್ಯಂತ ಚಂಚಲವಾಗಿದೆ. ಆದುದರಿಂದ ಚಂಚಲ ಸ್ವಭಾವವಿರುವವರ ಮನಸ್ಸಿನ ಮೇಲೆ ಚಂದ್ರನ ಸ್ಪಂದನಗಳು ಹೆಚ್ಚು ಕಾರ್ಯ ಮಾಡುತ್ತವೆ.

2. ಪೃಥ್ವಿಯಿಂದ ಚಂದ್ರಗ್ರಹದ ದರ್ಶನವನ್ನು ನಾವು ಸಹಜವಾಗಿ ಪಡೆದುಕೊಳ್ಳಬಹುದು ಮತ್ತು ಅದನ್ನು ನಾವು ಮನಸ್ಸಿನಲ್ಲಿ ಅತ್ಯಂತ ಸಹಜವಾಗಿ ಯಾವಾಗ ಬೇಕಾದರೂ ನೋಡಬಹುದು.

3. ಪರಿಣಾಮ: ಗಣೇಶ ಚತುರ್ಥಿಯ ದಿನ ಬ್ರಹ್ಮಾಂಡದಲ್ಲಿ ನಿರ್ಮಾಣವಾಗುವ ರಜೋಗುಣದ ಸ್ಪಂದನಗಳು ಚಂದ್ರನ ಕಡೆಗೆ ಹೆಚ್ಚಿನ ಪ್ರಮಾಣದಲ್ಲಿ ಆಕರ್ಷಿತವಾಗಿ ಚಂಚಲ ಮನಸ್ಸಿರುವ ಮನುಷ್ಯರ ಕಡೆಗೆ ಆಕರ್ಷಿಸಲ್ಪಡುತ್ತವೆ.



**ಗಣೇಶ ಚತುರ್ಥಿಯ ವೈಶಿಷ್ಟ್ಯಗಳು:** ಈ ದಿನ ರಜೋಗುಣದಿಂದಾಗಿ ಚಂದ್ರನ ಸುತ್ತಲಿರುವ ಪ್ರಭಾವಲಯವು ಬಹಳ ತೇಜಸ್ವಿಯಾಗಿ ಕಾಣಿಸುತ್ತದೆ ಮತ್ತು ಅದು ಚಂಚಲ ಮನಸ್ಸನ್ನು ಸಹಜವಾಗಿ ಆಕರ್ಷಿಸಿಕೊಳ್ಳುತ್ತದೆ. ಈ ದಿನ ಚಂದ್ರದರ್ಶನವನ್ನು ಪಡೆದುಕೊಂಡರೆ, ಚಂದ್ರನು ತನ್ನ ಪ್ರಚಂಡ ರಜೋಗುಣದೊಂದಿಗೆ ಮನಸ್ಸಿನಲ್ಲಿ ಬೇರೂರುತ್ತಾನೆ. ಮನಸ್ಸಿನ ಮೇಲೆ ಮೂಡುವ ಅವನ ಚಿತ್ರವೂ ಅಷ್ಟೇ ಚಂಚಲವಾಗಿರುತ್ತದೆ. ಆದುದರಿಂದ ಅದು ಯಾವ ಕಾರಣಗಳು ಇಲ್ಲದಿರುವಾಗಲೂ ಮತ್ತು ಯಾವುದೇ ಸಮಯದಲ್ಲಿ ಮನಸ್ಸಿನ ಮೇಲೆ ಮೂಡುತ್ತದೆ. ಚಂದ್ರನನ್ನು ನೋಡಿದ ಸಮಯದಲ್ಲಿನ ದೃಶ್ಯವನ್ನು ನೆನಪಿಸಿ ಕೊಂಡರೂ ಮನಸ್ಸು ಚಂಚಲವಾಗುತ್ತದೆ.

**ಗಣೇಶ ಚತುರ್ಥಿಯ ದಿನ ಚಂದ್ರನ ದರ್ಶನವನ್ನು ಪಡೆದುಕೊಳ್ಳದಿರುವುದು:** ಮನಸ್ಸಿನ ಚಂಚಲತೆಯು ಸುಮಾರು ಒಂದು ವರ್ಷದ ವರೆಗೆ ಉಳಿಯುತ್ತದೆ. ಮನಸ್ಸಿನ ಚಂಚಲತೆಯ ಪ್ರಚಂಡ ಪ್ರಭಾವ ದಿಂದಾಗಿ ಯಾವುದಾದರೊಂದು ಘಟನೆ ಯು ಘಟಿಸುವ ಮೊದಲೇ ಅದು ಘಟಿಸಿ ಹೋಗಿದೆ ಎಂಬ ತಪ್ಪುತಿಳುವಳಿಕೆ ಅಥವಾ ಗಾಳಿ ಸುದ್ದಿ ಹರಡುವ ಸಾಧ್ಯತೆ ಇರುತ್ತದೆ. ಇದನ್ನೇ ಯಾವುದಾದರೊಂದು ಅಡಚಣೆ ಯನ್ನು ಮೈಮೇಲೆ ಎಳೆದುಕೊಳ್ಳುವುದು ಎಂದು ಹೇಳುತ್ತಾರೆ. ಈ ಕಾರಣಕ್ಕಾಗಿ ಗಣೇಶ ಚತುರ್ಥಿಯ ದಿನ ಚಂದ್ರನನ್ನು ನೋಡುವುದು ಅಶುಭವೆಂದು ತಿಳಿದುಕೊಳ್ಳುತ್ತಾರೆ.

**ಜ್ಯೋತಿಷ್ಯ ಮತ್ತು ಚಂದ್ರದರ್ಶನ:** ಗಣೇಶ ಚತುರ್ಥಿಯ ದಿನದಂದು ಯಾವ ವ್ಯಕ್ತಿಯ ರಾಶಿಯಲ್ಲಿ ಯಾವುದೇ ಸ್ಥಾನದಲ್ಲಿ ಚಂದ್ರನಿದ್ದರೆ ಅವನು ಚಂದ್ರದರ್ಶನವನ್ನು ಮಾಡಲೇಬಾರದು. ಇಂತಹ ವ್ಯಕ್ತಿಯು ನೀರಿನಲ್ಲಿ ಕಾಣಿಸುವ ಚಂದ್ರನ ಪ್ರತಿಬಿಂಬವನ್ನು ಸಹ ನೋಡಬಾರದು. ಏಕೆಂದರೆ ನೀರಿನಿಂದ ನೆನೆದಿರುವ ಮಣ್ಣಿನಲ್ಲಿಯೂ ಪ್ರಜನನ ಶಕ್ತಿಯು ಹೆಚ್ಚಾಗಿರುವುದರಿಂದ ಅಲ್ಲಿಯೂ ಪ್ರಚಂಡ ಪ್ರಮಾಣದಲ್ಲಿ ರಜೋಗುಣವು ನಿರ್ಮಾಣವಾಗಿರುತ್ತದೆ.

**ಗಣೇಶ ಚತುರ್ಥಿಯಂದು ಚಂದ್ರರದರ್ಶನವಾದರೆ ಏನು ಮಾಡಬೇಕು?:** ತಪ್ಪಿ ಏನಾದರೂ ಗಣೇಶ ಚತುರ್ಥಿಯ ಚಂದ್ರನನ್ನು ಕಂಡರೆ ಶ್ರೀಮದ್ಭಾಗವದ 10 ನೇ ಸ್ಕಂಧದ 56-57 ನೇ ಅಧ್ಯಾಯದಲ್ಲಿ ಬರುವ ಸ್ಯಮಂತಕ ಮಣಿಯ ಕಥೆಯನ್ನು ಶ್ರದ್ಧೆಯಿಂದ ಓದಬೇಕು ಅಥವಾ ಕೇಳಬೇಕು. ಭಾದ್ರಪದ ಶುಕ್ಲ ಪಂಚಮಿಯಂದು ಚಂದ್ರದರ್ಶನ ಮಾಡಬೇಕು. ಇದರಿಂದ ಚತುರ್ಥಿಯ ಚಂದ್ರದರ್ಶನದಿಂದ ಹೆಚ್ಚಿನ ಸಮಸ್ಯೆ ನಿರ್ಮಾಣವಾಗದು,

ಗಣೇಶ ಚತುರ್ಥಿಯಂದು ಚಂದ್ರದರ್ಶನ ಆದರೆ ಮುಂದಿನ ಮಂತ್ರದಿಂದ ಮಂತ್ರಿಸಿದ ನೀರನ್ನು ಸೇವಿಸಿ. ನೀರನ್ನು ಅಭಿಮಂತ್ರಿಸಲು ಈ ಮಂತ್ರವನ್ನು 21, 54 ಅಥವಾ 108 ಬಾರಿ ಜಪಿಸಿ.

**ಸಿಂಹಃ ಪ್ರಸೇನಮವಧೀತ್ ಸಿಂಹೋ ಜಾಮ್ಬವತಾ ಹತಃ**
**ಸುಕುಮಾರಕ ಮಾರೋದಿಸ್ತವಹ್ಯೇಷ ಸ್ಯಮನ್ತಕಃ**
**ಬ್ರಹ್ಮವೈವರ್ತ ಪುರಾಣ, ಅಧ್ಯಾಯ 78**


**ಅರ್ಥ:** ಹೇ ಸುಂದರ ಸುಕುಮಾರ, ಈ ಮಣಿಗಾಗಿ ಸಿಂಹವು ಪ್ರಸೇನನನ್ನು ಕೊಂದುಹಾಕಿತು, ಮತ್ತು ಜಾಂಬವಂತನು ಆ ಸಿಂಹನನ್ನು ಸಂಹರಿಸಿದರು. ನೀನು ಅಳಬೇಡ. ಈ ಸ್ಯಮಂತಕ ಮಣಿಯ ಮೇಲೆ ನಿನ್ನ ಹಕ್ಕಿದೆ.

**ಗಣೇಶೋತ್ಸವದ ಸಮಯದಲ್ಲಿ ಮಾಡಬೇಕಾದ ಪ್ರಾರ್ಥನೆ**

ಹೇ ಶ್ರೀ ಗಣೇಶಾ, ಗಣೇಶೋತ್ಸವದ ಸಮಯದಲ್ಲಿ ಎಂದಿಗಿಂತ ಸಾವಿರ ಪಟ್ಟು ಹೆಚ್ಚು ಕಾರ್ಯನಿರತವಾಗಿರುವ ನಿನ್ನ ತತ್ತ್ವದ ಲಾಭವು ನನಗೆ ಹೆಚ್ಚಿನ ಪ್ರಮಾಣದಲ್ಲಿ ಗ್ರಹಿಸುವಂತಾಗಲಿ.

**- ಶ್ರೀ. ವಿನೋದ ಕಾಮತ್,** ರಾಜ್ಯ ವಕ್ತಾರರು, ಸನಾತನ ಸಂಸ್ಥೆ, (ಸಂಪರ್ಕ : 9342599299)

## ನಗೆಹನಿ



### ಮುರಿದವರ್ಯಾರು?

- ಕನ್ನಡ ಮೇಷ್ಟ್ರು ಪಾಠ ಮಾಡುವಾಗ ಶಾಲೆಗೆ ಇನ್ಸ್‌ಪೆಕ್ಟರ್ ಬಂದರು
- ಮಕ್ಕಳಿಗೆ ಕೇಳಿದ್ರು, "ಶಿವ ಧನಸ್ಸು ಮುರಿದವರು ಯಾರು?"
- ಮಕ್ಕಳೆಲ್ಲಾ ನಮಗ್ ಯಾರಿಗೂ ಗೊತ್ತಿಲ್ಲ ಎಂದರೆ. ಇನ್ಸ್ಪೆಕ್ಟರ್ ಕನ್ನಡ ಮೇಷ್ಟ್ರನ್ನು
- ಕೇಳಿದಾಗ- "ಸಾರ್ ನನಗೆ ಗೊತ್ತಿಲ್ಲ. ಇದು ಹೆಡ್ ಮಾಸ್ಟ್ರದೆ ಕೆಲಸ.."

### ಟಚ್

- ಶೀಲಾ: "ನಾಳೆ ಆಪರೇಷನ್ ಆದರೆ ಇವತ್ತು ಯಾಕೆ ಕರೆಯುತ್ತಿದ್ರಿ?"
- ಡಾ ಸುಂದರ್: "ಆಪರೇಷನ್ ಟಚ್ ಬಿಟ್ಟು ಹೋಗಬಾರದಲ್ಲ"

### ಹಲ್ಲು

- ಮಂಜುವಿಗೆ ಶೀಲಾ ಹೇಳಿದ್ಲು
- "ರೀ ಬಾಚಣಿಗೆಯ ಒಂದು ಹಲ್ಲು ಮುರಿದು ಹೋಗಿದೆ, ಹೊಸ ಬಾಚಣಿಗೆ ತನ್ನಿ"
- ಮಂಜ: "ಒಂದು ಹಲ್ಲು ಮುರಿದ್ರೆ, ಹೊಸ ಹಣಿಗೆ ಯಾಕೆ?"
- ಶೀಲಾ: "ಅದರಲ್ಲಿ ಉಳಿದಿದ್ದು ಒಂದೇ ಹಲ್ಲು.."

## ಬಿದಿರು

ಬಿದಿರು ತುಂಬಾ ನೋವಿನಿಂದ ಅಳುತ್ತಿತ್ತು. ಹತ್ತಿರ ನಿಂತು ಬಿದಿರ ಯಜಮಾನ ಬಿದಿರಿನ ಬಳಿ ಕೇಳಿದ ಯಾಕೆ ಮಾರಾಯ ಅಳುತ್ತಾ ಇದ್ದೀಯಾ, ಇಷ್ಟು ನೋವಾಗುವಂಥದ್ದು ಏನಾಗಿದೆ? ಅದಕ್ಕೆ ಬಿದರು ನೋಡಿ ನಾನು ಸಂಗೀತಗಾರನ ಕೈಯಲ್ಲಿ ಕೊಳಲಾಗಬೇಕು ಅನ್ನುವ ಆಸೆಯಿಂದ ಜೀವಿಸಿದ್ದು. ನಾನೀಗ ಹೆಚ್ಚು ಬೆಳೆಯುವುದಕ್ಕೆ ಪ್ರಾರಂಭವಾಗಿದ್ದೇನೆ ಇನ್ನು ಕೊಳಲಾಗುವ ಅವಕಾಶ ನನ್ನಿಂದ ಸಾಧ್ಯವಾಗುವುದಿಲ್ಲ. ಕೊಳಲಾಗದೆ ಉಳಿದುಬಿಟ್ಟರೆ ನನ್ನ ಜೀವನ ನಶ್ವರವಾಗುತ್ತಲ್ಲ ಅನ್ನೋದು ಅದರ ನೋವು .ಅದಕ್ಕೆ ಯಜಮಾನ ಹೇಳಿದ ನೋಡು ನೀನು ಕೊಳಲಾಗುವ ಅವಕಾಶವನ್ನು ಕಳೆದುಕೊಂಡೆ ಅಂತಂದ್ರೆ, ಅದಕ್ಕಿಂತ ಅದ್ಭುತವಾದ ಅವಕಾಶ ನಿನ್ನ ಕಣ್ಣ ಮುಂದೆ ಇದೆ, ನೀನು ಹಲವಾರು ಜನರಿಗೆ ಆಶ್ರಯ ನೀಡುವ ಮನೆಯಾಗಬಹುದು, ಕೊನೆಗೊಂದು ಸಲ ಅವರನ್ನ ಮಸಣಕ್ಕೆ ನೆಮ್ಮದಿಯಿಂದ ಒಯ್ಯುವ ಚಟ್ಟಾಗಬಹುದು, ಕೈಗೆ ಊರುಗೋಲಾಗಬಹುದು, ಬೀಳುವ ಗಿಡಕ್ಕೆ ಆಧಾರವಾಗಬಹುದು, ಸಂಭ್ರಮದ ಮದುವೆ ಮನೆಯ ಚಪ್ಪರವಾಗಬಹುದು, ತಪ್ಪಿದ್ದನ್ನ ತಿದ್ದಿ ಹೇಳುವ ಕೋಲಾಗಬಹುದು, ಮನೆಯನ್ನ ರಕ್ಷಣೆ ಮಾಡುವ ಬೇಲಿಯಾಗಬಹುದು, ಎತ್ತರದಿಂದ ಕೊಯ್ಯುವ ಕೋಲಾಗಬಹುದು, ಹೀಗೆ ನಿನ್ನಲ್ಲಿ ಅವಕಾಶಗಳು ಹಲವು ಇದೆ. ಎಲ್ಲೋ ಒಂದು ಕಡೆ ಉಳಿದುಬಿಟ್ಟಿದ್ದೇನೆ ಅನ್ನುವ ನೋವು ಬೇಡ ಹೊಸ ಅವಕಾಶಗಳು ನಿನ್ನನ್ನು ಹುಡುಕಿ ಬರುತ್ತವೆ ಒಂದಷ್ಟು ಸಮಯ ಕಾಯಬೇಕಷ್ಟೆ. ಬಿದಿರು ಅಳುವುದನ್ನು ನಿಲ್ಲಿಸಿ ಹೊಸ ಅವಕಾಶಕ್ಕೆ ಎದುರು ನೋಡುವುದಕ್ಕೆ ಆರಂಭ ಮಾಡಿತು



**- ಧೀರಜ್** ಬೆಳ್ಳಾರೆ

# ರಾಜ್ಯದ ಅಭಿವೃದ್ಧಿಗೆ ಬಿಜೆಪಿ ಬಾಕಿಯೇ ಅಡ್ಡಿ

## ವಿಧಾನಸಭೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಆರೋಪ

• ಪ್ರಜೋದಯ ವರದಿ

**ಬೆಂಗಳೂರು:** ಗ್ಯಾರಂಟಿ ಯೋಜನೆಗಳಿಂದ ರಾಜ್ಯದ ಅಭಿವೃದ್ಧಿಗೆ ಹಣದ ಕೊರತೆಯಾಗಿಲ್ಲ. ಬಿಜೆಪಿ ಆಡಳಿತದ ಅವಧಿಯ ಕೊನೆಯಲ್ಲಿ ಹಣ ಇಲ್ಲದಿದ್ದರೂ ಮುಖ್ಯಮಂತ್ರಿ, ವಿವೇಚನಾ ಕೋಟಾ 1.66 ಲಕ್ಷ ಕೋಟಿ ಸೇರಿ 4.36 ಲಕ್ಷ ಕೋಟಿ ಮೊತ್ತದ ಕಾಮಗಾರಿಗಳಿಗೆ ಅನುಮೋದನೆ ನೀಡಿದ್ದೇ ಹೊರೆಯಾಯಿತು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪ್ರತಿಪಾದಿಸಿದರು.

ವಿಧಾನಸಭೆಯಲ್ಲಿ ಗ್ಯಾರಂಟಿಗಳಿಂದಾಗಿ ಅಭಿವೃದ್ಧಿ ಕಾರ್ಯಗಳಿಗೆ ಹಿನ್ನಡೆ ಎಂಬ ವಿಷಯ ಕುರಿತು ವಿರೋಧ ಪಕ್ಷಗಳ ಸದಸ್ಯರು ನಡೆಸಿದ ಚರ್ಚೆಗೆ ಶುಕ್ರವಾರ ಅವರು ಉತ್ತರ ನೀಡಿದರು. ರಾಜ್ಯದ ಖಜಾನೆಯಲ್ಲಿ ಹಣ ಇಲ್ಲದಿದ್ದರೂ, ಬಜೆಟ್‌ನಲ್ಲಿ ಘೋಷಣೆ ಮಾಡದಿದ್ದರೂ ಬಿಜೆಪಿ ನೇತೃತ್ವದ ಸರ್ಕಾರ 4.36 ಲಕ್ಷ ಕೋಟಿ ಮೊತ್ತದ ವಿವಿಧ ಕಾಮಗಾರಿಗಳಿಗೆ ಟೆಂಡರ್ ಆಹ್ವಾನಿ ಸಿತ್ತು. ನಮ್ಮ ಸರ್ಕಾರ ಅಧಿಕಾರಕ್ಕೆ ಬಂದ ಬಳಿಕ, ಹಿಂದಿನ ಸರ್ಕಾರದ ಬಾಕಿ ತೀರಿಸಲು ಸಾಕಷ್ಟು ಆರ್ಥಿಕ ಸಮಸ್ಯೆ ಎದುರಿಸಿತು ಎಂದರು. ಗ್ಯಾರಂಟಿ ಯೋಜನೆಗಳಿಗೆ ಇಲ್ಲಿಯವರೆಗೆ ಸರ್ಕಾರ ಖರ್ಚು ಮಾಡಿರುವುದು 96,000 ಕೋಟಿ ಅಷ್ಟೇ. ಗ್ಯಾರಂಟಿಗಳು ಅಭಿವೃದ್ಧಿಯ ಒಂದು ಭಾಗ. ಪ್ರತಿ ಕುಟುಂಬಕ್ಕೂ ವಾರ್ಷಿಕ 50,000ದಿಂದ 60,000 ಸಿಗುತ್ತದೆ. ಹಾಗಾಗಿಯೇ, ತಲಾ ಆದಾಯದಲ್ಲಿ ರಾಜ್ಯ ದೇಶದಲ್ಲೇ ಮೊದಲ ಸ್ಥಾನದಲ್ಲಿದೆ. ಎಂತಹ ಪರಿಸ್ಥಿತಿಯಲ್ಲೂ ಗ್ಯಾರಂಟಿ ಯೋಜನೆಗಳನ್ನು ಸ್ಥಗಿತಗೊಳಿಸುವುದಿಲ್ಲ. ಕೇಂದ್ರ ಸರ್ಕಾರ ತಾರತಮ್ಯ ಮಾಡದೆ ರಾಜ್ಯಕ್ಕೆ ನ್ಯಾಯಯುತವಾಗಿ ಕೊಡಬೇಕಿದ್ದ ತೆರಿಗೆ ಪಾಲು, ಕೇಂದ್ರ ಪುರಸ್ಕೃತ ಯೋಜನೆಗಳ ಬಾಕಿ ನೀಡಿದರೆ ಸಾಕು ಇನ್ನಷ್ಟು ಅಭಿವೃದ್ಧಿ ಕಾರ್ಯಗಳಿಗೆ ಅವಕಾಶವಾಗುತ್ತಿತ್ತು ಎಂದರು.

ಇದೇ ವೇಳೆ ಕೇಂದ್ರ ಸರ್ಕಾರ ಕರ್ನಾಟಕಕ್ಕೆ ಅನುದಾನ ಕಡಿತಗೊಳಿಸಿರುವುದನ್ನು ಎತ್ತಿ ತೋರಿಸಿದ ಮುಖ್ಯಮಂತ್ರಿ, 14ನೇ ಹಣಕಾಸು ಆಯೋಗದ ಅಡಿಯಲ್ಲಿ ರಾಜ್ಯಕ್ಕೆ ಶೇ. 4.7 ರಷ್ಟು ಅನುದಾನ ಸಿಕ್ಕಿದೆ.



ಆದರೆ 15ನೇ ಹಣಕಾಸು ಆಯೋಗದಲ್ಲಿ ಅದು ಶೇ.3.6ಕ್ಕೆ ಇಳಿದಿದೆ, ಶೇ.1 ರಷ್ಟು ಕಡಿತದಿಂದ 68,000 ಕೋಟಿ ನಷ್ಟವಾಗಿದೆ ಎಂದು ಹೇಳಿದರು.

ರಾಜ್ಯವು 68,000 ಕೋಟಿ ರೂ. ಪಡೆದಿದ್ದರೆ, ಮತ್ತಷ್ಟು ಹೆಚ್ಚಿನ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಬಹುದಿತ್ತು. ಅದಲ್ಲದೆ, ಭದ್ರಾ ಮೇಲ್ದಂಡೆ ನೀರಿನ ಯೋಜನೆಯಡಿಯಲ್ಲಿ, ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು 2023–24ರ ಕೇಂದ್ರ ಬಜೆಟ್‌ನಲ್ಲಿ ಘೋಷಿಸಿದಂತೆ ರಾಜ್ಯಕ್ಕೆ 5,300 ಕೋಟಿ ರೂ.ಗಳನ್ನು ಪಡೆಯಬೇಕಿತ್ತು. ಆದರೆ ಅದು ನಮಗೆ ಸಿಗಲಿಲ್ಲ. ಕೇಂದ್ರದ ಹಣ ನಮಗೆ ಸಿಕ್ಕಿದ್ದರೆ, ನೀವು ಕೇಳಿದಷ್ಟು ಹಣವನ್ನು ನಿಮ್ಮ ಕ್ಷೇತ್ರಗಳಿಗೆ ಹಂಚಿಕೆ ಮಾಡಲು ಸಾಧ್ಯವಾಗುತ್ತಿತ್ತು ಎಂದು ಮುಖ್ಯಮಂತ್ರಿ ಸದನಕ್ಕೆ ತಿಳಿಸಿದರು.

### ಬೆಂಗಳೂರು-ಚೆನ್ನೈ ಎಕ್ಸ್‌ಪ್ರೆಸ್‌ವೇ 2026ರ ಜೂನ್‌ಗೆ ಪೂರ್ಣ



• ಪ್ರಜೋದಯ ವರದಿ

**ನವದೆಹಲಿ:** ಭೂಸ್ವಾಧೀನ ವಿಳಂಬ ಸೇರಿ ವಿವಿಧ ಕಾರಣಗಳಿಂದ ಬೆಂಗಳೂರು-ಚೆನ್ನೈ ಎಕ್ಸ್‌ಪ್ರೆಸ್‌ವೇ ಕಾಮಗಾರಿ ನಿಧಾನಗತಿಯಲ್ಲಿ ಸಾಗಿದೆ ಎಂದು ಕೇಂದ್ರ ಹೆದ್ದಾರಿ ಹಾಗೂ ಭೂಸಾರಿಗೆ ಸಚಿವ ನಿತಿನ್ ಗಡ್ಕರಿ ತಿಳಿಸಿದ್ದಾರೆ.

ಲೋಕಸಭೆಯಲ್ಲಿ ಬೆಂಗಳೂರು ಕೇಂದ್ರ ಸಂಸದ ಪಿ.ಸಿ.ಮೋಹನ್ ಕೇಳಿದ್ದ ಪ್ರಶ್ನೆಗೆ ಸಚಿವರು ಲಿಖಿತ ಉತ್ತರ ನೀಡಿದ್ದಾರೆ. ಈ ಎಕ್ಸ್ ಪ್ರೆಸ್‌ವೇ ಬೆಂಗಳೂರುಚೆನ್ನೈ ಕೈಗಾರಿಕಾ ಕಾರಿಡಾರ್‌ನ ಭಾಗವಾಗಿದ್ದು, ಕಾಮಗಾರಿ ಪೂರ್ಣಗೊಂಡ ಬಳಿಕ ಎರಡು ನಗರಗಳ ನಡುವಿನ ಪ್ರಯಾಣದ ಅವಧಿ ಎರಡೂವರೆ ಗಂಟೆಗಳಿಗೆ ಇಳಿಯಲಿದೆ. 262.4 ಕಿ.ಮೀ. ಉದ್ದದ ಮಾರ್ಗಕ್ಕೆ 15,188 ಕೋಟಿ ವೆಚ್ಚ ಮಾಡಲಾಗುತ್ತಿದೆ. ಸದ್ಯ ನಾಲ್ಕು ಪ್ಯಾಕೇಜ್‌ಗಳ ಕೆಲಸ ಮುಗಿದಿದ್ದು, ಎಲ್ಲಾ ಪ್ಯಾಕೇಜ್‌ಗಳ ಕಾಮಗಾರಿಗಳು 2026ಕ್ಕೆ ಮುಗಿಯಲಿವೆ ಎಂದು ಸಚಿವರು ತಿಳಿಸಿದ್ದಾರೆ.

### ಕಾಶ್ಮೀರ ವಿಚಾರವಷ್ಟೇ ಅಲ್ಲ, ಎಲ್ಲಾ ಸಮಸ್ಯೆಗಳ ಬಗ್ಗೆ ಚರ್ಚಿಸಲು ಸಿದ್ಧ : ಪಾಕಿಸ್ತಾನ

• ಪ್ರಜೋದಯ ವರದಿ

**ಇಸ್ಲಾಮಾಬಾದ್:** ಕಾಶ್ಮೀರ ಸಮಸ್ಯೆ ಸೇರಿ ಬಾಕಿ ಇರುವ ಎಲ್ಲಾ ವಿಚಾರಗಳ ಬಗ್ಗೆ ಭಾರತ ದೊಂದಿಗೆ ಸಮಗ್ರವಾಗಿ ಮಾತುಕತೆ ನಡೆಸಲು ಪಾಕಿಸ್ತಾನ ಸಿದ್ಧವಿದೆ ಎಂದು ವಿದೇಶಾಂಗ ಸಚಿವ ಮುಹಮ್ಮದ್ ಇಶಾಕ್ ದರ್ ಶುಕ್ರವಾರ ಹೇಳಿದ್ದಾರೆ.

ಭಾರತದೊಂದಿಗಿನ ಮಾತುಕತೆ ಕುರಿತು ಸಂಸತ್ತಿನ ಹೊರಗೆ ಮಾಧ್ಯಮದವರು ಕೇಳಿದ್ದಕ್ಕೆ ಪ್ರತಿಕ್ರಿಯಿಸಿರುವ ದರ್, ಮಾತುಕತೆ ಯಾವಾಗ ನಡೆದರೂ, ಅದು ಕಾಶ್ಮೀರ ಸಮಸ್ಯೆ ಮಾತ್ರವಲ್ಲ, ಎಲ್ಲಾ ವಿಚಾರಗಳನ್ನೂ ಒಳಗೊಂಡಿರಲಿದೆ ಎಂದು ಪ್ರತಿಕ್ರಿಯಿಸಿದ್ದಾರೆ.

ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ಉಗ್ರರು ಇತ್ತೀಚೆಗೆ ನಡೆಸಿದ ಗುಂಡಿನ ದಾಳಿ ಬಳಿಕ ಎರಡೂ ದೇಶಗಳ ನಡುವಣ ದ್ವಿಪಕ್ಷೀಯ ಸಂಬಂಧ ಮತ್ತಷ್ಟು ಹದಗೆಟ್ಟಿದೆ. ಹೀಗಾಗಿ, ನೆರೆ ರಾಷ್ಟ್ರದೊಂದಿಗೆ ಪಾಕ್ ಆಕ್ರಮಿತ ಕಾಶ್ಮೀರ ಮತ್ತು ಭಯೋತ್ಪಾದನೆ ಕುರಿತಷ್ಟೇ ಚರ್ಚಿಸ ಲಾಗುವುದೆಂದು ಭಾರತ ಸ್ಪಷ್ಟವಾಗಿ ಹೇಳಿದೆ. ಆದಾಗ್ಯೂ, ದರ್ ಅವರು, ಭಾರತದೊಂದಿಗೆ ಒಂದು ಅಂಶದ ಕಾರ್ಯಸೂಚಿಯೊಂದಿಗೆ ಮಾತುಕತೆಗೆ ಅವಕಾಶವಿಲ್ಲ ಎಂದು ಪಾಕಿಸ್ತಾನ ಆರಂಭದಿಂದಲೂ ಹೇಳುತ್ತಾ ಬಂದಿದೆ ಒತ್ತಿ ಹೇಳಿದ್ದಾರೆ.

**ಮಧ್ಯಸ್ಥಿಕೆಗೆ ಮನವಿ ಮಾಡಿಲ್ಲ**

ಭಾರತ ಮತ್ತು ಪಾಕಿಸ್ತಾನ ನಡುವೆ ಮಧ್ಯಸ್ಥಿಕೆ ವಹಿಸುವಂತೆ ಯಾರನ್ನೂ ಕೋರಿಲ್ಲ. ತಟಸ್ಥ ಸ್ಥಳದಲ್ಲಿ ಮಾತುಕತೆಗೆ ಪ್ರಸ್ತಾಪಿಸಿದ್ದೇವೆ. ತಟಸ್ಥ ಸ್ಥಳದಲ್ಲಿ ಮಾತುಕತೆಗೆ ಸೇರಲು ನಮಗೆ ಹೇಳಲಾಗಿದೆ. ಆ ರೀತಿ ನಡೆಯುವುದಾದರೆ ಸಿದ್ಧವಿರುವುದಾಗಿ ತಿಳಿಸಿದ್ದೇವೆ ಎಂದಿದ್ದಾರೆ.

ಏಪ್ರಿಲ್ 22ರಂದು ನಡೆದ ಪಹಲ್ಗಾಮ್ ದಾಳಿ ವೇಳೆ 26 ಪ್ರವಾಸಿಗರು ಹತ್ಯೆಯಾಗಿದ್ದರು. ಅದಕ್ಕೆ ಪ್ರತಿಯಾಗಿ ಭಾರತೀಯ ಸೇನಾ ಪಡೆಗಳು ಪಾಕಿಸ್ತಾನ ಹಾಗೂ ಪಾಕ್ ಆಕ್ರಮಿತ ಕಾಶ್ಮೀರದಲ್ಲಿರುವ ಉಗ್ರರ ನೆಲೆಗಳನ್ನು ಗುರಿಯಾಗಿಸಿ ಮೇ 7ರಂದು ಆಪರೇಷನ್ ಸಿಂಧೂರ ನಡೆಸಿತ್ತು. ಆದರೆ, ಅದರ ವಿರುದ್ಧ ಪಾಕ್ ಸೇನೆ ಭಾರತದತ್ತ ದಾಳಿ ಮಾಡಿದ್ದರಿಂದ ಸಂಘರ್ಷ ಏರ್ಪಟ್ಟಿತ್ತು. ಬಳಿಕ ಮೇ 10ರಂದು ಕದನ ವಿರಾಮ ಏರ್ಪಟ್ಟಿತ್ತು. ಸಂಘರ್ಷದ ವೇಳೆ, ಭಾರತ ದೊಂದಿಗೆ ಕದನ ವಿರಾಮ ಒಪ್ಪಂದ ಮಾಡಿಕೊಳ್ಳುವಂತೆ ಅಮೇರಿಕಾ ಕರೆ ನೀಡಿತ್ತು ಎಂದು ದರ್ ಹೇಳಿದ್ದಾರೆ.

ಪಾಕ್ ಉಪ ಪ್ರಧಾನಿಯೂ ಆಗಿರುವ ಅವರು, ಪಾಕಿಸ್ತಾನ ಯುದ್ಧವನ್ನು ಬಯಸುವುದಿಲ್ಲ ಎಂಬುದನ್ನು ಸ್ಪಷ್ಟವಾಗಿ ತಿಳಿಸಿದ್ದೇವೆಂದೂ ಹೇಳಿಕೊಂಡಿದ್ದಾರೆ.

### ಅಧಿಕಾರಕ್ಕಾಗಿ ಒಳನುಸುಳುವಿಕೆಗೆ ಉತ್ತೇಜನ : ಟಿಎಂಸಿ ವಿರುದ್ಧ ಮೋದಿ ವಾಗ್ದಾಳಿ

• ಪ್ರಜೋದಯ ವರದಿ



**ಕೋಲ್ಕತ್ತ:** ಅಧಿಕಾರಕ್ಕಾಗಿ ಒಳನುಸುಳುವಿಕೆಗೆ ಉತ್ತೇಜನ ನೀಡುತ್ತಿದ್ದಾರೆಂದು ಪ್ರಧಾನಿ ನರೇಂದ್ರ ಮೋದಿ ಅವರು ಪಶ್ಚಿಮ ಬಂಗಾಳದಲ್ಲಿನ ತೃಣಮೂಲ ಕಾಂಗ್ರೆಸ್ (ಟಿಎಂಸಿ) ಸರ್ಕಾರದ ವಿರುದ್ಧ ಶುಕ್ರವಾರ ವಾಗ್ದಾಳಿ ನಡೆಸಿದರು.

ಪಶ್ಚಿಮ ಬಂಗಾಳದ ಜನಸಂಖ್ಯೆಯನ್ನು ಬದಲಾಯಿಸುತ್ತಿರುವ ಒಳನುಸುಳುಕೋರರ ವಿರುದ್ಧ ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರವು ಬೃಹತ್ ಅಭಿಯಾನ ಆರಂಭಿಸಿದೆ ಎಂದು ಉತ್ತರ 24 ಪರಗಣ ಜಿಲ್ಲೆಯ ದಮ್ ದಮ್ ಪ್ರದೇಶದಲ್ಲಿ ನಡೆದ ರ್‍ಯಾಲಿಯಲ್ಲಿ ಅವರು ಹೇಳಿದರು.

ದೇಶವು ಇನ್ನು ಮುಂದೆ ಒಳನುಸುಳುಕೋರರನ್ನು ಸಹಿಸುವುದಿಲ್ಲ. ಅವರು ಇಲ್ಲಿಯೇ ಉಳಿಯಲು ಅನುಮತಿಸುವುದಿಲ್ಲ. ಆದರೆ, ಟಿಎಂಸಿ ಮತ್ತು ಕಾಂಗ್ರೆಸ್ ಸೇರಿ ಕೆಲವು ರಾಜ ಕೀಯ ಪಕ್ಷಗಳು ಈ ವಿಷಯದಲ್ಲಿ ತುಷ್ಟೀಕರಣದ ರಾಜಕಾರಣ ನಡೆಸಿವೆ ಎಂದು ದೂರಿದರು.

ಒಳನುಸುಳುಕೋರರು ಬಂಗಾಳ ಮತ್ತು ದೇಶವನ್ನು ತೊರೆದಿದ್ದಾರೆ ಎಂಬುದನ್ನು ಖಚಿತ ಪಡಿಸಿಕೊಳ್ಳಬೇಕು ಎಂದರೆ, ಟಿಎಂಸಿ ನೇತೃತ್ವದ ಸರ್ಕಾರವು ಅಧಿಕಾರದಿಂದ ಕೆಳಗಿಳಿಯಬೇಕಿದೆ. ನಿಮ್ಮ ಮತ ಮಾತ್ರ ಈ ನುಸುಳುಕೋರರನ್ನು ದೇಶದಿಂದ ಹೊರಹಾಕುವುದನ್ನು ಖಚಿತ ಪಡಿಸುತ್ತದೆಂದು ಹೇಳಿದರು. ಒಳನುಸುಳುಕೋರರು ಆರ್ಥಿಕತೆಯ ಮೇಲೆ ಒತ್ತಡ ಹೇರುತ್ತಿದ್ದಾರೆ. ನಮ್ಮ ಸಹೋದರಿಯರು ಹಾಗೂ ತಾಯಂ ದಿ ರನ್ನು ಹಿಂಸಿಸುತ್ತಿದ್ದಾರೆಂದು ದೂರಿದರು. ಗಡಿ ರಾಜ್ಯವು ದುರ್ಬಲವಾಗಿದೆ. ಬಂಗಾಳದ ಅಭಿವೃದ್ಧಿಗಾಗಿ ಬಿಜೆಪಿಯು ಮುಂದಾದರೆ, ಟಿಎಂಸಿಯು ಅಡ್ಡಿಪಡಿಸುತ್ತಿದೆಂದು ಅವರು ಆರೋಪಿಸಿದರು.



**ಹಾಸನ:** ನಗರದ ದೇವಿಗೆರೆ ರಸ್ತೆಯಲ್ಲಿ ನೂತನವಾಗಿ ಆರಂಭವಾದ ಕೆಜಿಪಿ ಗೋಲ್ಡ್ ಪ್ಯಾಲೇಸ್ ಶುಭಾರಂಭ ಸಮಾರಂಭ ಶುಕ್ರವಾರ ನೆರವೇರಿತು. ಉತ್ತರ ಕರ್ನಾಟಕದ ಹೆಮ್ಮೆಯ ಕೆಜಿಪಿ ಗೋಲ್ಡ್ ಪ್ಯಾಲೇಸ್ ರಾಜ್ಯಾದ್ಯಂತ 20ಕ್ಕೂ ಹೆಚ್ಚು ಶಾಖೆಗಳನ್ನು ಹೊಂದಿದೆ. ಹಾಸನ ದಲ್ಲೂ ಮಳಿಗೆ ಆರಂಭವಾಗಿದ್ದು ಚಲನಚಿತ್ರ ನಟಿ ರಾಗಿಣಿ ದ್ವಿವೇದಿ, ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ, ಪಾಲಿಕೆ ಪ್ರಭಾರ ಮೇಯರ್ ಹೇಮಲತಾ ಕಮಲ್ ಕುಮಾರ್ ಮತ್ತಿತರರು ಪಾಲ್ಗೊಂಡಿದ್ದರು.

### ಷರತ್ತಿಗೆ ಒಪ್ಪದಿದ್ದರೆ ಗಾಜಾ ನಗರ ನಾಶ

• ಪ್ರಜೋದಯ ವರದಿ

**ದಾರ್ ಅಲ್‌ಬಲಾ:** ಹಮಾಸ್ ಬಂಡುಕೋರರು ಇಸ್ರೇಲ್ ಷರತ್ತುಗಳಿಗೆ ಒಪ್ಪದಿದ್ದರೆ ಗಾಜಾ ನಗರವನ್ನೇ ನಾಶ ಮಾಡಬೇಕಾಗುತ್ತದೆಂದು ಇಸ್ರೇಲ್ ರಕ್ಷಣಾ ಸಚಿವ ಕಟ್ಜ್ ಶುಕ್ರವಾರ ಎಚ್ಚರಿಸಿದ್ದಾರೆ. ಗಾಜಾ ಸಹ ರಫಾಹ್ ಮತ್ತು ಬೈತ್ ಹನೌನ್ ರೀತಿ ಭಗ್ನಾವಶೇಷವಾಗಲಿದೆ ಎಂದು ಅವರು ಹೇಳಿದ್ದಾರೆ.

# ವಿದ್ಯಾರ್ಥಿಗಳು ಮಾನವೀಯ ಮೌಲ್ಯ ಅಳವಡಿಸಿಕೊಳ್ಳಿ

• ಪ್ರಜೋದಯ ವರದಿ

**ಬೇಲೂರು:** ವಿದ್ಯಾರ್ಥಿಗಳು ದುಶ್ಚಟಕ್ಕೆ ದಾಸರಾಗದೆ ಸಜ್ಜನರ ಸಹವಾಸ, ಓದು ಹಾಗು ಮಾನವೀಯ ಮೌಲ್ಯಗಳನ್ನು ಅಳವಡಿಸಿಕೊಂಡು ಸತ್ಪ್ರಜೆಗಳಾಗಿದೇಶಕ್ಕೆ ಕೊಡುಗೆಯಾಗ ಬೇಕೆಂದು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ದಾಕ್ಷಾಯಿಣಿ ಅವರು ಸಲಹೆ ನೀಡಿದರು.

ತಾಲ್ಲೂಕಿನ ಹಗರೆ ಸಮೀಪದ ಮಾದೀಹಳ್ಳಿ ಗ್ರಾಮದಲ್ಲಿ ಹಾರನಹಳ್ಳಿ ರಾಮಸ್ವಾಮಿ ಉನ್ನತ ಶಿಕ್ಷಣ ಸಂಸ್ಥೆಯಿಂದ ಆಯೋಜಿಸಿದ್ದ ರಾಷ್ಟ್ರೀಯ ಸೇವಾ ಯೋಜನೆ ವಾರ್ಷಿಕ ಶಿಬಿರ ಉದ್ಘಾಟಿಸಿ ಮಾತನಾಡಿ, ವಿದ್ಯಾರ್ಥಿಗಳು ಕಾನೂನು ಪಾಲಿಸಬೇಕು. ದುಶ್ಚಟಕ್ಕೆ ದಾಸರಾಗಿ ಭವಿಷ್ಯ ಹಾಳು ಮಾಡಿಕೊಳ್ಳಬಾರದೆಂದರು. ಮನೆ ಬಾಗಿಲಿಗೆ ಸರ್ಕಾರಿ ಸೇವೆಗಳನ್ನು ತಲುಪಿಸುವ ಕೆಲಸ ಇತ್ತೀಚೆಗೆ ಆಗುತ್ತಿದೆ. ಗ್ರಾಮ ಗಳ ಸ್ವಚ್ಛತೆ, ಅಧ್ಯಯನ ಕೂಡ ರಾಷ್ಟ್ರೀಯ ಸೇವಾ ಯೋಜನೆಯ ಒಂದು ಭಾಗ. ರೈತರು ಹಾಗು ಗ್ರಾಮೀಣ ಜನರು ಇಂತಹ ಕಾರ್ಯ ಗಳಲ್ಲಿ ಹೆಚ್ಚಾಗಿ ತೊಡಗ ಬೇಕೆಂದರು.



ಇತ್ತೀಚಿನ ದಿನಗಳಲ್ಲಿ ಬಾಲ್ಯ ವಿವಾಹ ಪ್ರಮಾಣ ಹೆಚ್ಚಾಗಿ ಪೋಕ್ಸೋ ಪ್ರಕರಣಗಳು ಅಧಿಕ ಗೊಳ್ಳುತ್ತಿವೆ. ಅದರಿಂದ ಯುವಕ-ಯುವತಿಯರ ಮಾನಹಾನಿಯಾಗಿ ಜೀವನ ಹಾಳಾಗುತ್ತಿದೆ. ಪೋಕ್ಸೋ ಕಾಯ್ದೆ ಬಗ್ಗೆ ವಿದ್ಯಾವಂತರು ಅರಿವು ಮೂಡಿಸಬೇಕು. ಕಾನೂನು ಬಾಹಿರ ಕೃತ್ಯಗಳಲ್ಲಿ ಯಾರೂ ಪಾಲ್ಗೊಳ್ಳಬಾರದೆಂದರು.

ವಿದ್ಯಾರ್ಥಿಗಳು ಪರವಾನಗಿ ಇಲ್ಲದೆ ವಾಹನಗಳನ್ನು ಚಲಾಯಿಸ ಬಾರದು. ತಪ್ಪಿದ್ದಲ್ಲಿ ಪೋಷಕರೇ ನೇರ ಹೊಣೆಗಾರರಾಗುತ್ತಾರೆ. ಅಪಘಾತ ಹಾಗು ಚೆಕ್ ಬೌನ್ಸ್ ಪ್ರಕರಣ ಹೆಚ್ಚು ತ್ತಿದ್ದು ಮೌಖಿಕ ಸಾಕ್ಷಿಗಿಂತ ದಾಖಲಾತಿ ಸಾಕ್ಷಿಗೆ ಪ್ರಾಮುಖ್ಯತೆ ದೊರೆಯಲಿದೆ ಎಂಬುದನ್ನು ಎಲ್ಲರೂ ತಿಳಿದು ಕೊಳ್ಳಬೇಕು. ರೀಲ್ಸ್ ಹುಚ್ಚು ಬಿಟ್ಟು ವಿದ್ಯಾರ್ಥಿ ಜೀವನದ ಸುಂದರ ಕ್ಷಣ ಗಳನ್ನು ಆನಂದಿಸಿ, ಮುಂದೆ ಗುರಿ ಯಿಟ್ಟು ಅವಕಾಶಗಳು ಕೈ ತಪ್ಪಿ ಹೋಗದಂತೆ ಎಚ್ಚರ ವಹಿಸಿ ಎಂದು ತಿಳಿಸಿದರು.

ಸಹ ಪ್ರಾಧ್ಯಾಪಕ ಯೋಗೇಶ್ ಅವರು ಮಾತನಾಡಿ, ವ್ಯಕ್ತಿ ಪರಿಪೂರ್ಣನಾಗಲು ಎಲ್ಲಾ ವಿಷಯಗಳನ್ನು ಕಲಿಯಬೇಕು. ಅನೇಕ ಕಾರ್ಯಕ್ರಮಗಳಲ್ಲಿ ಭಾಗವಹಿಸಬೇಕು, ಅನುಭವಿಸ ಬೇಕೆಂದರು.

ಮಲೆನಾಡು ತಾಂತ್ರಿಕ ಶಿಕ್ಷಣ ಸಂಸ್ಥೆಯ ಮಾಧ್ಯಮ ಸಂಯೋಜಕ ಕಟ್ಟಾಯ ಶಿವಕುಮಾರ್ ಅವರು ಮಾತನಾಡಿ, ರಾಷ್ಟ್ರೀಯ ಸೇವಾ ಯೋಜನೆ ಶಿಬಿರಗಳಿಂದ ಮಕ್ಕಳ ವ್ಯಕ್ತಿತ್ವ ವಿಕಸನ ವಾಗುತ್ತದೆ. ಹೊಂದಾಣಿಕೆ, ನಾಯಕತ್ವ ಗುಣ, ಶಿಸ್ತು, ಸಂಯಮ, ತಾಳ್ಮೆ ಹಾಗು ದೇಶ ಪ್ರೇಮ ವನ್ನು ಇಲ್ಲಿ ಕಲಿಯಬಹು ದೆಂದು ಹೇಳಿದರು.

ಹಾರನಹಳ್ಳಿ ರಾಮಸ್ವಾಮಿ ಉನ್ನತ ಶಿಕ್ಷಣ ಸಂಸ್ಥೆಯ ರಾಷ್ಟ್ರೀಯ ಸೇವಾ ಯೋಜನೆಯ ಒಟ್ಟು 50 ಶಿಬಿರಾರ್ಥಿಗಳು 7 ದಿನಗಳ ಕಾಲ ಶಿಬಿರ ಹಮ್ಮಿಕೊಂಡಿದ್ದರು. ಶಿಕ್ಷಣ ಸಂಸ್ಥೆಯ ನಿರ್ದೇಶಕ ಡಾ.ಎಂ.ಕೆ.ಪಾರ್ಥ, ಪ್ರಾಂಶುಪಾಲ ಅರುಣ್ ಕುಮಾರ್, ಗಣೇಶ್, ಶೀಲಾ, ನೀರಜ್, ಲೋಕೇಶ್, ಲಕ್ಷ್ಮಿದೇವಿ, ರುದ್ರೇಶ್ ಇತರರಿದ್ದರು.

### ಭಾರತೀಯ ಅಂತರಿಕ್ಷ ನಿಲ್ದಾಣದ ಮಾದರಿ ಅನಾವರಣ ಮಾಡಿದ ಇಸ್ರೋ

• ಪ್ರಜೋದಯ ವರದಿ

**ನವದೆಹಲಿ:** ಇಲ್ಲಿ ಆರಂಭಗೊಂಡಿರುವ ರಾಷ್ಟ್ರೀಯ ಬಾಹ್ಯಾಕಾಶ ದಿನದ ಆಚರಣೆಯಲ್ಲಿ ಇಸ್ರೊ, ಭಾರತೀಯ ಅಂತರಿಕ್ಷ ನಿಲ್ದಾಣ (ಬಿಎಎಸ್)ದ ಮಾದರಿಯನ್ನು ಶುಕ್ರವಾರ ಅನಾವರಣಗೊಳಿಸಿತು. 2028ರ ವೇಳೆಗೆ ಅಂತರಿಕ್ಷದಲ್ಲಿ ತನ್ನದೇ ನಿಲ್ದಾಣ ಹೊಂದುವ ಯೋಜನೆ ಭಾರತದ್ದು.

ಪ್ರಸ್ತುತ ಎರಡು ಅಂತರರಾಷ್ಟ್ರೀಯ ಪ್ರಯೋಗಾಲಯಗಳಿವೆ. ಅವುಗಳೆಂದರೆ ಇಸ್ರೊ ಸೇರಿ ಐದು ಬಾಹ್ಯಾಕಾಶ ಸಂಸ್ಥೆಗಳು ನಿರ್ಮಿಸಿರುವ ಅಂತರರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣ ಮತ್ತು ಚೀನಾದ ಟಿಯಾಂಗಾಂಗ್ ಬಾಹ್ಯಾಕಾಶ ನಿಲ್ದಾಣ. 2035ರ ವೇಳೆ ಐದು ಮಾಡ್ಯೂಲ್‌ಗಳ ಭಾರತೀಯ ಅಂತರಿಕ್ಷ ನಿಲ್ದಾಣ ಹೊಂದುವ ಗುರಿಯನ್ನು ಇಟ್ಟುಕೊಂಡಿದೆ. ಬಿಎಎಸ್–01 ಮಾಡ್ಯೂಲ್ 10 ಟನ್ ತೂಕ ಇರುವ ನಿರೀಕ್ಷೆ ಇದ್ದು, ಭೂಮಿಯಿಂದ 450 ಎತ್ತರದ ಕಕ್ಷೆಯಲ್ಲಿ ಸ್ಥಾಪನೆಯಾಗುವ ಸಾಧ್ಯತೆಯಿದೆ.

ಬಾಹ್ಯಾಕಾಶ, ಜೀವವಿಜ್ಞಾನ, ವೈದ್ಯಕೀಯ, ಅಂತರಗ್ರಹ ಪರಿಶೋಧನೆ ಸೇರಿ ವಿವಿಧ ದೃಷ್ಟಿ ಕೋನದಲ್ಲಿ ಅಧ್ಯಯನ ನಡೆಸಲು ಈ ವೇದಿಕೆ ನೆರವಾಗಲಿದೆ. ಮಾನವನ ಆರೋಗ್ಯದ ಮೇಲೆ ಸೂಕ್ಷ್ಮ ಗುರುತ್ವದ ಪ್ರಭಾವ ಮತ್ತು ಬಾಹ್ಯಾಕಾಶದಲ್ಲಿ ಮಾನವ ಹೆಚ್ಚು ಕಾಲ ಇರಲು ಅಗತ್ಯ ವಾದ ತಂತ್ರಜ್ಞಾನದ ಪರೀಕ್ಷೆ ನಡೆಸಲು ಈ ನಿಲ್ದಾಣ ಅವಕಾಶ ಒದಗಿಸಲಿದೆ ಎನ್ನಲಾಗಿದೆ.




# ಸತತ ಪರಿಶ್ರಮದಿಂದ ಯಶಸ್ಸು ಸಾಧ್ಯ: ಪ್ರತಿಭಾ ಮಂಜುನಾಥ್

• ಪ್ರಜೋದಯ ವರದಿ

**ಸಕಲೇಶಪುರ:** ಕ್ರೀಡೆ ಎಂದರೆ ಕೇವಲ ಸೋಲು-ಗೆಲುವು ಅಲ್ಲ. ಶಿಸ್ತು, ಸಹಕಾರ ಮತ್ತು ಆರೋಗ್ಯಕರ ಬದುಕಿನ ಪಾಠ ಕಲಿಸುವ ದೊಡ್ಡ ಪಠ್ಯವೆಂದು ಶಾಸಕ ಸಿಮೆಂಟ್ ಮಂಜು ಅವರ ಧರ್ಮಪತ್ನಿ ಪ್ರತಿಭಾ ಮಂಜುನಾಥ್ ಅವರು ಹೇಳಿದರು.

ಶುಕ್ರವಾರ ಪಟ್ಟಣದ ಸುಭಾಷ್ ಮೈದಾನದಲ್ಲಿ ಸಾರ್ವಜನಿಕ ಶಿಕ್ಷಣ ಇಲಾಖೆ ಹಾಗು ಬಾಳ್ಳುಪೇಟೆ ರಂಗನಾಥ ಪ್ರೌಢಶಾಲೆ ವತಿಯಿಂದ ನಡೆದ ಬೆಳಗೋಡು ಹೋಬಳಿ ಮಟ್ಟದ ಕ್ರೀಡಾಕೂಟ ಉದ್ಘಾಟಿಸಿ ಮಾತನಾಡಿ, ನಮ್ಮ ಸರ್ಕಾರಿ ಶಾಲೆಗಳಲ್ಲಿ ಓದುತ್ತಿರುವ ವಿದ್ಯಾರ್ಥಿಗಳು ಹಳ್ಳಿಯ ಬಡವರ ಮಕ್ಕಳು ಮಾತ್ರವಲ್ಲ, ಮುಂದಿನ ದಿನಗಳಲ್ಲಿ ದೇಶವನ್ನು ಮುನ್ನಡೆಸುವ ನಾಯಕರು. ನಮ್ಮಲ್ಲಿ ಅನೇಕರು ಕ್ರೀಡೆಗಳ ಮೂಲಕ ರಾಜ್ಯ, ರಾಷ್ಟ್ರ, ಅಂತರ ರಾಷ್ಟ್ರೀಯ ಮಟ್ಟದ ಪಂದ್ಯಾವಳಿಯಲ್ಲಿ ಸ್ಪರ್ಧಿಸುವ ಸಾಮರ್ಥ್ಯ ಹೊಂದಿದ್ದಾರೆ. ಆದ್ದರಿಂದ ಇಂದಿನ ಕೂಟವು ಕೇವಲ ಕ್ರೀಡಾಕೂಟವಲ್ಲ, ಅದು ನಿಮ್ಮ ಭವಿಷ್ಯದ ಹೆಜ್ಜೆಗುರುತಾಗಿದೆ ಎಂದರು.

ಶಿಕ್ಷಕರು ವಿದ್ಯಾರ್ಥಿಗಳಿಗೆ ವಿದ್ಯಾಭ್ಯಾಸ ಕಲಿಸುವುದಷ್ಟೇ ಅಲ್ಲ, ಕ್ರೀಡೆಗೂ ಪ್ರೋತ್ಸಾಹ ನೀಡುತ್ತಿದ್ದಾರೆ. ಅವರಿಗೆ ನನ್ನ ಹೃತ್ಪೂರ್ವಕ ಅಭಿನಂದನೆಗಳು. ಪೋಷಕರು ಮಕ್ಕಳಿಗೆ ಬೇಕಾದ ಉತ್ತೇಜನ ನೀಡುತ್ತಿರುವುದು ಸಂತೋಷದ ವಿಚಾರ. ಶಾಸಕ ಸಿಮೆಂಟ್ ಮಂಜು ಅವರು ಸರ್ಕಾರಿ ಶಾಲೆಗಳಿಗೆ ಕ್ರೀಡಾ ಸೌಲಭ್ಯ ಕಲ್ಪಿಸಲು ಕಂಕಣಬದ್ಧರಾಗಿ ಕೆಲಸ ಮಾಡುತ್ತಿದ್ದಾರೆ. ಮೈದಾನಗಳ ಅಭಿವೃದ್ಧಿ, ಕ್ರೀಡಾ ಸಾಮಾಗ್ರಿ, ಹಾಗು ತರಬೇತುದಾರರ ಕೊರತೆಯನ್ನು ನಿವಾರಿಸಲು ಪ್ರಯತ್ನಿಸುತ್ತಿದ್ದಾರೆ. ಹೋಬಳಿ ಯಿಂ ದಲೇ ಭವಿಷ್ಯದ ಒಲಿಂಪಿಕ್ ಕ್ರೀಡಾಪಟುಗಳು ಬರ ಬೇಕು ಎನ್ನುವುದು ನಮ್ಮ ಹಂಬಲ. ತಾಲ್ಲೂಕು ಮಲೆನಾಡು ಪ್ರದೇಶವಾದ್ದರಿಂದ ಮಳೆ ಹೆಚ್ಚಾಗಿ ರುತ್ತದೆ. ಆದ್ದರಿಂದ ಒಳಾಂಗಣ ಕ್ರೀಡಾಂಗಣ ನಿರ್ಮಾಣಕ್ಕೆ ಶಾಸಕರು ಉತ್ಸುಕರಾ ಗಿದ್ದಾರೆಂದು ತಿಳಿಸಿದರು.



ಕ್ಷೇತ್ರ ಶಿಕ್ಷಣಾಧಿಕಾರಿ ಪುಷ್ಪ ಅವರು ಮಾತನಾಡಿ, ವಿದ್ಯಾರ್ಥಿಗಳು ವಿದ್ಯಾಭ್ಯಾಸ ಹಾಗು ಕ್ರೀಡಾ ಕ್ಷೇತ್ರದಲ್ಲಿ ಯಶಸ್ಸು ಸಾಧಿಸಲು ಏಕಾಗ್ರತೆ ಅತ್ಯವಶ್ಯಕ. ಶಿಕ್ಷಣದೊಂದಿಗೆ ಕ್ರೀಡೆಗೂ ಸಮಾನ ಆದ್ಯತೆ ನೀಡಿದಾಗ ಮಾತ್ರ ಮಕ್ಕಳ ವ್ಯಕ್ತಿತ್ವ ವಿಕಸನವಾಗಲು ಸಾಧ್ಯವಾಗುತ್ತದೆಂದರು.

ಬೆಳಗೋಡು ಹೋಬಳಿ ವ್ಯಾಪ್ತಿಯ ಸರ್ಕಾರಿ, ಅನುದಾನಿತ ಹಾಗು ಅನುದಾನ ರಹಿತ 9 ಶಾಲೆಯ ವಿದ್ಯಾರ್ಥಿಗಳುಕ್ರೀಡಾಕೂಟದಲ್ಲಿ ಭಾಗವಹಿಸಿದ್ದರು.

ದೈಹಿಕ ಶಿಕ್ಷಣ ಪರಿವೀಕ್ಷಕ ಕುಶ್ವಂತ್, ಕಟ್ಟೆಗದ್ದೆ ನಾಗರಾಜ್, ಬಾಳ್ಳುಪೇಟೆ ವಿನಾಯಕ ಬಡಾವಣೆ ಅಧ್ಯಕ್ಷ ನಂಜುಂಡಸ್ವಾಮಿ, ಗ್ರಾಮಸ್ಥರಾದ ಪ್ರಕಾಶ್, ಜಗದೀಶ್, ರಂಗನಾಥ ಪ್ರೌಢಶಾಲೆ ಮುಖ್ಯ ಶಿಕ್ಷಕಿ ಲಲಿತ, ಕರುಣಾಕರ್, ರವೀಂದ್ರ, ಅನಿಲ್, ಮೊಗಪ್ಪಗೌಡ ಇತರರಿದ್ದರು.

# ಆರ್‌ಸಿಬಿ ಕಾಲ್ತುಳಿತ : ಬೆಂಗಳೂರು ಪಂದ್ಯಗಳು ಬೇರೆಡೆಗೆ

## ಮಹಿಳಾ ವಿಶ್ವಕಪ್: ಸೆ.30ರಿಂದ ನ.2ರವರೆಗೆ | ಕೊಲಂಬೊದಲ್ಲಿ ಭಾರತ-ಪಾಕ್ ಪಂದ್ಯ

• ಪ್ರಜೋದಯ ವರದಿ

**ನವದೆಹಲಿ:** ಮಹಿಳೆಯರ ಏಕದಿನ ಕ್ರಿಕೆಟ್ ವಿಶ್ವಕಪ್ ಟೂರ್ನಿಯ ಪರಿಷ್ಕೃತ ವೇಳಾ ಪಟ್ಟಿಯನ್ನು ಅಂತರರಾಷ್ಟ್ರೀಯ ಕ್ರಿಕೆಟ್ ಮಂಡಳಿ (ಐಸಿಸಿ) ಶುಕ್ರವಾರ ಪ್ರಕಟಿಸಿದೆ. ದಿನಾಂಕಗಳು ಬದಲಾಗಿಲ್ಲ. ಆದರೆ, ಬೆಂಗಳೂರಿನಲ್ಲಿ ನಿಗದಿಯಾಗಿದ್ದ ಎಲ್ಲಾ ಪಂದ್ಯಗಳನ್ನು ಬೇರೆ ನಗರಗಳಿಗೆ ಸ್ಥಳಾಂತರಿಸಲಾಗಿದೆ.

ಇಂಡಿಯನ್ ಪ್ರೀಮಿಯರ್ ಲೀಗ್ (ಐಪಿಎಲ್) 18ನೇ ಆವೃತ್ತಿಯಲ್ಲಿ ಚಾಂಪಿಯನ್ ಪಟ್ಟಕ್ಕೇರಿದ್ದ ರಾಯಲ್ ಚಾಲೆಂಜರ್ಸ್ ಬೆಂಗಳೂರು (ಆರ್‌ಸಿಬಿ) ವಿಜಯೋತ್ಸವದ ವೇಳೆ ಬೆಂಗಳೂರಿನ ಎಂ.ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಜೂನ್ 4ರಂದು ಕಾಲ್ತುಳಿತ ಸಂಭವಿಸಿತ್ತು. ಆ ವೇಳೆ 11 ಮಂದಿ ಮೃತಪಟ್ಟು, ಸಾಕಷ್ಟು ಜನರು ಗಾಯಗೊಂಡಿದ್ದರು. ಹೀಗಾಗಿ, ಬೆಂಗಳೂರಲ್ಲಿ ನಡೆಯಬೇಕಿದ್ದ ಪಂದ್ಯಗಳನ್ನು ಬೇರೆಡೆಗೆ ಸ್ಥಳಾಂತರಿಸುವ ಕ್ರಮ ಕೈಗೊಳ್ಳಲಾಗಿದೆ.



ಟೂರ್ನಿಯು ಸೆಪ್ಟೆಂಬರ್ 30ರಿಂದ ನವೆಂಬರ್ 2ರವರೆಗೆ ನಡೆಯಲಿದೆ. ಉದ್ಘಾಟನೆ ಹಾಗೂ ಫೈನಲ್ ಪಂದ್ಯ ಸೇರಿ ಒಟ್ಟು ಐದು ಪಂದ್ಯಗಳು ಬೆಂಗಳೂರಿನಲ್ಲಿ ನಿಗದಿಯಾಗಿದ್ದವು. ಸೆಪ್ಟೆಂಬರ್ 30ರಂದು ನಡೆಯಬೇಕಿದ್ದ ಭಾರತ ಹಾಗೂ ಶ್ರೀಲಂಕಾ ನಡುವಣ ಉದ್ಘಾಟನಾ ಪಂದ್ಯ, ಅಕ್ಟೋಬರ್ 3ರಂದು ನಿಗದಿಯಾಗಿದ್ದ ಇಂಗ್ಲೆಂಡ್ ಹಾಗೂ ದಕ್ಷಿಣ ಆಫ್ರಿಕಾ ಪಂದ್ಯಗಳು ಅದೇ ದಿನಗಳಲ್ಲಿ ಗುವಾಹಟಿಯಲ್ಲಿ ಆಯೋಜನೆಗೊಳ್ಳಲಿವೆ. ಅಕ್ಟೋಬರ್ 26ರಂದು ನಡೆಯುವ ಭಾರತ ಮತ್ತು ಬಾಂಗ್ಲಾದೇಶ ಪಂದ್ಯ ಹಾಗೂ ಅಕ್ಟೋಬರ್ 30 ನಿಗದಿಯಾಗಿರುವ ಎರಡನೇ ಸೆಮಿಫೈನಲ್ ಪಂದ್ಯ ನವಿ ಮುಂಬೈಗೆ ಹೋಗಿವೆ.

ಒಂದು ವೇಳೆ ಪಾಕಿಸ್ತಾನ ಫೈನಲ್ ತಲುಪದಿದ್ದರೆ, ಅಂತಿಮ ಹಣಾಹಣಿಯೂ ಬೆಂಗಳೂರಿನಲ್ಲೇ (ನವೆಂಬರ್ 2ರಂದು) ನಡೆಯಬೇಕಿತ್ತು. ಆದರೆ, ಇದೀಗ ಆ ಪಂದ್ಯವನ್ನೂ ನವಿ ಮುಂಬೈಗೆ ಸ್ಥಳಾಂತರಿಸಲಾಗಿದೆ. ಪಾಕ್ ಪ್ರಶಸ್ತಿ ಸುತ್ತಿಗೆ ತಲುಪಿದರೆ ಶ್ರೀಲಂಕಾದ ಕೊಲಂಬೊದಲ್ಲಿ ಪಂದ್ಯ ನಡೆಯಲಿದೆ.

**ಕೊಲಂಬೊದಲ್ಲಿ ಭಾರತ-ಪಾಕಿಸ್ತಾನ ಪಂದ್ಯ**

ಈ ವರ್ಷದ ಆರಂಭದಲ್ಲಿ ನಡೆದ ಐಸಿಸಿ ಚಾಂಪಿಯನ್ಸ್ ಟ್ರೋಫಿ ವೇಳೆ ಭಾರತ ತಂಡ, ಆತಿಥೇಯ ಪಾಕಿಸ್ತಾನಕ್ಕೆ ಹೋಗಲು ನಿರಾಕರಿಸಿತ್ತು. ಹಾಗಾಗಿ, ಪುರುಷರ ಮತ್ತು ಮಹಿಳಾ ವಿಭಾಗದ ಪ್ರಮುಖ ಟೂರ್ನಿಗಳಿಗೆ ಹೈಬ್ರಿಡ್ ಮಾದರಿ ಅನುಸರಿಸಲು ಉಭಯ ತಂಡಗಳು ಒಪ್ಪಿದ್ದವು. ಅದರಂತೆ, ಭಾರತ ಆತಿಥ್ಯ ವಹಿಸಿರುವ ಈ ಟೂರ್ನಿಗೆ ಕೊಲಂಬೊವನ್ನು ತಟಸ್ಥ ತಾಣವಾಗಿ ಆಯ್ಕೆ ಮಾಡಲಾಗಿದೆ. ಪಾಕ್ ಪಡೆ ಗುಂಪು ಹಂತದಲ್ಲಿ ಒಟ್ಟು 7 ಪಂದ್ಯಗಳನ್ನು ಆಡಲಿದ್ದು, ಎಲ್ಲವೂ ಕೊಲಂಬೊದಲ್ಲೇ ನಡೆಯಲಿವೆ. ಭಾರತ ಹಾಗೂ ಪಾಕ್ ನಡುವಣ ಪಂದ್ಯವು ಅ.5ರಂದು ನಿಗದಿಯಾಗಿದೆ.

### ಪೌರ ಕಾರ್ಮಿಕರಿಗೆ ಸಂಸದರಿಂದ ಬಾಗಿನ



• ಪ್ರಜೋದಯ ವರದಿ

**ಹಾಸನ:** ಗೌರಿ-ಗಣೇಶ ಹಬ್ಬದ ಅಂಗವಾಗಿ ಸಂಸದ ಶ್ರೇಯಸ್ ಪಟೇಲ್ ಅವರು ಶುಕ್ರವಾರ ಮಹಾನಗರ ಪಾಲಿಕೆಯ ಕುವೆಂಪು ಸಭಾಂಗಣದಲ್ಲಿ ಎಲ್ಲಾ ಪೌರಕಾರ್ಮಿಕರಿಗೆ ಬಾಗಿನ ನೀಡಿ ಗೌರವಿಸಿದರು.

ನಂತರ ಮಾತನಾಡಿದ ಅವರು, ಗೌರಿ ಹಬ್ಬದ ಸಂದರ್ಭದಲ್ಲಿ ವಿಶೇಷವಾಗಿ ಹೆಣ್ಣು ಮಕ್ಕಳಿಗೆ ಬಾಗಿನ ಕೊಡುವುದಕ್ಕೆ ನಮ್ಮ ಹಿಂದೂ ಸಂಪ್ರದಾಯದಲ್ಲಿ ಅದರದೇ ಆದ ಗೌರವ, ಮಹತ್ವ ಇದೆ. ಅದೇ ಕಾರಣಕ್ಕೆ ಎಲ್ಲಾ ಸಂದರ್ಭದಲ್ಲೂ ನಗರದ ಸ್ವಚ್ಛತೆಗೆ ಶ್ರಮಿಸುವ ಪೌರ ಕಾರ್ಮಿಕರಿಗೆ ಇಂದು ಬಾಗಿನ ನೀಡಿ ಗೌರವಿಸಲಾಗಿದೆ ಎಂದರು.

ನಗರದ ಸ್ವಚ್ಛತೆಗೆ ಪೌರಕಾರ್ಮಿಕರ ಸಹಕಾರ ಹೆಚ್ಚಿದೆ. ನಿಮ್ಮ ಕಷ್ಟ ಸುಖಗಳಲ್ಲಿ ಸದಾ ಕಾಲ ನಾನಿರುತ್ತೇನೆ. ಪೌರ ಕಾರ್ಮಿಕರಿಗೆ ನಿವೇಶ ಮತ್ತು ಮನೆಗಳನ್ನು ನೀಡುವ ಬಗ್ಗೆ ಕಳೆದ ಸಭೆಯಲ್ಲಿ ಚರ್ಚೆಯಾಗಿದೆ. ಹಂತ ಹಂತವಾಗಿ ವಿತರಣೆ ಮಾಡಲು ಕ್ರಮ ಕೈಗೊಳ್ಳಲಾಗುವುದೆಂದು ಹೇಳಿದರು. ಈ ವೇಳೆ ನಗರಪಾಲಿಕೆ ಆಯುಕ್ತ ಕೃಷ್ಣ ಮೂರ್ತಿ, ಅಧಿಕಾರಿಗಳು ಹಾಜರಿದ್ದರು.

### ಚಿಲ್ಲರೆ ಅಂಗಡಿ ಶೀಟ್ ಮುರಿದು ಕಳವು

**ಹಾಸನ:** ಚಿಲ್ಲರೆ ಅಂಗಡಿಯ ಮೇಲ್ಭಾಗದ ಶೀಟ್ ತೆಗೆದು ಒಳನುಗ್ಗಿರುವ ಕಳ್ಳರು 38,500 ರೂ. ಮೌಲ್ಯದ ಸಾಮಾಗ್ರಿ ಕದ್ದಿರುವ ಘಟನೆ ತಾಲ್ಲೂಕಿನ ಮಾರಿಗುಡಿಕೊಪ್ಪಲು ಗ್ರಾಮದಲ್ಲಿ ನಡೆದಿದೆ. ಗ್ರಾಮದ ಕೆ.ಕೃಷ್ಣ ಅವರು ಗ್ರಾಮದ ಆರ್ಚ್ ಸಮೀಪ ಮಳಿಗೆಯಲ್ಲಿ ಒಂದು ಚಿಲ್ಲರೆ ಅಂಗಡಿ ಇಟ್ಟುಕೊಂಡಿ ದ್ದಾರೆ. ಆ.20ರ ರಾತ್ರಿ ಶೀಟ್ ಮುರಿದು ಡ್ರಾಯರ್‌ನಲ್ಲಿಟ್ಟಿದ್ದ 8,500 ರೂ., ಸಿಗರೇಟು ಪ್ಯಾಕ್, 5 ಎಣ್ಣೆ ಡಬ್ಬಿ, ಹಾರ್ಲಿಕ್ಸ್ ಬಾಟಲಿ ಸೇರಿ 38,500 ರೂ. ಬೆಲೆಯ ದಿನಸಿ ಸಾಮಾಗ್ರಿ ಕಳವು ಮಾಡಿದ್ದಾರೆ.

## ಆ.11ರ ಆದೇಶಕ್ಕೆ ದೇಶಾದ್ಯಂತ ವಿರೋಧ | ಮಹತ್ವದ ಆದೇಶ ಹೊರಡಿಸಿದ ನ್ಯಾಯಾಲಯ

# ಬೀದಿ ನಾಯಿ ಪ್ರಕರಣ: ತೀರ್ಪಿನಲ್ಲಿ ಮಾರ್ಪಾಡು ಮಾಡಿದ ಸುಪ್ರೀಂ

• ಪ್ರಜೋದಯ ವರದಿ

**ನವದೆಹಲಿ:** ದೆಹಲಿ ಮತ್ತು ಎನ್‌ಸಿಆರ್ ಪ್ರದೇಶದಲ್ಲಿರುವ ಬೀದಿ ನಾಯಿಗಳನ್ನು ಹಿಡಿದು ಆಶ್ರಯ ತಾಣಗಳಿಗೆ ಕಳುಹಿಸುವಂತೆ ಆ.11ರ ತನ್ನ ಆದೇಶವನ್ನು ಮಾರ್ಪಾಡು ಮಾಡಿರುವ ಸುಪ್ರೀಂ ಕೋರ್ಟ್, ಶುಕ್ರವಾರ ಹೊಸ ಆದೇಶ ಪ್ರಕಟಿಸಿದೆ.

ದೆಹಲಿ ಹಾಗು ಎನ್‌ಸಿಆರ್‌ನಲ್ಲಿರುವ ಬೀದಿ ನಾಯಿಗಳನ್ನು ಹಿಡಿದು ಅವುಗಳಿಗೆ ಸಂತಾನ ಹರಣ ಶಸ್ತ್ರ ಚಿಕಿತ್ಸೆ ನಡೆಸಬೇಕು. ರೇಬಿಸ್ ನಿರೋಧಕ ಚುಚ್ಚುಮದ್ದು ನೀಡಬೇಕು. ಒಂದೊಮ್ಮೆ ಅವುಗಳಿಗೆ ರೇಬಿಸ್ ಸೋಂಕು ತಗುಲಿಲ್ಲವಾದರೆ ಮತ್ತು ಅವು ಕಚ್ಚುವ ಸ್ವಭಾವದವಲ್ಲ ಎಂದು ಖಾತ್ರಿಯಾದರೆ ಮಾತ್ರ ಹೊರಗೆ ಬಿಡಬೇಕೆಂದು ಹೇಳಿದೆ.

ನಾಯಿಗಳಿಗೆ ಆಹಾರವನ್ನು ಬೇಕಾಬಿಟ್ಟಿಯಾಗಿ ಬಿಸಾಡದೆ, ಅದಕ್ಕಾಗಿ ನಿರ್ದಿಷ್ಟ ಸ್ಥಳವನ್ನು ಸ್ಥಳೀಯ ಆಡಳಿತ ಗುರುತಿಸಬೇಕು. ಇದು ಆಯಾ ಬಡಾವಣೆಯ ಜನವಸತಿ ಪ್ರದೇಶ, ಬೀದಿ ನಾಯಿಗಳ ಸಂಖ್ಯೆಗೆ ಅನುಗುಣವಾಗಿರಬೇಕೆಂದು ನ್ಯಾಯಾಲಯ ಹೇಳಿದೆ.



ಬೀದಿ ನಾಯಿಗಳನ್ನು ಸ್ಥಳಾಂತರಿಸುವಂತೆ ಸುಪ್ರೀಂ ಕೋರ್ಟ್ ನಿರ್ದೇಶನ ನೀಡಿತ್ತು. ಅದಕ್ಕೆ ದೇಶದಾದ್ಯಂತ ಭಾರೀ ವಿರೋಧ ವ್ಯಕ್ತವಾಗಿತ್ತು. ಅದರ ಬೆನ್ನಲ್ಲೇ ಹೊಸ ಆದೇಶವನ್ನು ಹೊರಡಿಸಿದೆ. ಬೀದಿ ನಾಯಿಗಳನ್ನು ಸ್ಥಳಾಂತರಿಸುವಂತೆ ಸುಪ್ರೀಂ ಆಗಸ್ಟ್ 11ರಂದು ನೀಡಿದ್ದ ನಿರ್ದೇ ಶನವನ್ನು ತಾತ್ಕಾಲಿಕವಾಗಿ ಅಮಾನತಿನಲ್ಲಿಡಲಾಗಿದೆ. ಜನಸಂಖ್ಯೆ ಮತ್ತು ಬೀದಿ ನಾಯಿಗಳ ಸಂಖ್ಯೆ ಆಧರಿಸಿ ಆಹಾರ ನೀಡುವ ಪ್ರದೇಶಗಳನ್ನು ಸ್ಥಳೀಯ ಸಂಸ್ಥೆಗಳು ರಚಿಸಬೇಕು. ಬೀದಿ ನಾಯಿಗಳಿಗೆ ಬೀದಿಗಳಲ್ಲಿ ಆಹಾರ ನೀಡಬಾರದು. ಆಹಾರ ನೀಡುವುದಕ್ಕೆ ಗೊತ್ತುಪಡಿಸಿದ ಸ್ಥಳಗಳಲ್ಲಿ ಸೂಚನಾ ಫಲಕ ಇಡಬೇಕು. ಬೀದಿಗಳಲ್ಲಿ ನಾಯಿಗಳಿಗೆ ಆಹಾರ ನೀಡುತ್ತಿರುವುದು ಕಂಡುಬಂದರೆ ಅಂತಹ ವ್ಯಕ್ತಿಯ ವಿರುದ್ಧ ಕಾನೂನು ಅಡಿಯಲ್ಲಿ ಕ್ರಮ ಜರಗಿಸಲಾಗುವುದು. ಅದರ ವ್ಯಾಪ್ತಿಯನ್ನು ಇಡೀ ದೇಶಕ್ಕೆ ವಿಸ್ತರಿಸುವ ಬಗ್ಗೆ ಎಲ್ಲಾ ರಾಜ್ಯ ಹಾಗು ಕೇಂದ್ರಾಡಳಿತ ಪ್ರದೇಶಗಳನ್ನು ಈ ಪ್ರಕರಣದಲ್ಲಿ ಪಕ್ಷಗಾರರನ್ನಾಗಿಸಿ, ದೇಶದ ವಿವಿಧ ಹೈಕೋರ್ಟ್‌ಗಳಲ್ಲಿ ವಿಚಾರಣೆಗೆ ಬಾಕಿ ಇರುವ ಬೀದಿ ನಾಯಿಗಳ ಕುರಿತು ಪ್ರಕರಣಗಳನ್ನು ಸುಪ್ರೀಂ ಕೋರ್ಟ್ ತನಗೆ ವರ್ಗಾಯಿಸಿಕೊಂಡಿತು.

**ತೀರ್ಪು ಸ್ವಾಗತಿಸಿದ ರಾಹುಲ್ ಗಾಂಧಿ**

ಬೀದಿ ನಾಯಿಗಳನ್ನು ಹಿಡಿದು ಅಶ್ರಯತಾಣಗಳಿಗೆ ಕಳುಹಿಸುವಂತೆ ಈ ಹಿಂದೆ ಆದೇಶಿಸಿದ್ದ ತೀರ್ಪಿನ ಮರು ಪರಿಶೀಲನೆ ಮಾಡಿರುವ ಸುಪ್ರೀಂ ಕೋರ್ಟ್ ಕ್ರಮವನ್ನು ವಿಪಕ್ಷ ನಾಯಕ ರಾಹುಲ್ ಗಾಂಧಿ ಅವರು ಸ್ವಾಗತಿಸಿದ್ದಾರೆ. ಇದು ಪ್ರಾಣಿಗಳ ಮತ್ತು ಸಾರ್ವಜನಿಕರ ಸುರಕ್ಷತೆಯ ನಿಟ್ಟಿನಲ್ಲಿ ತೆಗೆದುಕೊಂಡಿರುವ ಪ್ರಗತಿಪರ ಹೆಜ್ಜೆ. ಸುಪ್ರೀಂ ಕೋರ್ಟ್‌ನ ಆದೇಶವು ಸಹಾನುಭೂತಿ ಮತ್ತು ವೈಜ್ಞಾನಿಕತೆಯಿಂದ ಕೂಡಿದೆ ಎಂದು ಸಾಮಾಜಿಕ ಜಾಲತಾಣ ಎಕ್ಸ್ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ.

### ವಲಯ ಮಟ್ಟದ ಕ್ರೀಡಾಕೂಟ : ಕಲ್ಲಹಳ್ಳಿ ಶಾಲೆಗೆ ಸಮಗ್ರ ಪ್ರಶಸ್ತಿ



• ಪ್ರಜೋದಯ ವರದಿ

**ಹಾಸನ:** ದಕ್ಷಿಣ ವಲಯ ತಾಲ್ಲೂಕು ಮಟ್ಟದ ಪ್ರೌಢಶಾಲಾ ಹಂತದ ಕ್ರೀಡಾಕೂಟದಲ್ಲಿ ಕಲ್ಲಹಳ್ಳಿ ಶಾಲೆಯ ಬಾಲಕಿಯರು 32 ಅಂಕಗಳೊಂದಿಗೆ ಪ್ರಥಮ ತಂಡವಾಗಿ ಸಮಗ್ರ ಪ್ರಶಸ್ತಿ ಪಡೆದಿದ್ದಾರೆ. ಕ್ರೀಡಾಕೂಟದಲ್ಲಿ 30 ಶಾಲೆಗಳು ಭಾಗವಹಿಸಿದ್ದವು. 3000 ಮೀ. ಓಟದಲ್ಲಿ ನಂದಿನಿ (ದ್ವಿತೀಯ), ಉದ್ದ ಜಿಗಿತ ತನುಶ್ರೀ (ದ್ವಿತೀಯ), ವಾಣಿಶ್ರೀ (ತೃತೀಯ), ಎತ್ತರ ಜಿಗಿತ ಮಾನಸ (ತೃತೀಯ), ತ್ರಿವಿಧ ಜಿಗಿತದಲ್ಲಿ ವಾಣಿಶ್ರೀ (ಪ್ರಥಮ), ತನುಶ್ರೀ (ದ್ವಿತೀಯ), ಭರ್ಜಿ ಎಸೆತದಲ್ಲಿ ಮಾನಸ (ದ್ವಿತೀಯ), ಚೈತ್ರ (ತೃತೀಯ) ಸ್ಥಾನ ತಮ್ಮದಾಗಿಸಿಕೊಂಡಿದ್ದಾರೆ.

4x100 ಮೀ. ರಿಲೇ ಓಟದಲ್ಲಿ ಶಶಿಕಲಾ, ಗಾನವಿ, ಮಾನ್ವಿ, ಮಾನಸ ತಂಡ ದ್ವಿತೀಯ, 4x400 ಮೀ. ರಿಲೇ ಓಟದಲ್ಲಿ ಶಶಿಕಲಾ, ಗಾನವಿ, ಮಾನ್ವಿ, ರಮ್ಯ ತಂಡ ಪ್ರಥಮ ಸ್ಥಾನ ಗಳಿಸಿದ್ದಾರೆ. ಬಾಲಕರ ವಿಭಾಗದಲ್ಲಿ 41 ಅಂಕ ಪಡೆಯುವುದರೊಂದಿಗೆ ಕೇವಲ 1 ಅಂಕದಿಂದ ಪ್ರಥಮ ಸ್ಥಾನ ಕೈತಪ್ಪಿ 2ನೇ ಸಮಗ್ರ ಪ್ರಶಸ್ತಿ ಪಡೆದ ಶಾಲೆಯಾಗಿ ಹೊರಹೊಮ್ಮಿದೆ.

400 ಮತ್ತು 800 ಮೀ. ಓಟದಲ್ಲಿ ಧನುಷ್ (ತೃತೀಯ), 3000 ಮೀ. ಓಟ ಸ್ಪರ್ಧೆಯಲ್ಲಿ ಪವನ್ (ಪ್ರಥಮ), ನವೀನ್ (ತೃತೀಯ), ತ್ರಿವಿಧ ಜಿಗಿತ ಪವನ್ (ತೃತೀಯ), ಗುಂಡು ಎಸೆತದಲ್ಲಿ ಗಗನ್ (ಪ್ರಥಮ), ಭರ್ಜಿ ಎಸೆತ ದೀಕ್ಷಿತ್ (ಪ್ರಥಮ), ಅಶೋಕ್ (ದ್ವಿತೀಯ), ಉದ್ದ ಜಿಗಿತದಲ್ಲಿ ದೀಕ್ಷಿತ್ (ದ್ವಿತೀಯ), ಎತ್ತರ ಜಿಗಿತ ದೀಕ್ಷಿತ್ (ಪ್ರಥಮ), ಹ್ಯಾಮರ್ ಎಸೆತದಲ್ಲಿ ಗುಣಶೇಖರ್ (ತೃತೀಯ) ಸ್ಥಾನ ಪಡೆದಿದ್ದಾರೆ. 4x100 ಮೀ. ರಿಲೇ ಓಟ ದೀಕ್ಷಿತ್, ಪವನ್, ಗಗನ್, ಅಶೋಕ್ ತಂಡ ಪ್ರಥಮ, 4x400 ಮೀ. ರಿಲೇಯಲ್ಲಿ ಗಗನ್, ಧನುಷ್, ಯುವರಾಜ್, ಪವನ್ ತಂಡ 3ನೇ ಸ್ಥಾನ ಪಡೆದಿದೆ. ಕ್ರೀಡಾಪಟುಗಳಿಗೆ ತರಬೇತಿ ನೀಡಿದ ದೈಹಿಕ ಶಿಕ್ಷಣ ಶಿಕ್ಷಕ ಕೆ.ಸಿ.ರಘು, ಮುಖ್ಯ ಶಿಕ್ಷಕಿ ಎ.ಎಸ್.ಉಮಾಮಣಿ ಅಭಿನಂದನೆ ಸಲ್ಲಿಸಿದ್ದಾರೆ.

ಪ್ರಜೋದಯ ದಿನಪತ್ರಿಕೆ, ಸಂಪಾದಕ, ಪ್ರಕಾಶಕ ಮತ್ತು ಮುದ್ರಕರು, ಜೆ.ಆರ್.ಕೆಂಚೇಗೌಡ, ಗಂಧದ ಕೋಠಿ ಹಿಂಭಾಗ, ಕೆ.ಆರ್.ಪುರಂ.ಹಾಸನ. ದೂರವಾಣಿ : 08172-231188, ಮೊ: 9449203019

C M Y K
C M Y K
C M Y K
C M Y K